Volume : 9 | Issue : 211 | November : 12, 2026 : Thursday

ಸಂಪುಟ : 9 | ಸಂಚಿಕೆ : 211 | ನವಂಬರ್ : 12, 2026 : ಗುರುವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI

PRGI NO: KARKAN/2018/78481



ದಕ್ಷಿಣ ಭಾರತದ ನಟಿ ಪ್ರಿಯಾಭವಾನಿ ಅವರು ತಮ್ಮ ಮದುವೆ ಸಂಭ್ರದಲ್ಲಿದ್ದು, ಸಾಮಾಜಿಕ ಜಾಲತಾಣದಲ್ಲಿ ಫೋಟೋಗಳನ್ನು ಹಂಚಿಕೊಂಡಿದ್ದಾರೆ. ಅವರು ತಮ್ಮ ಗೆಳೆಯ ರಾಜ್‌ವೇಲ್ ಅವರನ್ನು ಬುಧವಾರ ಚೆನ್ನೈನಲ್ಲಿ ವರಿಸಿದ್ದಾರೆ ಎಂದು ವರದಿಯಾಗಿದೆ.

‘ಶಕ್ತಿ’ಯಿಂದ ಹಾಸನಾಂಬೆ ದರ್ಶನಕ್ಕೆ ಭಕ್ತರ ಸಂಖ್ಯೆ ಐದು ಪಟ್ಟು ಹೆಚ್ಚಳ ಪುಟ 4

ಜ್ಞಾನ, ಸಾಧನೆ, ಸೇವೆಯ ಮೂಲಕ ಗ್ರಂಥಾಲಯ ಕ್ಷೇತ್ರದಲ್ಲಿ ಹೊಸ ಚೈತನ್ಯ ಮೂಡಿಸಿದ ಪ್ರೊ.ಪಿ.ವಿ. ಕೊಣ್ಣೂರು ಪುಟ 2



■ ಸುದ್ದಿ ಚುಟುಕು

7 ಮಂದಿ ಕೊಲೆ ತನಿಖೆ ಪ್ರಗತಿಯಲ್ಲಿ: ಕಮೀಷನರ್

● ವಿಕ್ರಮ ವಾಹಿನಿ । ಬೆಂಗಳೂರು

ರಾಜಾಜಿನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಒಂದೇ ಕುಟುಂಬದ ಏಳು ಮಂದಿಯ ಕೊಲೆ ಪ್ರಕರಣದ ತನಿಖೆ ಪ್ರಗತಿಯಲ್ಲಿದೆ ಎಂದು ನಗರ ಪೊಲೀಸ್ ಕಮಿಷನರ್ ಸೀಮಂತ್‌ಕುಮಾರ್ ಸಿಂಗ್ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಪ್ರಕರಣಕ್ಕೆ ಬೇಕಾದ ಅಗತ್ಯ ಸಾಕ್ಷ್ಯಾಧಾರಗಳನ್ನು ಕಲೆ ಹಾಕಿ ಬೇಗ ಚಾರ್ಜ್‌ಶೀಟ್ ಸಲ್ಲಿಸಲಾಗುವುದು ಎಂದು ಹೇಳಿದರು. ಆರೋಪಿಗೆ ಶಿಕ್ಷೆ ಕೊಡಿಸಲು ಫಾಸ್ಟ್‌ಟ್ರ್ಯಾಕ್ ಕೋರ್ಟ್ ತೆರೆಯುವಂತೆ ಸರ್ಕಾರಕ್ಕೆ ರಾಜ್ಯದ ಪೊಲೀಸ್ ಮಹಾನಿರ್ದೇಶಕರ ಮೂಲಕ ಮನವಿ ಮಾಡಲಾಗುವುದು.

ಕಾಣೆಯಾದ ಪ್ರಕರಣ ದಾಖಲಿಸಿಕೊಂಡ ಪೊಲೀಸರು ತೀವ್ರ ತನಿಖೆ ಕೈಗೊಂಡಾಗ ಏಳು ಮಂದಿಯ ಕೊಲೆ ಬೆಳಕಿಗೆ ಬಂತು. ನಾವು ಎಲ್ಲ ಏಳೂ ಶವಗಳನ್ನು ಪತ್ತೆಹಚ್ಚಿ ವಾರಸುದಾರರಿಗೆ ನೀಡಿದ್ದೇವೆ ಎಂದು ಹೇಳಿದರು. ಆರೋಪಿಯನ್ನು ತೀವ್ರ ವಿಚಾರಣೆಗೊಳಪಡಿಸಿ ಕೊಲೆಗೆ ಮೂಲ ಕಾರಣವೇನು ಎಂಬುದರ ಬಗ್ಗೆ ಮಾಹಿತಿ ಪಡೆದುಕೊಳ್ಳುತ್ತಿದ್ದೇವೆ ಎಂದು ಆಯುಕ್ತರು ತಿಳಿಸಿದರು.

ಬಿ-ಖರಾಬು ಹೊರತಾದ ಆಸ್ತಿಗಳಿಗೆ ಇ-ಸ್ವತ್ತು: ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಕಂದಾಯ ಭೂಮಿಯಲ್ಲಿ ನಿರ್ಮಾಣವಾಗಿರುವ ವಸತಿ ಬಡಾವಣೆಗಳಲ್ಲಿ ಬಿ-ಖರಾಬು ಇಲ್ಲ ಎಂಬುದನ್ನು ಖಚಿತಪಡಿಸಿಕೊಂಡು ಉಳಿದ ಆಸ್ತಿಗಳಿಗೆ ಇ-ಸ್ವತ್ತು ನೀಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.



ವಿಕಾಸ ಸೌಧದಲ್ಲಿ ಅಧಿಕಾರಿ ಗಳೊಂದಿಗೆ ಸಭೆ ನಡೆಸಿದ ಸಚಿವರು, ಭೂಪರಿವರ್ತನೆ ಆಗಿರುವ ಮತ್ತು ಭೂಪರಿ ವರ್ತನೆ ಆಗದೇ ಇರುವ ಕಂದಾಯ ಜಮೀನುಗಳಲ್ಲಿ ನೋಂದಾಯಿತ ಕ್ರಯಪತ್ರ ಹೊಂದಿರುವ ನಿವೇಶನ ಮತ್ತು ಮನೆ ಮಾಲೀಕರಿಗೆ ಇ-ಸ್ವತ್ತು ನೀಡುವ ಕುರಿತಂತೆ ಸುದೀರ್ಘ ಸಮಾಲೋಚಿಸಿದರು.

ಇಂತಹ ಸ್ವತ್ತುಗಳಲ್ಲಿ ಬಿ ಖರಾಬು, ಅರಣ್ಯ ಹಾಗೂ ಸರ್ಕಾರಿ ಭೂಮಿ ಇಲ್ಲ ಎಂಬುದನ್ನು ಖಚಿತಪಡಿಸಿಕೊಂಡು ಇ-ಸ್ವತ್ತು ನೀಡಲು ಕ್ರಮ ವಹಿಸುವಂತೆ ಹಾಗೂ ಬಿ ಖರಾಬು ಇರುವ ಭೂಮಿಗೆ ಸಂಬಂಧಿಸಿದಂತೆ ಸಮಸ್ಯೆ ಪರಿಹರಿಸಲು ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಲು ತಿಳಿಸಿದರು.

ಬೆಂಗಳೂರು ನಗರ ಜಿಲ್ಲಾ ಪಂಚಾಯತಿಯಲ್ಲಿ ಇ-ಸ್ವತ್ತಿಗಾಗಿ ಸಲ್ಲಿಸಿರುವ ಸುಮಾರು 1.30 ಲಕ್ಷ ಅರ್ಜಿಗಳು ತಾಂತ್ರಿಕ ಕಾರಣಗಳಿಂದ ಇತ್ಯರ್ಥವಾಗದೆ ಬಾಕಿ ಇದ್ದು, ಇವುಗಳ ತ್ವರಿತ ವಿಲೇವಾರಿಗೆ, ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಇಲಾಖೆಯ ಪ್ರಧಾನಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ, ಕಾರ್ಯದರ್ಶಿ ಡಿ. ರಂದೀಪ್, ಆಯುಕ್ತರಾದ ಫೌಜಿಯಾ ತರನ್ನುಮ್ ಬಿ., ವೆಂಕಟರಾಜು, ಸಿಇಓ ರಾಹುಲ್ ಶಿಂಧೆ ಮತ್ತಿತರರು ಭಾಗಿಯಾಗಿದ್ದರು.

ಗ್ರಾಹಕರು ಅಡವಿಟ್ಟಿದ್ದ 1.2 ಕೆಜಿ ಚಿನ್ನ ಕಳ್ಳತನ; ಬ್ಯಾಂಕ್ ಮೌಲ್ಯಮಾಪಕನ ಬಂಧನ

● ವಿಕ್ರಮ ವಾಹಿನಿ । ಬೆಂಗಳೂರು

ಗ್ರಾಹಕರು ಬ್ಯಾಂಕ್‌ನಲ್ಲಿ ಅಡಮಾನವಿಟ್ಟಿದ್ದ ಚಿನ್ನದ ಆಭರಣಗಳನ್ನು ಕದ್ದು, ನಕಲಿ ಆಭರಣಗಳನ್ನು ಬಳಸಿ ಮೋಸದಿಂದ ಚಿನ್ನದ ಸಾಲದ ಖಾತೆಗಳನ್ನು ತೆರೆದ ಆರೋಪದ ಮೇಲೆ ಬ್ಯಾಂಕ್‌ನ ಮೌಲ್ಯಮಾಪಕರೊಬ್ಬರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ.

ಬಂಧಿತನನ್ನು ದೊಡ್ಡಬಳ್ಳಾಪುರದ ನಿವಾಸಿ ಪವನ್ ಕುಮಾರ್ (30) ಎಂದು ಗುರುತಿಸಲಾಗಿದೆ. ಅಕ್ಟೋಬರ್ 9 ರಂದು ಬ್ಯಾಂಕ್‌ನ ಪ್ರಾದೇಶಿಕ ವ್ಯವಸ್ಥಾಪಕರು ರಾಜಾನುಕುಂಟೆ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ.

ಆರೋಪಿ ಇತರ ವ್ಯಕ್ತಿಗಳ ಹೆಸರಿನಲ್ಲಿ ಮೋಸದಿಂದ ಚಿನ್ನದ ಸಾಲದ ಖಾತೆಗಳನ್ನು ತೆರೆದು, ಆ ಖಾತೆಗಳಲ್ಲಿ ನಕಲಿ ಚಿನ್ನದ ಆಭರಣಗಳನ್ನು ಅಡಮಾನವಿಡುವ ಮೂಲಕ ಬ್ಯಾಂಕ್‌ಗೆ 35.40 ಲಕ್ಷ ರೂಪಾಯಿ ವಂಚಿಸಿದ್ದಾರೆ ಎಂದು ಪ್ರಾದೇಶಿಕ ವ್ಯವಸ್ಥಾಪಕರು ತಮ್ಮ ದೂರಿನಲ್ಲಿ ಆರೋಪಿಸಿದ್ದಾರೆ. ▶ 3ನೇ ಪುಟಕ್ಕೆ...

ಬೆಂಗಳೂರು ಮೆಟ್ರೋ ಜಾಲ 100 ಕಿ.ಮೀ. ಮೈಲುಗಲ್ಲು: 13ಕ್ಕೆ 7.5 ಕಿ.ಮೀ. ಪಿಂಕ್ ಲೈನ್ ವಿಸ್ತರಿತ ಮಾರ್ಗ ಉದ್ಘಾಟನೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜಧಾನಿ ಬೆಂಗಳೂರಿನ ಸಾರಿಗೆ ವ್ಯವಸ್ಥೆಗೆ ಮತ್ತೊಂದು ಮೈಲುಗಲ್ಲಾಗಲಿರುವ ‘ನಮ್ಮ ಮೆಟ್ರೋ’ ಪಿಂಕ್ ಲೈನ್ ಅನ್ನು 7.5 ಕಿಲೋಮೀಟರ್‌ಗಳ ಎತ್ತರಿಸಿದ ಮಾರ್ಗವು ಇದೇ ನವೆಂಬರ್ 13 ರಂದು ಪ್ರಧಾನಿ ನರೇಂದ್ರ ಮೋದಿ ಅವರಿಂದ ವಿದ್ಯುಕ್ತವಾಗಿ ಲೋಕಾರ್ಪಣೆಗೊಳ್ಳಲಿದೆ. ಕಾಳೇನ ಅಗ್ರಹಾರದಿಂದ – ತಾವರೆಕೆರೆ (ಸುದ್ದುಗುಂಟೆಪಾಳ್ಯ) ನಿಲ್ದಾಣದವರೆಗಿನ ಈ ಹೊಸ ಮಾರ್ಗವು ನವೆಂಬರ್ 14ರ ಬೆಳಿಗ್ಗೆ 6 ಗಂಟೆಯಿಂದ ಸಂಪೂರ್ಣವಾಗಿ ಸಾರ್ವಜನಿಕ ಸೇವೆಗೆ ಲಭ್ಯವಾಗಲಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಬುಧವಾರ ವಿಕಾಸಸೌಧದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, “ನವೆಂಬರ್ 13 ರಂದು ಮಧ್ಯಾಹ್ನ 12.30ಕ್ಕೆ ಡೈರಿ ಸರ್ಕಲ್ ಬಳಿಯ ಅಗ್ನಿಶಾಮಕ ದಳದ ಆವರಣಕ್ಕೆ ಆಗಮಿಸಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು, ಅಲ್ಲೇ ಸಮೀಪವಿರುವ ತಾವರೆಕೆರೆ ಸುದ್ದುಗುಂಟೆಪಾಳ್ಯ ಮೆಟ್ರೋ ನಿಲ್ದಾಣದಲ್ಲಿ ಈ ಹೊಸ 7.5 ಕಿ.ಮೀ. ಮಾರ್ಗಕ್ಕೆ ಚಾಲನೆ ನೀಡಲಿದ್ದಾರೆ.

ಉದ್ಘಾಟನೆಯ ನಂತರ ಪ್ರಧಾನಿಗಳು ರಾಜ್ಯಪಾಲರು ಹಾಗೂ ಮುಖ್ಯಮಂತ್ರಿಗಳು ಸೇರಿದಂತೆ ಹಲವು ಗಣ್ಯರು ಅದೇ ಮೆಟ್ರೋ ರೈಲಿನ ಮೂಲಕ ತಾವರೆಕೆರೆ ನಿಲ್ದಾಣದಿಂದ ಐಐಎಂಬಿ ನಿಲ್ದಾಣದವರೆಗೆ ಪ್ರಯಾಣಿಸಲಿದ್ದಾರೆ. ತದನಂತರ ಐಐಎಂಬಿ ಆಡಿಟೋರಿಯಂನಲ್ಲಿ ಆಯೋಜಿಸಲಾಗಿರುವ ಬೃಹತ್ ಸಭಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದ ಸುಗಮ ನಿರ್ವಹಣೆಗೆ ಪೊಲೀಸ್ ಇಲಾಖೆ, ಬಿಎಂಆರ್‌ಸಿಎಲ್, ಜಿಬಿಎ ಮತ್ತು ಲೋಕೋಪಯೋಗಿ ಇಲಾಖೆಗಳ ನಡುವೆ ಸೂಕ್ತ ಸಮನ್ವಯತೆ ಕಾಯ್ದುಕೊಳ್ಳಲು ಇಂದು ಸಭೆ ನಡೆಸಿ ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ” ಎಂದರು.

ನಗರದ ವಾಹನ ದಟ್ಟಣೆಗೆ ಮುಕ್ತಿ ಮತ್ತು ಸುಲಭ ಸಂಪರ್ಕ: ಪಿಂಕ್ ಲೈನ್ ನ ಈ ಆರಂಭಿಕ ಭಾಗವು ಬನ್ನೇರುಘಟ್ಟ ರಸ್ತೆಯ ಪ್ರಯಾಣಿಕರಿಗೆ ಸಾಕಷ್ಟು ಅನುಕೂಲವಾಗಲಿದೆ. ವಿಶೇಷವಾಗಿ, ಜಯದೇವ ಮೆಟ್ರೋ ನಿಲ್ದಾಣದಲ್ಲಿ ಎಲೆಕ್ಟ್ರಾನಿಕ್ ಸಿಟಿ ಮತ್ತು ಸಿಟಿ ಮಾರ್ಗಗಳಿಗೆ ಇಂಟರ್‌ಚೇಂಜ್ (ಸಂಪರ್ಕ) ಸೌಲಭ್ಯವಿರುವುದರಿಂದ, ಈ ಭಾಗದ ನಾಗರಿಕರು ಸಿಲ್ಕ್ ಬೋರ್ಡ್, ಹೆಚ್‌ಎಸ್‌ಆರ್ ಲೇಔಟ್, ಜಯನಗರ, ಮೆಜೆಸ್ಟಿಕ್ ಹಾಗೂ ವೈಟ್ ಫೀಲ್ಡ್ ಸೇರಿದಂತೆ ನಗರದ ಯಾವುದೇ ಭಾಗಕ್ಕೆ ಸುಲಭವಾಗಿ ಪ್ರಯಾಣಿಸಬಹುದು.

ಆರಂಭಿಕ ಹಂತದಲ್ಲಿ ಈ ಮಾರ್ಗದಲ್ಲಿ 5 ಮೀಸಲು ರೈಲುಗಳು ಕಾರ್ಯನಿರ್ವಹಿಸಲಿದ್ದು, ಪ್ರತಿ 8 ನಿಮಿಷಕ್ಕೊಂದು ರೈಲು ಸಂಚರಿಸಲಿದೆ. ಮುಂಬರುವ ದಿನಗಳಲ್ಲಿ ಪ್ರಯಾಣಿಕರ ದಟ್ಟಣೆ ಮತ್ತು ಸಿಗ್ನಲಿಂಗ್ ವ್ಯವಸ್ಥೆಯ ಸ್ಥಿರತೆಯನ್ನು ಗಮನಿಸಿ ಈ ಕಾಲಾವಧಿಯನ್ನು ಮತ್ತಷ್ಟು ಕಡಿಮೆ ಮಾಡುವ ಯೋಜನೆಯಿದೆ. ಈ 7.5 ಕಿ.ಮೀ ಮಾರ್ಗ ಸೇರ್ಪಡೆಯೊಂದಿಗೆ ಬೆಂಗಳೂರಿನ ಒಟ್ಟು ಮೆಟ್ರೋ ಜಾಲವು 103 ಕಿ.ಮೀ. ತಲುಪಲಿದ್ದು, ನಗರವು 100 ಕಿ.ಮೀ. ಗಡಿ ದಾಟಿದ ಐತಿಹಾಸಿಕ ಸಾಧನೆಗೆ ಪಾತ್ರವಾಗಿದೆ. ಅಲ್ಲದೆ, ಭವಿಷ್ಯದಲ್ಲಿ 400 ರಿಂದ 500 ಕಿಮೀ ಮೆಟ್ರೋ ಜಾಲ ಹೊಂದಬೇಕೆಂಬ ದೂರದೃಷ್ಟಿಗೂ ಇದೊಂದು ಮೈಲುಗಲ್ಲು ಎಂದರು.

ಮುಂದಿನ ಒಂದೂವರೆ ವರ್ಷದಲ್ಲಿ 170 ಕಿ.ಮೀ. ಮೆಟ್ರೋ ಜಾಲದ ಬೃಹತ್ ಯೋಜನೆಗಳು: ನಗರದಲ್ಲಿ ಮುಂದಿನ ಒಂದೂವರೆ ವರ್ಷದ ಅವಧಿಯಲ್ಲಿ ಮೆಟ್ರೋ ಜಾಲವನ್ನು 170 ಕಿ.ಮೀ.ಗೆ ವಿಸ್ತರಿಸುವ ಸ್ಪಷ್ಟ ಗುರಿಯನ್ನು ಸರ್ಕಾರ ಹೊಂದಿದೆ ಎಂದು ತಿಳಿಸಿದರು.

▶ 3ನೇ ಪುಟಕ್ಕೆ...

- ■ ಪ್ರಧಾನಿ ನರೇಂದ್ರ ಮೋದಿ ಅವರಿಂದ 7.5 ಕಿ.ಮೀ. ಎತ್ತರಿಸಿದ ಪಿಂಕ್ ಲೈನ್ ಮಾರ್ಗ ಶುಭಾರಂಭ
- ■ ನ.14ರಿಂದ ಸಾರ್ವಜನಿಕ ಸೇವೆಗೆ ಮುಕ್ತ; 8 ನಿಮಿಷಕ್ಕೊಂದು ರೈಲು ಸಂಚಾರ
- ■ ಮುಂದಿನ ಒಂದೂವರೆ ವರ್ಷದಲ್ಲಿ ಮೆಟ್ರೋ ಜಾಲ 170 ಕಿ.ಮೀ.ಗೆ ವಿಸ್ತರಿಸುವ ಗುರಿ
- ■ ಮೆಟ್ರೋ ಯೋಜನೆ ವೆಚ್ಚದಲ್ಲಿ ಶೇ. 84 ರಷ್ಟನ್ನು ರಾಜ್ಯ ಸರ್ಕಾರವೇ ಭರಿಸುತ್ತಿದ್ದು, ಕೇಂದ್ರ ಸರ್ಕಾರ ತನ್ನ ಪಾಲು ಹೆಚ್ಚಿಸಲಿ: ಪ್ರಧಾನಿಯವರಿಗೆ ಮನವಿ ಸಲ್ಲಿಸಲು ತೀರ್ಮಾನ



ಅವಮಾನ ಮಾಡಿದ್ದು ಸಾಕು ಕರ್ನಾಟಕದ ಪಾಲು ನೀಡಿ!

ಕರ್ನಾಟಕ ದಿವಾಳಿಯಾಗಿದೆ ಎಂಬ ವಿಪಕ್ಷ ನಾಯಕರ ಲೇವಡಿ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರ ನೀಡಿದ ಸಚಿವ ಕೃಷ್ಣ ಬೈರೇಗೌಡ ಅವರು, “ಕರ್ನಾಟಕ ತಲಾ ಆದಾಯದಲ್ಲಿ ಇಡೀ ದೇಶದಲ್ಲೇ ಮೊದಲ ಸ್ಥಾನದಲ್ಲಿದೆ.

ಕೇಂದ್ರಕ್ಕೆ ತೆರಿಗೆ ಸಂದಾಯದಲ್ಲೂ ಎರಡನೇ ಸ್ಥಾನದಲ್ಲಿರುವ, ಇಡೀ ದೇಶದ ಎಲ್ಲಾ ರಾಜ್ಯದ ಜನತೆಗೂ ಉದ್ಯೋಗಾವಕಾಶ ನೀಡುತ್ತಿರುವ ರಾಜ್ಯ ದಿವಾಳಿಯಾಗುವುದು ಹೇಗೆ? ವಿಪಕ್ಷ ನಾಯಕರು ರಾಜಕೀಯಕ್ಕಾಗಿ ಕರ್ನಾಟಕವನ್ನು ಅಪಮಾನ ಮಾಡುವುದು ಬಿಟ್ಟು ಕೇಂದ್ರ ಸರ್ಕಾರದಿಂದ ನಮಗೆ ಬರಬೇಕಾದ ನ್ಯಾಯಯುತ ತೆರಿಗೆ ಪಾಲನ್ನು ಕೊಡಿಸಲಿ, ಆ ನಂತರ ಮಾತನಾಡಲಿ” ಎಂದು ಸವಾಲು ಎಸೆದರು.

ಎಸ್ಸಿ-ಎಸ್ಟಿ ಮೀಸಲಾತಿ ರಕ್ಷಣೆಗೆ ಸುಪ್ರೀಂ ಮೆಟ್ಟಿಲೇರಿದ ರಾಜ್ಯ

● ವಿಕ್ರಮ ವಾಹಿನಿ । ಬೆಂಗಳೂರು

ಪರಿಶಿಷ್ಟ ಜಾತಿಗಳ ಮೀಸಲಾತಿಯನ್ನು ಶೇಕಡಾ 15 ರಿಂದ 17ಕ್ಕೆ, ಪರಿಶಿಷ್ಟ ಪಂಗಡಗಳ ಮೀಸಲಾತಿಯನ್ನು ಶೇಕಡಾ 3 ರಿಂದ 7ಕ್ಕೆ ಹೆಚ್ಚಿಸಿರುವುದನ್ನು ರದ್ದುಗೊಳಿಸಿರುವ ಕರ್ನಾಟಕ ಹೈಕೋರ್ಟ್‌ನ ತೀರ್ಪಿನ ವಿರುದ್ಧ ಕರ್ನಾಟಕ ಸರ್ಕಾರವು ಸುಪ್ರೀಂ ಕೋರ್ಟ್‌ನಲ್ಲಿ ವಿಶೇಷ ಅನುಮತಿ ಅರ್ಜಿಯನ್ನು ಸಲ್ಲಿಸಿದೆ. 2026ರ ಅಕ್ಟೋಬರ್ 27ರಂದು ಸರ್ಕಾರಿ ಆದೇಶಾನುಸಾರ ಅಕ್ಟೋಬರ್ 28ರಂದು ಸುಪ್ರೀಂ ಕೋರ್ಟ್ ನಲ್ಲಿ ಮೇಲ್ಮನವಿ ಸಲ್ಲಿಸಲು ಮಂಜೂರಾತಿ ನೀಡಲಾಗಿತ್ತು.

ಕಾಂಗ್ರೆಸ್ ಸರ್ಕಾರದ ಕ್ರಮಗಳು

* ಮೀಸಲಾತಿ ಹೆಚ್ಚಳವನ್ನು ಒಂಬತ್ತನೇ ಅನುಸೂಚಿಯಲ್ಲಿ ರಕ್ಷಣೆ ಕೋರಿ 2025ರ ಡಿಸೆಂಬರ್ 18 ರಂದು ವಿಧಾನಸಭೆಯಲ್ಲಿ ನಿರ್ಣಯ ಮಂಡಿಸಿ ಅಂಗೀಕರಿಸಲಾಯಿತು.
* 2026 ರ ಫೆಬ್ರವರಿಯಲ್ಲಿ 56,432 ಹುದ್ದೆಗಳನ್ನು ಭರ್ತಿ ಮಾಡಲು ಮಂಜೂರಾತಿ ನೀಡುವ ಮೂಲಕ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರಿಸಲಾಯಿತು. ಕೋರ್ಟ್ ತೀರ್ಪು ಬರುವವರೆಗೆ **SC** ಮತ್ತು ಖಖಿ ಅಭ್ಯರ್ಥಿಗಳಿಗೆ ಹೆಚ್ಚುವರಿ ಶೇಕಡಾ 6 ರಷ್ಟು ಹುದ್ದೆಗಳನ್ನು ಬ್ಯಾಕ್‌ಲಾಗ್‌ನಲ್ಲಿ ಕಾಯ್ದಿರಿಸಲಾಗಿದೆ, ಇದರಿಂದ ಈ ಪಾಲು ನಷ್ಟವಾಗದೆ ಸುರಕ್ಷಿತವಾಗಿರಲಿದೆ.
* ಪರಿಶಿಷ್ಟ ಜಾತಿಗಳ ಒಳಗೆ ಅತ್ಯಂತ ಹಿಂದುಳಿದ ಸಮುದಾಯಗಳಿಗೆ ಮೀಸಲಾತಿ ತಲುಪುವಂತೆ ಮಾಡಲು ಒಳಮೀಸಲಾತಿಯನ್ನು ಜಾರಿಗೆ ತರಲಾಯಿತು.
* 2026 ರ ಅಕ್ಟೋಬರ್ 15 ರಂದು ಸಚಿವ ಸಂಪುಟ ಸಭೆಯಲ್ಲಿ ಮೇಲ್ಮನವಿ ಸಲ್ಲಿಸಲು ನಿರ್ಧರಿಸಲಾಯಿತು ಮತ್ತು ತೀರ್ಪು ಬಂದ ಹದಿನಾರು ದಿನಗಳ ಒಳಗಾಗಿ ಅರ್ಜಿಯನ್ನು ಸಲ್ಲಿಸಲಾಯಿತು.
* ಏಕೈಕ ಶಾಶ್ವತ ರಕ್ಷಣೆಯಾಗಿರುವ ಒಂಬತ್ತನೇ ವೇಳಾಪಟ್ಟಿಯ ರಕ್ಷಣೆಗಾಗಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುವುದನ್ನು ಮುಂದುವರಿಸಿದೆ.
* ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳು ಮತ್ತು ಕರ್ನಾಟಕದ ಹಿಂದುಳಿದ ಸಮುದಾಯಗಳ ಹಕ್ಕುಗಳು, ಭವಿಷ್ಯದ ಯಾವುದೇ ಕಾನೂನು ಸವಾಲುಗಳಿಂದ ಅಲುಗಾಡದಂತೆ ಬಲವಾದ ಅಡಿಪಾಯದ ಮೇಲೆ ನಿಲ್ಲಲು ಸರ್ಕಾರವು ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಮತ್ತು ಕೇಂದ್ರ ಸರ್ಕಾರದೊಂದಿಗೆ ಸಂವಿಧಾನ ತಿದ್ದುಪಡಿ ಸೇರಿಸುವ ಪ್ರಯತ್ನಗಳನ್ನು ಒಟ್ಟಿಗೆ ಮುಂದುವರಿಸಲಿದೆ.

ಮೀಸಲಾತಿ ಹೆಚ್ಚಳಕ್ಕೆ ಕಾನೂನು ರಕ್ಷಣೆ ನೀಡದ ಬಿಜೆಪಿ ಸರ್ಕಾರ

ನ್ಯಾಯಮೂರ್ತಿ ಹೆಚ್.ಎನ್. ನಾಗ ಮೋಹನ್ ದಾಸ್ ಆಯೋಗವು ಜುಲೈ 2020ರಲ್ಲಿ ಮೀಸಲಾತಿ ಹೆಚ್ಚಳವನ್ನು ಶಿಫಾರಸು ಮಾಡಿ, ಈ ಹೆಚ್ಚಳವನ್ನು ಕಾನೂನು ಸವಾಲುಗಳಿಂದ ರಕ್ಷಿಸಲು ಸಂವಿಧಾನದ ಒಂಬತ್ತನೇ ಅನುಸೂಚಿಯಲ್ಲಿ ಸೇರಿಸಬೇಕೆಂದು ಸಲಹೆ ನೀಡಿತ್ತು. ಆದರೆ 2022 ರ ಅಕ್ಟೋಬರ್ 7 ರಂದು, ಅಂದಿನ ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ ಅವರು ಈ ಮೀಸಲಾತಿ ಹೆಚ್ಚಳಕ್ಕೆ ನ್ಯಾಯಾಂಗ ವಿನಾಯಿತಿ ಇರುವ ಸಂವಿಧಾನದ ಒಂಬತ್ತನೇ ಅನುಸೂಚಿಯಲ್ಲಿ ಸೇರಿಸಲಾಗುವುದು ಎಂದು ಬಹಿರಂಗವಾಗಿ ಹೇಳಿದ್ದರು. ಆದರೆ, ಬಿಜೆಪಿ ಸರ್ಕಾರವು ಒಂಬತ್ತನೇ ಅನುಸೂಚಿಯಲ್ಲಿ ಸೇರಿಸುವ ಬದಲಿಗೆ ಸುಗ್ರೀವಾಜ್ಞೆ ಹೊರಡಿಸಿ, 2023ರ ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ ಕಾಯ್ದೆ ಅಂಗೀಕರಿಸಿತು.

ಮತ್ತೊಂದೆಡೆ 2023ರ ಮಾರ್ಚ್ 21 ರಂದು, ಅಂದಿನ ಚಿತ್ರದುರ್ಗದ ಬಿಜೆಪಿ ಸಂಸದ ಹಾಗೂ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ರಾಜ್ಯ ಸಚಿವ ಎ. ನಾರಾಯಣಸ್ವಾಮಿ ಅವರು ಕರ್ನಾಟಕದಿಂದ ಯಾವುದೇ ಪ್ರಸ್ತಾಪ ಕೇಂದ್ರಕ್ಕೆ ತಲುಪಿಲ್ಲ ಎಂದು ಸಂಸತ್ತಿಗೆ ತಿಳಿಸಿದರು. ಇದಾದ ಎರಡು ದಿನಗಳ ನಂತರ ಅಂದರೆ ಮತದಾನಕ್ಕೆ ಕೇವಲ ಏಳು ವಾರಗಳು ಬಾಕಿ ಇರುವಾಗ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿತ್ತು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ರಾಷ್ಟ್ರೀಯ ಆಯೋಗಗಳೊಂದಿಗೆ ಸಮಾಲೋಚನೆ ನಡೆಸುವುದು ಕಡ್ಡಾಯವಾಗಿತ್ತು ಮತ್ತು ಕಾನೂನು ಜಾರಿಯಾದ ನಂತರ ಕಳುಹಿಸಲಾದ ಪತ್ರಗಳು ಆ ಅಗತ್ಯವನ್ನು ಪೂರೈಸುವುದಿಲ್ಲ ಎಂದು ಹೈಕೋರ್ಟ್ ತನ್ನ ತೀರ್ಪು ನೀಡಿದೆ. ಡಬಲ್ ಇಂಜಿನ್ ಬಿಜೆಪಿ ಸರ್ಕಾರವೇ ಅಧಿಕಾರದಲ್ಲಿದ್ದಾಗ, ಒಂದೇ ಒಂದು ಸಂವಿಧಾನ ತಿದ್ದುಪಡಿ ಯು ಈ ಹೆಚ್ಚಳಕ್ಕೆ ರಕ್ಷಣೆ ನೀಡುತ್ತಿತ್ತು. ಆದರೆ ಬಿಜೆಪಿ ಸರ್ಕಾರ ಅದನ್ನು ಮಾಡಲಿಲ್ಲ.

ಕೇಂದ್ರ ಸರ್ಕಾರದ ನಿಷ್ಕ್ರಿಯತೆ

2025ರ ಡಿಸೆಂಬರ್ 18 ರಂದು, ಮೀಸಲಾತಿ ಹೆಚ್ಚಳದ ಶೇಕಡಾ 56 ರಷ್ಟು ಮೀಸಲಾತಿಯನ್ನು ಸಂವಿಧಾನದ ಒಂಬತ್ತನೇ ಅನುಸೂಚಿಯಲ್ಲಿ ಸೇರಿಸುವ ಬಗ್ಗೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿ ಕರ್ನಾಟಕ ವಿಧಾನಸಭೆಯು ನಿರ್ಣಯವನ್ನು ಅಂಗೀಕರಿಸಿತು. 2026ರ ಜುಲೈ 25 ರಂದು, ಪ್ರಕರಣವು ಹೈಕೋರ್ಟ್‌ನಲ್ಲಿ ಬಾಕಿ ಇರುವ ಕಾರಣ ಈ ವಿನಂತಿಯನ್ನು ಮುಂದೂಡುವುದಾಗಿ ಕೇಂದ್ರ ಸರ್ಕಾರ ಸಂಸತ್ತಿಗೆ ತಿಳಿಸಿತು. ಲೋಕಸಭೆಯಲ್ಲಿ ಕರ್ನಾಟಕದಿಂದ ಐವರು ಕೇಂದ್ರ ಸಚಿವರು ಮತ್ತು 19 ಮಂದಿ ಬಿಜೆಪಿ ಹಾಗೂ ಜೆಡಿಎಸ್ ಸಂಸದರಿದ್ದರೂ, ತಿದ್ದುಪಡಿಯನ್ನು ಇನ್ನೂ ಮಂಡಿಸಲಾಗಿಲ್ಲ. ಮೊದಲಿಗೆ 2023 ರಲ್ಲಿ ಮತ್ತು ನಂತರವೂ ಮುಂದುವರಿದ ಈ ವೈಫಲ್ಯವೇ ರಾಜ್ಯ ಸರ್ಕಾರವನ್ನು ಮೇಲ್ಮನವಿ ಸಲ್ಲಿಸುವಂತೆ ಮಾಡಿದೆ.

ಕುಲ್ಗಾಮ್‌ನಲ್ಲಿ ಸಿಆರ್‌ಪಿಎಫ್ ಯೋಧರ ಮೇಲೆ ಉಗ್ರರ ದಾಳಿ

● ವಿಕ್ರಮ ವಾಹಿನಿ । ಶ್ರೀನಗರ

ಜಮ್ಮು-ಕಾಶ್ಮೀರದ ಕುಲ್ಗಾಮ್ ಜಿಲ್ಲೆಯಲ್ಲಿ ಭದ್ರತಾ ಸಿಬ್ಬಂದಿಯನ್ನು ಗುರಿಯಾಗಿಸಿಕೊಂಡು ಬುಧವಾರ ಗುಂಡಿನ ದಾಳಿ ನಡೆದಿದೆ.

ಬೈಕ್‌ನಲ್ಲಿ ಬಂದ ಅಪರಿಚಿತ ದುಷ್ಕರ್ಮಿಗಳು ಸಿಆರ್‌ಪಿಎಫ್ ಸಿಬ್ಬಂದಿ ಮೇಲೆ ಗುಂಡು ಹಾರಿಸಿದ್ದು, ಘಟನೆಯಲ್ಲಿ ಮೂವರು ಸಿಬ್ಬಂದಿ ಗಾಯಗೊಂಡಿದ್ದಾರೆ. ಮಧ್ಯಾಹ್ನ ಸುಮಾರು 2.15ರ ವೇಳೆಗೆ ಮಿರ್ ಬಜಾರ್ ಪ್ರದೇಶದಲ್ಲಿ ಈ ಘಟನೆ ನಡೆದಿದೆ.

ಚೆಕ್‌ಪೋಸ್ಟ್‌ನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಸಿಆರ್‌ಪಿಎಫ್ ಸಿಬ್ಬಂದಿಯನ್ನು ಗುರಿಯಾಗಿಸಿ ಕೊಂಡು ಬೈಕ್‌ನಲ್ಲಿ ಬಂದ ಅಪರಿಚಿತರು ಏಕಾಏಕಿ ಗುಂಡಿನ ದಾಳಿ ನಡೆಸಿದ್ದಾರೆ. ಬಳಿಕ ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ಸಿಆರ್‌ಪಿಎಫ್ ಹೇಳಿಕೆಯಲ್ಲಿ ತಿಳಿಸಿದೆ.

ಘಟನೆ ನಡೆದ ಪ್ರದೇಶವನ್ನು ಭದ್ರತಾ ಪಡೆಗಳು ಸುತ್ತುವರಿದಿದ್ದು, ದಾಳಿಕೋರರ ಪತ್ತೆಗಾಗಿ ಬೃಹತ್ ಶೋಧ ಕಾರ್ಯಾಚರಣೆ ಆರಂಭಿಸಿವೆ. ಪರಾರಿಯಾಗಿರುವ ದುಷ್ಕರ್ಮಿಗಳಿಗಾಗಿ ಶೋಧ ಮುಂದುವರಿದಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ದಾಳಿಯಲ್ಲಿ ರಾಕೇಶ್ ದಾಸ್, ಸಂತೋಷ್ ಚಂದ್ರು ಮತ್ತು ಸೋಮ್‌ವೀರ್ ಸಿಂಗ್ ಗಾಯಗೊಂಡಿದ್ದಾರೆ. ರಾಕೇಶ್ ದಾಸ್ ಅವರ ಎಡಗಾಲಿಗೆ ಗುಂಡೇಟು ತಗುಲಿದೆ.

ಸಂತೋಷ್ ಚಂದ್ರು ಅವರ ಹೊಟ್ಟೆ ಮತ್ತು ಬೆನ್ನೆಲುಬಿನ ಭಾಗಕ್ಕೆ ಗಾಯಗಳಾಗಿವೆ. ಸೋಮ್‌ವೀರ್ ಸಿಂಗ್ ಅವರ ಎಡಗೈಗೆ ಗಾಯವಾಗಿದೆ. ಗಾಯಾಳುಗಳನ್ನು ಅನಂತನಾಗ್ ಜಿಲ್ಲೆಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಮೂವರ ಸ್ಥಿತಿಯೂ ಸ್ಥಿರವಾಗಿದ್ದು, ಯಾವುದೇ ಪ್ರಾಣಾಪಾಯವಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆ ನಡೆದ ಬೆನ್ನಲ್ಲೇ ಸ್ಥಳಕ್ಕೆ ಹೆಚ್ಚುವರಿ ಭದ್ರತಾ ಪಡೆಗಳನ್ನು ನಿಯೋಜಿಸಲಾಗಿದೆ. ಸುತ್ತಮುತ್ತ ಬ್ಯಾರಿಕೇಡ್‌ಗಳನ್ನು ಅಳವಡಿಸಿ, ಶಸ್ತ್ರಸಜ್ಜಿತ ವಾಹನಗಳೊಂದಿಗೆ ಭದ್ರತಾ ಸಿಬ್ಬಂದಿ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಸ್ಥಳೀಯರು



ಮನೆಗಳಿಂದ ಹೊರಬರದಂತೆ ಧ್ವನಿವರ್ಧಕಗಳ ಮೂಲಕ ಸೂಚನೆ ನೀಡಲಾಗಿದೆ. ದಾಳಿ ನಡೆಸಿ ಪರಾರಿಯಾಗಿರುವ ದುಷ್ಕರ್ಮಿಗಳ ಪತ್ತೆಗಾಗಿ ಭದ್ರತಾ ಪಡೆಗಳು ಸುತ್ತುವರಿದು ಶೋಧ ಕಾರ್ಯಾಚರಣೆ ಆರಂಭಿಸಿವೆ.

ಜಮ್ಮು-ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ದಾಳಿ ನಡೆದ ಸಂದರ್ಭದಲ್ಲಿ ಕುಲ್ಗಾಮ್ ಜಿಲ್ಲೆಯಲ್ಲೇ ಇದ್ದರು. ಆದರೆ ದಾಳಿ ನಡೆದ ಸ್ಥಳದ ಸಮೀಪದಲ್ಲಿ ಇರಲಿಲ್ಲ. ಕುಲ್ಗಾಮ್‌ನ ಸರ್ಕಾರಿ ಪದವಿ ಕಾಲೇಜಿನಲ್ಲಿ ನಡೆಯಬೇಕಿದ್ದ ಮೂರು ದಿನಗಳ ‘ವೆಶೋ ಉತ್ಸವ’ದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲು ಅವರು ಆಗಮಿಸಿದ್ದರು.

ಛತ್ತೀಸ್‌ಗಢದಲ್ಲೂ ಸಿಆರ್‌ಪಿಎಫ್ ಸಿಬ್ಬಂದಿಗೆ ಗಾಯ: ಕಳೆದ ತಿಂಗಳು ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ಐಇಡಿ ಸ್ಫೋಟ ಸಂಭವಿಸಿತ್ತು. ಅಲಾರ್ಮಡುಗು ಶಿಬಿರದಲ್ಲಿ ಸ್ಫೋಟಕಗಳ ಅವಶೇಷಗಳನ್ನು ನಿಷ್ಕ್ರಿಯಗೊಳಿಸುವ ಸಂದರ್ಭದಲ್ಲಿ ಸಂಭವಿಸಿದ ಸ್ಫೋಟದಲ್ಲಿ ನಾಲ್ವರು ಸಿಆರ್‌ಪಿಎಫ್ ಅಧಿಕಾರಿಗಳು ಗಾಯಗೊಂಡಿದ್ದರು.

150 ಗಡಿ ದಾಟಿದ ಬೆಳಕಿನ ಹಬ್ಬದಂದು ಬದುಕು ಕತ್ತಲು ಮಾಡಿಕೊಂಡವರ ಸಂಖ್ಯೆ!

● ವಿಕ್ರಮ ವಾಹಿನಿ । ಬೆಂಗಳೂರು

ಬೆಳಕಿನ ಹಬ್ಬ ದೀಪಾವಳಿಯ ಸಂಭ್ರಮದ ನಡುವೆ ಪಟಾಕಿ ಸಿಡಿತದಿಂದ ಕಣ್ಣಿಗೆ ಗಾಯಗೊಂಡವರ ಸಂಖ್ಯೆ 150ರ ಗಡಿ ದಾಟಿದ್ದು, ಪ್ರಮುಖ ಕಣ್ಣಿನ ಆಸ್ಪತ್ರೆಗಳಲ್ಲಿ ಗಾಯಾಳುಗಳಿಗೆ ಚಿಕಿತ್ಸೆ ಮುಂದುವರಿದಿದೆ.

ನಗರದ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಗರ್ಭಿಣಿ ಸೇರಿದಂತೆ ಆರು ಮಂದಿ ಪಟಾಕಿ ಸಿಡಿತದಿಂದ ಗಾಯಗೊಂಡು ಚಿಕಿತ್ಸೆ ಪಡೆಯುತ್ತಿದ್ದಾರೆ. ಇವರಲ್ಲಿ ಇಬ್ಬರ ಸ್ಥಿತಿ ಗಂಭೀರವಾಗಿದ್ದು, ಐಸಿಯುನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಮಿಂಟೋ ಆಸ್ಪತ್ರೆಯಲ್ಲಿ ಇಬ್ಬರಿಗೆ ಶಸ್ತ್ರಚಿಕಿತ್ಸೆ: ಪಟಾಕಿ ಸಿಡಿತದಿಂದ ಕಣ್ಣಿಗೆ ಗಂಭೀರ ಗಾಯಗೊಂಡ ಇಬ್ಬರಿಗೆ ಮಿಂಟೋ ಕಣ್ಣಿನ ಆಸ್ಪತ್ರೆಯಲ್ಲಿ ಇಂದು ಶಸ್ತ್ರಚಿಕಿತ್ಸೆ ನಡೆಸಲಾಗಿದೆ. ಗಾಯಾಳುಗಳಲ್ಲಿ 30 ವರ್ಷದ ಯುವಕನಿಗೆ ಕಣ್ಣಿನ ಹೊರಪದರವಾದ ಸ್ಕ್ಲೆರಾದಲ್ಲಿ ಹರಿತದ ಗಾಯ ಉಂಟಾಗಿದೆ.

ಬೆಂಗಳೂರಿನ ಅಶೋಕ ನಗರದ ನಿವಾಸಿಯಾಗಿರುವ ಈ ಯುವಕ, ಪಟಾಕಿ ಸಿಡಿಯುವ ವೇಳೆ ಪಕ್ಕದಲ್ಲಿದ್ದ ವ್ಯಕ್ತಿಯಾಗಿದ್ದು, ಸಿಡಿದ ಪಟಾಕಿಯಿಂದ ಕಣ್ಣಿಗೆ ಗಂಭೀರ ಗಾಯವಾಗಿದೆ. ಯುವಕನ ಕಣ್ಣಿನ ಗಾಯವನ್ನು ಶಸ್ತ್ರಚಿಕಿತ್ಸೆ ಮೂಲಕ ಸರಿಪಡಿಸಲಾಗಿದೆ. ಆದರೆ, ಚಿಕಿತ್ಸೆಯ ಬಳಿಕವೂ ದೃಷ್ಟಿ ಮರಳುವ ಸಾಧ್ಯತೆ ಕುರಿತು ವೈದ್ಯರು ಆತಂಕ ವ್ಯಕ್ತಪಡಿಸಿದ್ದಾರೆ.



ಇನ್ನು ನಾಲ್ಕು ವರ್ಷದ ಬಾಲಕನಿಗೂ ಚಕ್ರಿ ಮತ್ತು ಬಿಜಿಲಿ ಪಟಾಕಿಯಿಂದ ಕಣ್ಣಿಗೆ ಗಂಭೀರ ಗಾಯವಾಗಿದೆ. ಉತ್ತರ ಪ್ರದೇಶ ಮೂಲದ ಈ ಬಾಲಕ ಬೆಂಗಳೂರಿನ ಹೊಸಕೋಟೆಯಲ್ಲಿ ವಾಸವಾಗಿದ್ದಾನೆ. ಬಾಲಕನಿಗೆ ಕಣ್ಣಿನ ಲಿಂಬಲ್ ಭಾಗದಲ್ಲಿ ಹರಿತದ ಗಾಯದೊಂದಿಗೆ ಐರಿಸ್ ಹೊರಚಾಚಿರುವ ಸ್ಥಿತಿ ಕಂಡುಬಂದಿದ್ದು, ಶಸ್ತ್ರಚಿಕಿತ್ಸೆ ಮೂಲಕ ಚಿಕಿತ್ಸೆ ನೀಡಲಾಗಿದೆ.

150ರ ಗಡಿ ದಾಟಿದ ಕಣ್ಣಿನ ಗಾಯದ ಪ್ರಕರಣಗಳು: ನಗರದ ವಿವಿಧ ಕಣ್ಣಿನ ಆಸ್ಪತ್ರೆಗಳಲ್ಲಿ ಪಟಾಕಿ ಸಿಡಿತದಿಂದ ಗಾಯ ಗೊಂಡವರ ಸಂಖ್ಯೆ ಆತಂಕಕಾರಿಯಾಗಿ ಹೆಚ್ಚಾಗಿದೆ. ಆಸ್ಪತ್ರೆಗಳಿಂದ ಲಭ್ಯವಾದ ಮಾಹಿತಿಯ ಪ್ರಕಾರ, ಪ್ರಕರಣಗಳ ವಿವರ ಹೀಗಿದೆ:

ನಾರಾಯಣ ನೇತ್ರಾಲಯ 51, ಮಿಂಟೋ ಆಸ್ಪತ್ರೆ 30, ಶಂಕರ ಕಣ್ಣಿನ ಆಸ್ಪತ್ರೆ 26, ಪ್ರಭಾ ಕಣ್ಣಿನ ಆಸ್ಪತ್ರೆ 15, ಬೆಂಗಳೂರು ನೇತ್ರಾಲಯ 6, ಮೋದಿ ಕಣ್ಣಿನ ಆಸ್ಪತ್ರೆ 5, ಅಗರ್‌ವಾಲ್ ಕಣ್ಣಿನ ಆಸ್ಪತ್ರೆ 4 ಹಾಗೂ ಇತರೆ ಆಸ್ಪತ್ರೆಗಳಲ್ಲಿ 20ಕ್ಕೂ ಹೆಚ್ಚು ಮಂದಿ ಚಿಕಿತ್ಸೆ ಪಡೆದಿದ್ದಾರೆ.

ಗರ್ಭಿಣಿ ಸೇರಿ ಆರು ಮಂದಿಗೆ ಗಾಯ: ಪಟಾಕಿ ಸಿಡಿತದಿಂದ ಗಾಯಗೊಂಡ ಆರು ಮಂದಿಗೆ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ. ಗಾಯಾಳುಗಳಲ್ಲಿ ನಾಲ್ವರು ಮಕ್ಕಳು ಹಾಗೂ ಇಬ್ಬರು ಮಹಿಳೆಯರಿದ್ದಾರೆ. 11, 14 ಮತ್ತು 9 ವರ್ಷದ ಮೂವರು ಬಾಲಕರು ಹಾಗೂ 9 ವರ್ಷದ ಬಾಲಕಿ ಗಾಯಗೊಂಡಿದ್ದಾರೆ. 21 ಮತ್ತು 27 ವರ್ಷದ ಮಹಿಳೆಯರೂ ಪಟಾಕಿ ಅವಘಡಕ್ಕೆ ತುತ್ತಾಗಿದ್ದಾರೆ. ಆರು ಗಾಯಾಳುಗಳ ಪೈಕಿ ಇಬ್ಬರಿಗೆ ಗಂಭೀರ ಗಾಯಗಳಾಗಿದ್ದು, ಐಸಿಯುನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ರಸ್ತೆ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಇಬ್ಬರು ಮಕ್ಕಳಿಗೂ ಪಟಾಕಿ ಸಿಡಿದು ಗಾಯಗಳಾಗಿವೆ. ▶ 3ನೇ ಪುಟಕ್ಕೆ...

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

ಜ್ಞಾನ, ಸಾಧನೆ, ಸೇವೆಯ ಮೂಲಕ ಗ್ರಂಥಾಲಯ ಕ್ಷೇತ್ರದಲ್ಲಿ ಹೊಸ ಚೈತನ್ಯ ಮೂಡಿಸಿದ ಪ್ರೊ.ಪಿ.ವಿ. ಕೊಣ್ಣೂರು

● ಹನುಮೇಶ್ ಕೆ ಯಾವಗಲ್
ಹಿರಿಯ ಪತ್ರಕರ್ತ

ಐದು ದಶಕಗಳ ವೃತ್ತಿಜೀವನ, ಶೈಕ್ಷಣಿಕ ಸಾಧನೆ, ಗ್ರಂಥಾಲಯಗಳ ಡಿಜಿಟಲೀಕರಣ, ಸಂಶೋಧನೆ ಮತ್ತು ಯುವ ಪೀಳಿಗೆಯ ಮಾರ್ಗದರ್ಶನ – ಪ್ರೊ. ಪಿ.ವಿ. ಕೊಣ್ಣೂರು ಅವರ ಬದುಕು ಸಾಧನೆಯ ಜೊತೆಗೆ ಸೇವೆಯೂ ಹೇಗೆ ಸಾಗಬಹುದು ಎಂಬುದಕ್ಕೆ ಆದರ್ಶ. ಗ್ರಂಥಾಲಯವೆಂದರೆ ಕೇವಲ ಪುಸ್ತಕಗಳನ್ನು ಸಂಗ್ರಹಿಸಿಡುವ ಸ್ಥಳವಲ್ಲ; ಅದು ಜ್ಞಾನ, ಸಂಶೋಧನೆ, ಚಿಂತನೆ ಮತ್ತು ಸಮಾಜದ ಪ್ರಗತಿಗೆ ದಾರಿದೀಪವಾಗುವ ಕೇಂದ್ರ ಎಂಬ ಪರಿಕಲ್ಪನೆಯನ್ನು ತಮ್ಮ ವೃತ್ತಿಜೀವನದುದ್ದಕ್ಕೂ ಕಾರ್ಯರೂಪಕ್ಕೆ ತಂದವರು ಪ್ರೊ. ಪಾಂಡುರಂಗ ವಿ. ಕೊಣ್ಣೂರು. ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಕ್ಷೇತ್ರದಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿರುವ ಅವರು, ಒಬ್ಬ ಗ್ರಂಥಪಾಲಕರಾಗಿ ವೃತ್ತಿಜೀವನ ಆರಂಭಿಸಿ, ಪ್ರಾಧ್ಯಾಪಕರಾಗಿ, ಸಂಶೋಧಕರಾಗಿ, ಆಡಳಿತಗಾರರಾಗಿ, ಸಂಸ್ಥೆಗಳ ನಿರ್ಮಾತೃವಾಗಿ ಹಾಗೂ ವೃತ್ತಿಪರ ಸಂಘಟಕರಾಗಿ ಬೆಳೆದಿರುವುದು ಗಮನಾರ್ಹ ಸಾಧನೆಯಾಗಿದೆ.

ಅವರ ಜೀವನ, ವೃತ್ತಿಪರ ಸಾಧನೆ, ಸಂಶೋಧನಾ ಕೊಡುಗೆ, ನಾಯಕತ್ವ, ಮಾನವೀಯ ಗುಣಗಳು ಮತ್ತು ಸಮಾಜಮುಖಿ ಸೇವೆಯನ್ನು ಪರಿಚಯಿಸುವ ಉದ್ದೇಶದಿಂದ 'ಚೈತನ್ಯ ಪಥ – ಪ್ರೊ. ಪಿ.ವಿ. ಕೊಣ್ಣೂರು ಅವರ ಜೀವನ, ಸಾಧನೆ ಮತ್ತು ಸೇವೆ' ಎಂಬ ಅಭಿನಂದನಾ ಗ್ರಂಥವನ್ನು ಹೊರತರಲಾಗಿದೆ. ಡಾ. ಪಿ.ವೈ. ರಾಜೇಂದ್ರ ಕುಮಾರ್ ಹಾಗೂ ಆರ್. ಎಸ್. ವೆಂಕಟರಾಜ್ ಸಂಪಾದಿಸಿರುವ ಈ ಕೃತಿಯನ್ನು ಬೆಂಗಳೂರಿನ LIS Academy ಪ್ರಕಟಿಸಿದೆ. 2026ರಲ್ಲಿ ಪ್ರಕಟಗೊಂಡಿರುವ ಈ ಗ್ರಂಥದಲ್ಲಿ ಕನ್ನಡ ಮತ್ತು ಇಂಗ್ಲಿಷ್ ಭಾಷೆಗಳ ಲೇಖನಗಳ ಮೂಲಕ ಅವರ ಬದುಕಿನ ವಿವಿಧ ಆಯಾಮಗಳನ್ನು ಪರಿಚಯಿಸಲಾಗಿದೆ.

ಗ್ರಂಥಾಲಯ ಕ್ಷೇತ್ರದ ಹಿರಿಯರು, ಸಹೋದ್ಯೋಗಿಗಳು, ವಿದ್ಯಾರ್ಥಿಗಳು, ಸಂಶೋಧಕರು ಮತ್ತು ಅಭಿಮಾನಿಗಳು ತಮ್ಮ ಅನುಭವಗಳು, ನೆನಪುಗಳು ಹಾಗೂ ಮೆಚ್ಚುಗೆಯ ಮಾತುಗಳನ್ನು ಹಂಚಿಕೊಂಡಿರುವುದು ಈ ಅಭಿನಂದನಾ ಕೃತಿಯ ವಿಶೇಷತೆಯಾಗಿದೆ.

ಸಾಮಾನ್ಯ ಕುಟುಂಬದ ಹಿನ್ನೆಲೆಯಿಂದ ಉನ್ನತ ಶೈಕ್ಷಣಿಕ ಸಾಧನೆಯವರೆಗೆ:

ಪ್ರೊ. ಪಾಂಡುರಂಗ ವಿ. ಕೊಣ್ಣೂರು ಅವರ ವೃತ್ತಿಜೀವನದ ಪಯಣವು ನಿರಂತರ ಪರಿಶ್ರಮ, ಕಲಿಯುವ ಹಂಬಲ ಮತ್ತು ಸಾಧಿಸುವ ಛಲಕ್ಕೆ ಸಾಕ್ಷಿಯಾಗಿದೆ. ಆರಂಭದಲ್ಲಿ ಕರ್ನಾಟಕ ಸರ್ಕಾರದ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಗ್ರಂಥಾಲಯ ಸಹಾಯಕರಾಗಿ ತಮ್ಮ ವೃತ್ತಿಜೀವನ ಆರಂಭಿಸಿದ ಅವರು, ಉದ್ಯೋಗದ ಜೊತೆಯಲ್ಲಿಯೇ ಉನ್ನತ ಶಿಕ್ಷಣವನ್ನು ಮುಂದುವರಿಸಿದರು.

ವಾಣಿಜ್ಯ ಪದವಿಯಾದ ಬಿ.ಕಾಂ. ಪೂರ್ಣಗೊಳಿಸಿದ ನಂತರ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನದಲ್ಲಿ ಬಿ.ಲಿಬ್. ಸೈನ್ಸ್ ಹಾಗೂ ಎಂ.ಲಿಬ್. ಸೈನ್ಸ್ ಪದವಿಗಳನ್ನು ಪಡೆದರು. ಸ್ನಾತಕೋತ್ತರ ಪದವಿಯಲ್ಲಿ ಚಿನ್ನದ ಪದಕ ಗಳಿಸಿರುವುದು ಅವರ ಶೈಕ್ಷಣಿಕ ಪ್ರತಿಭೆಗೆ ಸಾಕ್ಷಿಯಾಗಿದೆ. ನಂತರ ಪಿಎಚ್.ಡಿ. ಪದವಿ ಹಾಗೂ ಕಂಪ್ಯೂಟರ್ ಕ್ಷೇತ್ರದ ಪಿಜಿಡಿಸಿಎ ವಿದ್ಯಾರ್ಹತೆಯನ್ನೂ ಪಡೆದರು.

ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡದಲ್ಲಿ ಪ್ರೊ. ಎಸ್.ಎಲ್. ಸಂಗಮ್ ಅವರ ಮಾರ್ಗದರ್ಶನದಲ್ಲಿ ಅವರು ಗ್ರಂಥಾಲಯ ಸಾರ್ವಜನಿಕ ಸಂಪರ್ಕ ವ್ಯವಸ್ಥೆಯ ಕುರಿತು ಸಂಶೋಧನೆ ನಡೆಸಿದರು. ಗ್ರಂಥಾಲಯಗಳು ಮತ್ತು ಸಾರ್ವಜನಿಕರ ನಡುವಿನ ಸಂಬಂಧವನ್ನು ಅಧ್ಯಯನ ಮಾಡಿದ ಈ ಸಂಶೋಧನೆಯು ಮುಂದಿನ ದಿನಗಳಲ್ಲಿ ಗ್ರಂಥಾಲಯ ಸೇವೆಗಳನ್ನು ಜನಸಾಮಾನ್ಯರಿಗೆ ಇನ್ನಷ್ಟು ಹತ್ತಿರವಾಗಿಸುವ ಅವರ ಚಿಂತನೆಗೆ ಭದ್ರ ಬುನಾದಿಯಾಯಿತು.

1972ರಿಂದ 1987ರವರೆಗೆ ಕರ್ನಾಟಕ ಸರ್ಕಾರದ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಸೇವೆ ಸಲ್ಲಿಸಿದ ಅವರು, ತಮ್ಮ ಕಾರ್ಯಕ್ಷಮತೆ ಮತ್ತು ಶೈಕ್ಷಣಿಕ ಅರ್ಹತೆಯ ಬಲದಿಂದ ಬೋಧನಾ ಕ್ಷೇತ್ರಕ್ಕೆ ಪ್ರವೇಶಿಸಿದರು. 1987–88ರಲ್ಲಿ ಗುಲ್ಬರ್ಗಾ ವಿಶ್ವವಿದ್ಯಾಲಯದಲ್ಲಿ ಉಪನ್ಯಾಸಕರಾಗಿ ಸೇವೆ ಆರಂಭಿಸಿದರು. ನಂತರ 1988ರಿಂದ 1999ರವರೆಗೆ ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡದಲ್ಲಿ ರೀಡರ್ ಆಗಿ ಕಾರ್ಯನಿರ್ವಹಿಸಿದರು.

ಧಾರವಾಡದ ತಮ್ಮ ಸೇವಾವಧಿಯಲ್ಲಿ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಪಠ್ಯಕ್ರಮದಲ್ಲಿ ಹೊಸ ಬದಲಾವಣೆಗಳನ್ನು ಪರಿಚಯಿಸುವಲ್ಲಿ ಆಸಕ್ತಿ ವಹಿಸಿದರು. ಮಾಹಿತಿ ತಂತ್ರಜ್ಞಾನ, ಬಿಬ್ಲಿಯೋಮೆಟ್ರಿಕ್ಸ್, ಬಳಕೆದಾರರ ಅಧ್ಯಯನ ಸೇರಿದಂತೆ ಆಧುನಿಕ ಸಂಶೋಧನಾ ವಿಷಯಗಳಿಗೆ ಆದ್ಯತೆ ನೀಡಿದರು. ಗ್ರಂಥಾಲಯ ಶಿಕ್ಷಣವು ಕೇವಲ ಪುಸ್ತಕಗಳ ವರ್ಗೀಕರಣ ಮತ್ತು ಸೂಚೀಕರಣಕ್ಕೆ ಸೀಮಿತವಾಗಬಾರದು; ಬದಲಾಗುತ್ತಿರುವ ತಂತ್ರಜ್ಞಾನಕ್ಕೆ ಅನುಗುಣವಾಗಿ ಸಂಶೋಧನೆ ಮತ್ತು ಮಾಹಿತಿ ನಿರ್ವಹಣೆಯ ಹೊಸ ಆಯಾಮಗಳನ್ನು ಒಳಗೊಳ್ಳಬೇಕು ಎಂಬುದು ಅವರ ನಿಲುವಾಗಿತ್ತು.

ಗೋವಾ ವಿಶ್ವವಿದ್ಯಾಲಯದಲ್ಲಿ ಗ್ರಂಥಾಲಯಗಳ ಆಧುನೀಕರಣ:

1999ರಲ್ಲಿ ಗೋವಾ ವಿಶ್ವವಿದ್ಯಾಲಯದ ವಿಶ್ವವಿದ್ಯಾಲಯ ಗ್ರಂಥಪಾಲಕರಾಗಿ ನೇಮಕಗೊಂಡಿದ್ದು ಅವರ ವೃತ್ತಿಜೀವನದ ಮಹತ್ವದ ಘಟ್ಟವಾಗಿತ್ತು. ಆ ವಿಶ್ವವಿದ್ಯಾಲಯದ ಮೊದಲ ಗ್ರಂಥಪಾಲಕರಾಗಿ ಜವಾಬ್ದಾರಿ ವಹಿಸಿಕೊಂಡ ಅವರು, ಅಲ್ಲಿನ ಗ್ರಂಥಾಲಯವನ್ನು ಆಧುನಿಕ ತಂತ್ರಜ್ಞಾನಕ್ಕೆ ಹೊಂದಿಕೊಳ್ಳುವಂತೆ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದರು.

ಸುಮಾರು ಒಂದು ವರ್ಷದ ಅವಧಿಯಲ್ಲಿ 1.2 ಲಕ್ಷಕ್ಕೂ ಅಧಿಕ ಪುಸ್ತಕಗಳ ದತ್ತಾಂಶವನ್ನು ಸಿದ್ಧಪಡಿಸಿ, ಗ್ರಂಥಾಲಯದ ಗಣಕೀಕರಣ ಕಾರ್ಯವನ್ನು ವೇಗವಾಗಿ ಪೂರ್ಣಗೊಳಿಸಿದರು. ವಿಶ್ವವಿದ್ಯಾಲಯದ ಆವರಣದಲ್ಲಿ ಐಎಲ್ ಮತ್ತು ಫಾಂಟ್ ಸಂಪರ್ಕ ವ್ಯವಸ್ಥೆಗಳನ್ನು ಕಲ್ಪಿಸುವ ಮೂಲಕ ಮಾಹಿತಿ ವಿನಿಮಯಕ್ಕೆ ತಾಂತ್ರಿಕ ಮೂಲಸೌಕರ್ಯ ನಿರ್ಮಿಸಿದರು.

GOAL-NET, BALNET ಮತ್ತು UNILINK ಮುಂತಾದ ಗ್ರಂಥಾಲಯ ಜಾಲಗಳ ಸ್ಥಾಪನೆ ಹಾಗೂ ಅಭಿವೃದ್ಧಿಯಲ್ಲಿಯೂ ಅವರು ತೊಡಗಿಸಿಕೊಂಡಿದ್ದರು. ಗ್ರಂಥಾಲಯಗಳು ಪರಸ್ಪರ ಸಂಪರ್ಕ ಹೊಂದಿ ಸಂಪನ್ಮೂಲಗಳನ್ನು ಹಂಚಿಕೊಳ್ಳುವ ಮೂಲಕ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಮತ್ತು ಸಂಶೋಧಕರಿಗೆ ಜ್ಞಾನ ಸಂಪನ್ಮೂಲಗಳು ಲಭ್ಯವಾಗಬೇಕು ಎಂಬುದು ಈ ಪ್ರಯತ್ನಗಳ ಹಿಂದಿನ ಆಶಯವಾಗಿತ್ತು.

ಗೋವಾ ವಿಶ್ವವಿದ್ಯಾಲಯದಲ್ಲಿ ಅಪರೂಪದ ಪುಸ್ತಕಗಳ ಡಿಜಿಟಲೀಕರಣ, ರಾಷ್ಟ್ರೀಯ ಸಾಗರ ಮಾಹಿತಿ ಸಂಪನ್ಮೂಲ ಕೇಂದ್ರವಾದ NCAOR ಗ್ರಂಥಾಲಯದ ಗಣಕೀಕರಣ ಹಾಗೂ ಭಾರತೀಯ ನೌಕಾಪಡೆಯ ಏರ್ ಪಬ್ಲಿಕೇಷನ್ಸ್‌ಗಳ ಡಿಜಿಟಲೀಕರಣ ಕಾರ್ಯಗಳಲ್ಲಿಯೂ ಅವರು ಕೊಡುಗೆ ನೀಡಿದ್ದಾರೆ.

ಗೋವಾದ ಇತಿಹಾಸ ಮತ್ತು ಸಂಸ್ಕೃತಿಗೆ ಸಂಬಂಧಿಸಿದ ಅಪರೂಪದ ದಾಖಲೆಗಳು ಹಾಗೂ ವೈಯಕ್ತಿಕ ಸಂಗ್ರಹಗಳನ್ನು ಡಿಜಿಟಲೀಕರಣಗೊಳಿಸುವ ಪ್ರಯತ್ನಗಳಿಗೂ ಅವರು ಕೈಜೋಡಿಸಿದ್ದರು. ವಿಶ್ವ ವಿದ್ಯಾಲಯದ ಗ್ರಂಥಾಲಯವನ್ನು ಕೇವಲ ಪುಸ್ತಕಗಳ ಸಂಗ್ರಹಾಲಯವನ್ನಾಗಿ ಉಳಿಸದೆ, ಸಂಶೋಧನೆ ಮತ್ತು ಮಾಹಿತಿ ವಿನಿಮಯದ ಪ್ರಮುಖ ಕೇಂದ್ರವನ್ನಾಗಿ ಬೆಳೆಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿದರು.

ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ತಂತ್ರಜ್ಞಾನಾಧಾರಿತ ಅಭಿವೃದ್ಧಿ:

2005ರಲ್ಲಿ ಬೆಂಗಳೂರು ವಿಶ್ವ ವಿದ್ಯಾಲಯದ ವಿಶ್ವ ವಿದ್ಯಾಲಯ ಗ್ರಂಥಪಾಲಕರಾಗಿ ಅಧಿಕಾರ ವಹಿಸಿಕೊಂಡ ಪ್ರೊ. ಕೊಣ್ಣೂರು ಅವರು 2013ರವರೆಗೆ ಸೇವೆ ಸಲ್ಲಿಸಿದರು. ಈ ಅವಧಿಯಲ್ಲಿ ಗ್ರಂಥಾಲಯ ಸೇವೆಗಳಿಗೆ ಮಾಹಿತಿ ತಂತ್ರಜ್ಞಾನವನ್ನು ಸಮರ್ಥವಾಗಿ ಅಳವಡಿಸುವುದರ ಜೊತೆಗೆ ವಿಶ್ವವಿದ್ಯಾಲಯದ ತಾಂತ್ರಿಕ ಅಭಿವೃದ್ಧಿಯಲ್ಲಿಯೂ ತಮ್ಮದೇ ಆದ ಕೊಡುಗೆ ನೀಡಿದರು.

ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಪ್ರಸ್ತುತ ಮಾಹಿತಿ ಅವಲೋಕನ ಬುಲೆಟಿನ್ (Current Awareness Bulletin) ಪ್ರಾರಂಭಿಸುವ ಮೂಲಕ ಹೊಸ ಸಂಶೋಧನೆಗಳು, ಪ್ರಕಟಣೆಗಳು ಮತ್ತು ಶೈಕ್ಷಣಿಕ ಬೆಳವಣಿಗೆಗಳ ಬಗ್ಗೆ ಅಧ್ಯಾಪಕರು ಹಾಗೂ ಸಂಶೋಧಕರಿಗೆ ಮಾಹಿತಿ ತಲುಪಿಸುವ ವ್ಯವಸ್ಥೆಯನ್ನು ಬಲಪಡಿಸಿದರು.

ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಗ್ರಂಥಾಲಯ ಜಾಲದ ಪರಿಕಲ್ಪನೆ ಮತ್ತು ಅದರ ಅಭಿವೃದ್ಧಿಗೆ ಪ್ರಯತ್ನಿಸಿದರು. ವಿಶ್ವ ವಿದ್ಯಾಲಯದ ಐಟಿ ಕೇಂದ್ರದ ಮುಖ್ಯಸ್ಥರಾಗಿಯೂ ಜವಾಬ್ದಾರಿ ನಿರ್ವಹಿಸಿ, ಕ್ಯಾಂಪಸ್ ನೆಟ್‌ವರ್ಕಿಂಗ್ ಹಾಗೂ ವಿಶ್ವವಿದ್ಯಾಲಯದ ವೆಬ್‌ಸೈಟ್ ಅಭಿವೃದ್ಧಿಯ ಮೇಲ್ವಿಚಾರಣೆ ನಡೆಸಿದರು.

ವಿಶ್ವವಿದ್ಯಾಲಯದ ವಿವಿಧ ಆವರಣಗಳಲ್ಲಿ ಮಾಹಿತಿ ಸಂಪನ್ಮೂಲಗಳನ್ನು ಸುಲಭವಾಗಿ ಪಡೆಯಲು ಅನುಕೂಲವಾಗುವಂತೆ ಸ್ವಯಂಚಾಲಿತ ಮಾಹಿತಿ ಶೋಧನಾ ವ್ಯವಸ್ಥೆಯನ್ನು ರೂಪಿಸುವುದು ಅವರ ಪ್ರಮುಖ ಉಪಕ್ರಮಗಳಲ್ಲಿ ಒಂದಾಗಿತ್ತು.

ಭಾರತೀಯ ವಿಜ್ಞಾನ ಸಂಸ್ಥೆ (IISc), ಬೆಂಗಳೂರು ಮತ್ತು ಅಮೆರಿಕದ ಕಾರ್ನೆಗಿ ಮೆಲನ್ ವಿಶ್ವವಿದ್ಯಾಲಯದ ಸಹಯೋಗದಲ್ಲಿ ನಡೆದ ಯೂನಿವರ್ಸಲ್ ಡಿಜಿಟಲ್ ಲೈಬ್ರರಿ ಯೋಜನೆಯಲ್ಲಿಯೂ ಅವರು ಸಹಕರಿಸಿದರು. ಈ ಯೋಜನೆಯಡಿ ಕನ್ನಡದ ಸುಮಾರು 30 ಸಾವಿರ ಪುಸ್ತಕಗಳನ್ನು ಡಿಜಿಟಲೀಕರಣಗೊಳಿಸುವ ಪ್ರಯತ್ನಕ್ಕೆ ಮಾರ್ಗದರ್ಶನ ಮತ್ತು ಸಹಕಾರ ನೀಡಿದರು.


ಈ ಎಲ್ಲ ಪ್ರಯತ್ನಗಳು ಗ್ರಂಥಾಲಯ ಕ್ಷೇತ್ರವು ಸಾಂಪ್ರದಾಯಿಕ ಪುಸ್ತಕ ಸಂಗ್ರಹಣೆಯಿಂದ ಡಿಜಿಟಲ್ ಜ್ಞಾನ ವ್ಯವಸ್ಥೆಯತ್ತ ಸಾಗುವ ಪರಿವರ್ತನೆಯಲ್ಲಿ ಮಹತ್ವದ ಹೆಜ್ಜೆಗಳಾಗಿವೆ.

ಅಮೆರಿಕದ ಫುಲ್‌ಬ್ರೈಟ್ ವಿದ್ಯಾರ್ಥಿ ವೇತನ – ಅಂತರ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆಯ ಗುರುತು:

ಪ್ರೊ. ಕೊಣ್ಣೂರು ಅವರ ವೃತ್ತಿಪರ ಸಾಮರ್ಥ್ಯಕ್ಕೆ ಅಂತರರಾಷ್ಟ್ರೀಯ ಮಟ್ಟದಲ್ಲಿಯೂ ಮನ್ನಣೆ ದೊರೆತಿದೆ. ಅಮೆರಿಕದ ಪ್ರತಿಷ್ಠಿತ ಫುಲ್‌ಬ್ರೈಟ್ ಕಾರ್ಯಕ್ರಮದಡಿ ಅವರು ಇಲಿನಾಯ್ಸ್ ವಿಶ್ವವಿದ್ಯಾಲಯ, ಅರ್ಬಾನಾ–ಶಾಂಪೇನ್‌ನಲ್ಲಿ ಫುಲ್‌ಬ್ರೈಟ್ ಸ್ಕಾಲರ್–ಇನ್–ರೆಸಿಡೆನ್ಸ್ ಆಗಿ ಕಾರ್ಯನಿರ್ವಹಿಸುವ ಅವಕಾಶ ಪಡೆದರು.


ಈ ಸಂದರ್ಭದಲ್ಲಿ ಅಮೆರಿಕದ ವಿಶ್ವವಿದ್ಯಾಲಯಗಳ ಗ್ರಂಥಾಲಯ ವ್ಯವಸ್ಥೆ, ಡಿಜಿಟಲ್ ರೆಪೊಸಿಟರಿಗಳು, ಸ್ವಯಂಚಾಲಿತ ಕ್ಯಾಟಲಾಗಿಂಗ್, ಮಾಹಿತಿ ಸಂಪನ್ಮೂಲಗಳ ಹಂಚಿಕೆ ಮತ್ತು ಆಧುನಿಕ ತಂತ್ರಜ್ಞಾನಗಳ ಬಳಕೆಯನ್ನು ಅಧ್ಯಯನ ಮಾಡಿದರು.

ಅಲ್ಲಿ ಪಡೆದ ಅನುಭವ ಮತ್ತು ಜ್ಞಾನವನ್ನು ಭಾರತದಲ್ಲಿ ಗ್ರಂಥಾಲಯ ವ್ಯವಸ್ಥೆಯ ಅಭಿವೃದ್ಧಿಗೆ ಬಳಸಿಕೊಂಡರು. ಅಮೆರಿಕದ ವಿವಿಧ ವಿಶ್ವವಿದ್ಯಾಲಯಗಳ ಗ್ರಂಥಾಲಯಗಳಿಗೆ ಭೇಟಿ ನೀಡಿದ ಅನುಭವವು ಅವರ ವೃತ್ತಿಪರ ದೃಷ್ಟಿಕೋನವನ್ನು ಇನ್ನಷ್ಟು ವಿಸ್ತರಿಸಿತು. ಹಾಂಗ್‌ಕಾಂಗ್ ಸೇರಿದಂತೆ ವಿದೇಶಗಳಲ್ಲಿ ನಡೆದ ಶೈಕ್ಷಣಿಕ ಚಟುವಟಿಕೆಗಳಲ್ಲಿಯೂ ಭಾಗವಹಿಸಿ ಭಾರತೀಯ ಗ್ರಂಥಾಲಯ ಕ್ಷೇತ್ರದ ಸಾಧನೆಗಳನ್ನು ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಪರಿಚಯಿಸಿದರು.



ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ನಾಯಕತ್ವ:

ತಮ್ಮ ವೃತ್ತಿಜೀವನದ ಮತ್ತೊಂದು ಮಹತ್ವದ ಹಂತದಲ್ಲಿ ಬೆಳಗಾವಿಯ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಲ್ಲಿ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗದ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥರಾಗಿ ಸೇವೆ ಸಲ್ಲಿಸಿದರು. ಅಲ್ಲದೆ ಸ್ಕೂಲ್ ಆಫ್ ಅಪ್ಲೈಡ್ ಸೈನ್ಸಸ್‌ನ ನಿರ್ದೇಶಕರಾಗಿಯೂ ಜವಾಬ್ದಾರಿ ನಿರ್ವಹಿಸಿದರು.



ಹೊಸ ವಿಶ್ವವಿದ್ಯಾಲಯದ ಶೈಕ್ಷಣಿಕ ವ್ಯವಸ್ಥೆಯನ್ನು ಬಲಪಡಿಸುವಲ್ಲಿ, ಸಂಶೋಧನಾ ಚಟುವಟಿಕೆಗಳನ್ನು ಉತ್ತೇಜಿಸುವಲ್ಲಿ ಮತ್ತು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದರು.

ಅವರ ಬೋಧನಾ ಶೈಲಿಯ ವಿಶೇಷತೆಯೆಂದರೆ, ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕದ ವಿಷಯಗಳನ್ನು ಮಾತ್ರ ಬೋಧಿಸದೆ, ತಮ್ಮ ವೃತ್ತಿಜೀವನದಲ್ಲಿ ಎದುರಿಸಿದ ನೈಜ ಅನುಭವಗಳನ್ನು ಹಂಚಿಕೊಳ್ಳುತ್ತಿದ್ದರು. ಸಾರ್ವಜನಿಕ ಗ್ರಂಥಾಲಯಗಳಲ್ಲಿ ಬಳಕೆದಾರರ ಸಮಸ್ಯೆಗಳು, ಮಾಹಿತಿ ಸೇವೆಗಳ ಅಗತ್ಯಗಳು ಮತ್ತು ತಂತ್ರಜ್ಞಾನದ ಉಪಯೋಗಗಳನ್ನು ಉದಾಹರಣೆ 'ಗಳೊಂದಿಗೆ ವಿವರಿಸುತ್ತಿದ್ದರು.

ವಿದ್ಯಾರ್ಥಿಗಳ ಹೆಸರುಗಳನ್ನು ನೆನಪಿಟ್ಟು ಕೊಂಡು ಆತ್ಮೀಯವಾಗಿ ಮಾತನಾಡುವ ಗುಣ ಅವರಲ್ಲಿತ್ತು. ತರಗತಿ ಯೊಳಗೆ ಶಿಕ್ಷಕರಾಗಿದ್ದ ಅವರು, ತರಗತಿಯ ಹೊರಗೆ ವಿದ್ಯಾರ್ಥಿಗಳೊಂದಿಗೆ ಸ್ನೇಹಿತರಂತೆ ಬೆರೆಯುತ್ತಿದ್ದರು ಎಂಬುದನ್ನು ಅವರ ಅನೇಕ ವಿದ್ಯಾರ್ಥಿಗಳು ಅಭಿನಂದನಾ ಗ್ರಂಥದಲ್ಲಿ ಸ್ಮರಿಸಿದ್ದಾರೆ.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವ ವಿದ್ಯಾಲಯದಲ್ಲಿ ಇ–ಸಂಪನ್ಮೂಲ ಕ್ರಾಂತಿ:

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ (VTU) ಇ–ರಿಸೋರ್ಸ್ ಕನ್ಸೋರ್ಟಿಯಂ ಅಭಿವೃದ್ಧಿಯಲ್ಲಿ ಪ್ರೊ. ಕೊಣ್ಣೂರು ಅವರ ಪಾತ್ರ ವಿಶೇಷವಾಗಿ ಉಲ್ಲೇಖನೀಯವಾಗಿದೆ.

ತಾಂತ್ರಿಕ ಶಿಕ್ಷಣ ಪಡೆಯುತ್ತಿರುವ ಎಲ್ಲ ವಿದ್ಯಾರ್ಥಿಗಳಿಗೂ ಗುಣಮಟ್ಟದ ಜ್ಞಾನ ಸಂಪನ್ಮೂಲಗಳು ಲಭ್ಯವಾಗಬೇಕು. ದೊಡ್ಡ ಕಾಲೇಜುಗಳಿಗೆ ಮಾತ್ರವಲ್ಲದೆ, ಕಡಿಮೆ ಸಂಪನ್ಮೂಲ ಹೊಂದಿರುವ ಕಾಲೇಜುಗಳ ವಿದ್ಯಾರ್ಥಿಗಳಿಗೂ ಸಮಾನ ಅವಕಾಶ ದೊರೆಯಬೇಕು ಎಂಬುದು ಅವರ ದೃಢ ನಿಲುವಾಗಿತ್ತು.

ಈ ಉದ್ದೇಶದಿಂದ ವಿಶ್ವವಿದ್ಯಾಲಯದ ಸಂಯೋಜಿತ ಎಂಜಿನಿಯರಿಂಗ್ ಕಾಲೇಜುಗಳಿಗೆ ಇ–ಪುಸ್ತಕಗಳು, ಇ–ಜರ್ನಲ್‌ಗಳು ಮತ್ತು ಇತರ ಡಿಜಿಟಲ್ ಶೈಕ್ಷಣಿಕ ಸಂಪನ್ಮೂಲಗಳನ್ನು ಒದಗಿಸುವ ಸಾಮೂಹಿಕ ವ್ಯವಸ್ಥೆ ರೂಪಿಸುವಲ್ಲಿ ಅವರು ಮಹತ್ವದ ಪಾತ್ರ ವಹಿಸಿದರು.

ಸಂಸ್ಥೆಗಳು ಪ್ರತ್ಯೇಕವಾಗಿ ದುಬಾರಿ ಚಂದಾದಾರಿಕೆಗಳನ್ನು ಪಡೆಯುವ ಬದಲು ಒಟ್ಟಾಗಿ ಸಂಪನ್ಮೂಲಗಳನ್ನು ಖರೀದಿಸುವುದರಿಂದ ವೆಚ್ಚ ಕಡಿಮೆಯಾಗುವುದರ ಜೊತೆಗೆ ಹೆಚ್ಚಿನ ವಿದ್ಯಾರ್ಥಿಗಳಿಗೆ ಜ್ಞಾನ ಸಂಪನ್ಮೂಲಗಳು ಲಭ್ಯವಾಗುವಂತಾಯಿತು.

ಈ ಯೋಜನೆಯೊಂದಿಗೆ ಸಂಬಂಧಿಸಿದಂತೆ ಇ–ಸಂಪನ್ಮೂಲಗಳ ಬಳಕೆ, ತರಬೇತಿ ಮತ್ತು ಕಾರ್ಯನಿರ್ವಹಣೆಗೆ ಹಲವು ಕಾರ್ಯಕ್ರಮಗಳನ್ನು ರೂಪಿಸಲಾಯಿತು. ಗ್ರಂಥಪಾಲಕರಿಗೆ ತರಬೇತಿ ನೀಡುವ Train-the-Trainer ಕಾರ್ಯಕ್ರಮಗಳು, ಸ್ನಾತಕೋತ್ತರ ಡಿಪ್ಲೊಮಾ ಶಿಕ್ಷಣ ಹಾಗೂ ತಾಂತ್ರಿಕ ಮಾಹಿತಿ ಸೇವೆಗಳ ಅಭಿವೃದ್ಧಿಗೂ ಅವರು ನೆರವಾದರು.

ಇದಲ್ಲದೆ, ವಿಶ್ವವಿದ್ಯಾಲಯಗಳ ಗ್ರಂಥಾಲಯ ಕ್ಷೇತ್ರದಲ್ಲಿ ಮುಕ್ತ ತಂತ್ರಾಂಶಗಳ (Free and Open Source Software – FOSS) ಬಳಕೆಯನ್ನು ಉತ್ತೇಜಿಸಿದರು. ಗ್ರಂಥಾಲಯ ನಿರ್ವಹಣಾ ತಂತ್ರಾಂಶಗಳ ಜನಪ್ರಿಯತೆ ಮತ್ತು ಅನುಷ್ಠಾನಕ್ಕೆ ಶ್ರಮಿಸಿದರು.

ಅಕಾಡೆಮಿ ಸ್ಥಾಪನೆ: ಒಂದು ಸಂಸ್ಥೆಯ ಮೂಲಕ ಸಾವಿರಾರು ವೃತ್ತಿಪರರಿಗೆ ಮಾರ್ಗದರ್ಶನ

ಪ್ರೊ. ಕೊಣ್ಣೂರು ಅವರ ಸಾಧನೆಗಳಲ್ಲಿ ಅತ್ಯಂತ ಮಹತ್ವದ ಮೈಲಿಗಲ್ಲು ಎಂದರೆ LIS Academy ಸ್ಥಾಪನೆ.

2013ರಲ್ಲಿ ವಿಶ್ವವಿದ್ಯಾಲಯದ ಸಕ್ರಿಯ ಸೇವೆಯಿಂದ ನಿವೃತ್ತರಾದ ನಂತರವೂ ಅವರು ವಿಶ್ರಾಂತ ಜೀವನಕ್ಕೆ ಸೀಮಿತರಾಗಲಿಲ್ಲ. ತಮ್ಮ ಅನುಭವ, ಜ್ಞಾನ ಮತ್ತು ವೃತ್ತಿಪರ ಸಂಪರ್ಕಗಳನ್ನು ಗ್ರಂಥಾಲಯ ಕ್ಷೇತ್ರದ ಅಭಿವೃದ್ಧಿಗೆ ಬಳಸಬೇಕೆಂಬ ಉದ್ದೇಶದಿಂದ 2016ರ ನವೆಂಬರ್‌ನಲ್ಲಿ ಬೆಂಗಳೂರಿನಲ್ಲಿ LIS Academy ಸ್ಥಾಪನೆಗೆ ಮುಂದಾದರು.

ಕೆಲವು ಸಮಾನ ಮನಸ್ಕ ವೃತ್ತಿಪರರು ಮತ್ತು ಸಹೋದ್ಯೋಗಿಗಳ ಸಹಕಾರದೊಂದಿಗೆ ಸ್ಥಾಪನೆಯಾದ ಈ ಸಂಸ್ಥೆಯ ಸ್ಥಾಪಕ ಅಧ್ಯಕ್ಷರಾಗಿ ಅವರು ಕಾರ್ಯನಿರ್ವಹಿಸುತ್ತಿದ್ದಾರೆ.

ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಕ್ಷೇತ್ರದ ವೃತ್ತಿಪರರಿಗೆ ನಿರಂತರ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಸಂಶೋಧನಾ ಮಾರ್ಗದರ್ಶನ ಮತ್ತು ತಂತ್ರಜ್ಞಾನ ತರಬೇತಿ ನೀಡುವುದು ಅಕಾಡೆಮಿಯ ಪ್ರಮುಖ ಉದ್ದೇಶವಾಗಿದೆ.

LIS Academy ಮೂಲಕ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣಗಳು, ಕಾರ್ಯಾ ಗಾರಗಳು, ಸಮ್ಮೇಳನಗಳು ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸ ಲಾಗುತ್ತಿದೆ. ವಿಶೇಷವಾಗಿ ಯುವ ಗ್ರಂಥಪಾಲಕರು, ಸಂಶೋಧಕರು ಮತ್ತು ಉಪನ್ಯಾಸಕರಿಗೆ ತಮ್ಮ ಜ್ಞಾನವನ್ನು ವಿಸ್ತರಿಸಿಕೊಳ್ಳಲು, ಹೊಸ ತಂತ್ರಜ್ಞಾನಗಳನ್ನು ಅರಿತುಕೊಳ್ಳಲು ಹಾಗೂ ವೃತ್ತಿಪರ ಸಂಪರ್ಕಗಳನ್ನು ಬೆಳೆಸಿಕೊಳ್ಳಲು ಈ ಅಕಾಡೆಮಿ ಉತ್ತಮ ವೇದಿಕೆಯಾಗಿದೆ.

ಅಕಾಡೆಮಿಯ ನೇತೃತ್ವದಲ್ಲಿ ಆಯೋಜಿಸಲಾಗುತ್ತಿರುವ ಐಚುಖಂಅಔಓ ಸಮ್ಮೇಳನಗಳು ದೇಶದ ವಿವಿಧ ಭಾಗಗಳ ಗ್ರಂಥಾಲಯ ವೃತ್ತಿಪರರನ್ನು ಒಂದೇ ವೇದಿಕೆಗೆ ತರುವಲ್ಲಿ ಯಶಸ್ವಿಯಾಗಿವೆ. ವಿವಿಧ ವಿಶ್ವ ವಿದ್ಯಾಲಯಗಳು ಮತ್ತು ಸಂಸ್ಥೆಗಳ ಸಹಯೋಗದಲ್ಲಿ ನಡೆಯುವ ಈ ಕಾರ್ಯಕ್ರಮಗಳು ಗ್ರಂಥಾಲಯ ಕ್ಷೇತ್ರದ ಹೊಸ ಬೆಳವಣಿಗೆಗಳು ಹಾಗೂ ಸವಾಲುಗಳ ಕುರಿತು ಚರ್ಚಿಸಲು ಅವಕಾಶ ಕಲ್ಪಿಸುತ್ತಿವೆ.

ವೃತ್ತಿಜೀವನದಿಂದ ನಿವೃತ್ತರಾದರೂ ವೃತ್ತಿಯ ಸೇವೆಯಿಂದ ನಿವೃತ್ತರಾಗಬಾರದು ಎಂಬುದನ್ನು ತಮ್ಮ ಕಾರ್ಯಗಳ ಮೂಲಕ ತೋರಿಸಿಕೊಟ್ಟಿರುವುದು ಅವರ ವಿಶೇಷತೆ.

ಸಂಶೋಧನೆ, ಪುಸ್ತಕಗಳು ಮತ್ತು ಶೈಕ್ಷಣಿಕ ಮಾರ್ಗದರ್ಶನ

ಪ್ರೊ. ಕೊಣ್ಣೂರು ಅವರ ಸಾಧನೆ ಆಡಳಿತ ಮತ್ತು ಸಂಸ್ಥೆಗಳ ಅಭಿವೃದ್ಧಿಗೆ ಮಾತ್ರ ಸೀಮಿತವಾಗಿಲ್ಲ. ಬೋಧನೆ, ಸಂಶೋಧನೆ ಮತ್ತು ಶೈಕ್ಷಣಿಕ ಬರವಣಿಗೆಯಲ್ಲಿಯೂ ಅವರು ಗಮನಾರ್ಹ ಕೊಡುಗೆ ನೀಡಿದ್ದಾರೆ.

ಮೂರು ಸ್ವರಚಿತ ಪುಸ್ತಕಗಳು, ನಾಲ್ಕು ಸಂಪಾದಿತ ಕೃತಿಗಳು ಹಾಗೂ ನಲವತ್ತಕ್ಕೂ ಹೆಚ್ಚು ಸಂಶೋಧನಾ ಲೇಖನಗಳು ಮತ್ತು ಸಮ್ಮೇಳನ ಪ್ರಬಂಧಗಳು ಅವರ ಶೈಕ್ಷಣಿಕ ಸಾಧನೆಗೆ ಸಾಕ್ಷಿಯಾಗಿವೆ.

ಎಂಟು ಪಿಎಚ್.ಡಿ. ಸಂಶೋಧಕರಿಗೆ ಮಾರ್ಗದರ್ಶನ ನೀಡಿರುವ ಅವರು, ನೂರಾರು ಗ್ರಂಥಾಲಯ ವೃತ್ತಿಪರರ ತರಬೇತಿ ಮತ್ತು ಜ್ಞಾನವರ್ಧನೆ ಕಾರ್ಯಕ್ರಮಗಳಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಸೇವೆ ಸಲ್ಲಿಸಿದ್ದಾರೆ. ಗ್ರಂಥಾಲಯ ಕ್ಷೇತ್ರದ ಹೊಸ ಬೆಳವಣಿಗೆಗಳು, ಮಾಹಿತಿ ತಂತ್ರಜ್ಞಾನ, ಸಂಶೋಧನಾ ವಿಧಾನಗಳು ಮತ್ತು ವೃತ್ತಿಪರ ಕೌಶಲ್ಯಗಳ ಕುರಿತು ಅವರ ಮಾರ್ಗದರ್ಶನ ಅನೇಕ ಯುವಕರಿಗೆ ಪ್ರಯೋಜನಕಾರಿಯಾಗಿದೆ.

ಕರ್ನಾಟಕದ ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಗ್ರಾಮೀಣ ಜ್ಞಾನ ಕೇಂದ್ರಗಳನ್ನಾಗಿ ಪರಿವರ್ತಿಸುವ ಕುರಿತು ಅವರು ನಡೆಸಿದ ಸಂಶೋಧನಾ ಕಾರ್ಯವೂ ಗಮನಾರ್ಹವಾಗಿದೆ. ಈ ಸಂಶೋಧನೆಗೆ ತುಮಕೂರು ವಿಶ್ವ ವಿದ್ಯಾಲಯವು 2024ರಲ್ಲಿ ಡಾಕ್ಟರ್ ಆಫ್ ಸೈನ್ಸ್ (D.Sc.) ಪದವಿ ನೀಡಿ ಗೌರವಿಸಿದೆ.

ಇದು ಗ್ರಾಮೀಣ ಭಾಗದ ಜನರಿಗೆ ಜ್ಞಾನ ಮತ್ತು ಮಾಹಿತಿ ಸಂಪನ್ಮೂಲಗಳನ್ನು ತಲುಪಿಸುವ ಅವರ ಸಾಮಾಜಿಕ ಕಾಳಜಿಗೆ ಮತ್ತೊಂದು ನಿದರ್ಶನವಾಗಿದೆ.

ರಾಜ್ಯ ಮಟ್ಟದ ಗ್ರಂಥಾಲಯ ಅಭಿವೃದ್ಧಿ ಮತ್ತು ಸಂಘಟನಾ ಚಟುವಟಿಕೆಗಳು:

ಕರ್ನಾಟಕದ ಗ್ರಂಥಾಲಯ ಕ್ಷೇತ್ರದ ನೀತಿ ರೂಪಿಸುವಿಕೆ ಮತ್ತು ವೃತ್ತಿಪರ ಸಂಘಟನೆಗಳಲ್ಲಿಯೂ ಪ್ರೊ. ಕೊಣ್ಣೂರು ಸಕ್ರಿಯ ಪಾತ್ರ ವಹಿಸಿದ್ದಾರೆ.

ಕರ್ನಾಟಕ ಸರ್ಕಾರದ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ರಾಜ್ಯ ಪುಸ್ತಕ ಆಯ್ಕೆ ಸಮಿತಿಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದಾರೆ. ಕರ್ನಾಟಕ ಜ್ಞಾನ ಆಯೋಗದಲ್ಲಿಯೂ ಪ್ರಮುಖ ಜವಾಬ್ದಾರಿ ನಿರ್ವಹಿಸಿದ್ದಾರೆ.

ಕರ್ನಾಟಕದಲ್ಲಿ ಆಗಸ್ಟ್ 12ರಂದು ಗ್ರಂಥಪಾಲಕರ ದಿನಾಚರಣೆ ಆಚರಿಸುವ ಪ್ರಯತ್ನಗಳಿಗೆ ಸಲಹೆ ಮತ್ತು ಸಹಕಾರ ನೀಡಿದ ಅವರ ಪಾತ್ರವನ್ನು ಹಿರಿಯ ಗ್ರಂಥಾಲಯ ಅಧಿಕಾರಿಗಳು ಸ್ಮರಿಸಿದ್ದಾರೆ.

ಗ್ರಂಥಾಲಯಗಳ ಅಭಿವೃದ್ಧಿ ಎಂದರೆ ಕೇವಲ ಕಟ್ಟಡ ನಿರ್ಮಾಣ ಅಥವಾ ಪುಸ್ತಕಗಳ ಖರೀದಿಯಲ್ಲ. ಗ್ರಂಥಪಾಲಕರಿಗೆ ಸೂಕ್ತ ತರಬೇತಿ, ಆಧುನಿಕ ತಂತ್ರಜ್ಞಾನದ ಬಳಕೆ, ಸಂಶೋಧನಾ ಸಾಮರ್ಥ್ಯ ವೃದ್ಧಿ ಮತ್ತು ಸಾರ್ವಜನಿಕರಿಗೆ ಗುಣಮಟ್ಟದ ಮಾಹಿತಿ ಸೇವೆ ಒದಗಿಸುವುದು ಕೂಡ ಅಷ್ಟೇ ಮುಖ್ಯ ಎಂಬುದು ಅವರ ಅಭಿಪ್ರಾಯವಾಗಿದೆ.

ಈ ನಿಟ್ಟಿನಲ್ಲಿ ದೇಶದ ವಿವಿಧ ಭಾಗಗಳಲ್ಲಿ 43ಕ್ಕೂ ಹೆಚ್ಚು ರಿಫ್ರೆಶರ್ ಕೋರ್ಸ್‌ಗಳಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿರುವುದು ಅವರ ವೃತ್ತಿಪರ ಬದ್ಧತೆಯನ್ನು ತೋರಿಸುತ್ತದೆ. LISACON ಸೇರಿದಂತೆ ವಿವಿಧ ಸಮ್ಮೇಳನಗಳ ಮೂಲಕ ದೇಶದ ಗ್ರಂಥಾಲಯ ವೃತ್ತಿಪರರನ್ನು ಪರಸ್ಪರ ಸಂಪರ್ಕಿಸುವ ಕಾರ್ಯವನ್ನೂ ಮುಂದುವರಿಸಿದ್ದಾರೆ.

ಸರಳ ವ್ಯಕ್ತಿತ್ವ, ಸ್ನೇಹಪರ ನಡವಳಿಕೆ, ವಿಶಾಲ ಹೃದಯ:

ಒಬ್ಬ ವ್ಯಕ್ತಿಯ ಸಾಧನೆಯನ್ನು ಅವರ ಪದವಿ, ಹುದ್ದೆ ಮತ್ತು ಪ್ರಶಸ್ತಿಗಳಿಂದ ಮಾತ್ರ ಅಳೆಯಲು ಸಾಧ್ಯವಿಲ್ಲ. ಅವರು ಇತರರ ಬದುಕಿನಲ್ಲಿ ಮೂಡಿಸಿರುವ ಪ್ರಭಾವ, ನೀಡಿರುವ ಮಾರ್ಗದರ್ಶನ ಮತ್ತು ಬೆಳೆಸಿರುವ ಮಾನವೀಯ ಸಂಬಂಧಗಳೂ ಅವರ ವ್ಯಕ್ತಿತ್ವವನ್ನು ನಿರ್ಧರಿಸುತ್ತವೆ.

ಈ ದೃಷ್ಟಿಯಿಂದ ಪ್ರೊ. ಕೊಣ್ಣೂರು ಅವರ ವ್ಯಕ್ತಿತ್ವವನ್ನು ಅಭಿನಂದನಾ ಗ್ರಂಥದಲ್ಲಿ ಲೇಖಕರು ವಿಶೇಷವಾಗಿ ಚಿತ್ರಿಸಿದ್ದಾರೆ.

ಸರಳತೆ, ನೇರ ನಡೆನುಡಿ, ಸಹಾಯ ಮಾಡುವ ಮನೋಭಾವ, ಆತ್ಮೀಯತೆ ಮತ್ತು ಆತಿಥ್ಯ ಅವರ ಪ್ರಮುಖ ಗುಣಗಳೆಂದು ಸಹೋದ್ಯೋಗಿಗಳು ಹಾಗೂ ವಿದ್ಯಾರ್ಥಿಗಳು ಬಣ್ಣಿಸಿದ್ದಾರೆ. ತಮ್ಮೊಂದಿಗೆ ಕೆಲಸ ಮಾಡುವವರನ್ನು ಪ್ರೋತ್ಸಾಹಿಸುವುದು, ಯುವ ಪ್ರತಿಭೆಗಳಿಗೆ ಅವಕಾಶ ಕಲ್ಪಿಸುವುದು ಮತ್ತು ಸಹೋದ್ಯೋಗಿಗಳ ಸಮಸ್ಯೆಗಳಿಗೆ ಸ್ಪಂದಿಸುವುದು ಅವರ ಸಹಜ ಗುಣಗಳಾಗಿವೆ.

ಅವರ ಮಾರ್ಗದರ್ಶನದಿಂದ ಉನ್ನತ ಹುದ್ದೆಗಳನ್ನು ಅಲಂಕರಿಸಿರುವ ಅನೇಕ ವಿದ್ಯಾರ್ಥಿಗಳು ಮತ್ತು ವೃತ್ತಿಪರರು ಅಭಿನಂದನಾ ಗ್ರಂಥದಲ್ಲಿ ತಮ್ಮ ಅನುಭವಗಳನ್ನು ಹಂಚಿಕೊಂಡಿದ್ದಾರೆ.

ತಮ್ಮ ಗುರುಗಳಾದ ಪ್ರೊ. ಎಸ್.ಎಲ್. ಸಂಗಮ್ ಅವರ ಬಗ್ಗೆ ಅಪಾರ ಗೌರವ ಹೊಂದಿರುವ ಅವರು, ಗುರು–ಶಿಷ್ಯ ಪರಂಪರೆಯ ಮೌಲ್ಯಗಳನ್ನು ತಮ್ಮ ಜೀವನದಲ್ಲಿಯೂ ಪಾಲಿಸಿಕೊಂಡು ಬಂದಿದ್ದಾರೆ.

ಕುಟುಂಬದ ವಿಚಾರದಲ್ಲಿಯೂ ಪತ್ನಿ ಶ್ರೀಮತಿ ಶಾಂತಕ್ಕ ಅವರು ತಮ್ಮ ಸಾಧನೆಯ ಪಯಣದಲ್ಲಿ ಪ್ರಮುಖ ಬೆಂಬಲವಾಗಿ ನಿಂತಿದ್ದಾರೆ. ಮಗಳು ಸಹನಾ, ಮಗ ವೆಂಕಟೇಶ್ ಹಾಗೂ ಕುಟುಂಬದ ಇತರ ಸದಸ್ಯರ ಪ್ರೀತಿ ಮತ್ತು ಸಹಕಾರ ಅವರ ಜೀವನದ ಸಂತೋಷದ ಭಾಗವಾಗಿದೆ ಎಂದು ಅಭಿನಂದನಾ ಗ್ರಂಥದ ಲೇಖಕರು ಉಲ್ಲೇಖಿಸಿದ್ದಾರೆ.

ಅಭಿನಂದನಾ ಗ್ರಂಥದಲ್ಲಿ ಗಣ್ಯರ ಮೆಚ್ಚುಗೆ:

'ಚೈತನ್ಯ ಪಥ' ಅಭಿನಂದನಾ ಗ್ರಂಥವು ಕೇವಲ ಒಬ್ಬ ವ್ಯಕ್ತಿಯ ಜೀವನಚರಿತ್ರೆಯಲ್ಲ. ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಕ್ಷೇತ್ರದ ಬೆಳವಣಿಗೆ, ಅದರಲ್ಲಿನ ತಾಂತ್ರಿಕ ಬದಲಾವಣೆಗಳು, ವೃತ್ತಿಪರ ಸಂಘಟನೆಗಳ ಪಾತ್ರ ಮತ್ತು ಶೈಕ್ಷಣಿಕ ಪರಿವರ್ತನೆಯ ದಾಖಲೆಯೂ ಆಗಿದೆ.

ಈ ಗ್ರಂಥಕ್ಕೆ ಹಲವು ಗಣ್ಯರು ತಮ್ಮ ಶುಭಾಶಯ ಮತ್ತು ಮೆಚ್ಚುಗೆಯ ಸಂದೇಶಗಳನ್ನು ನೀಡಿದ್ದಾರೆ.

ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆಯವರು ಪ್ರೊ. ಕೊಣ್ಣೂರು ಅವರ ಶಿಕ್ಷಣ ಮತ್ತು ಸಾಮಾಜಿಕ ಕ್ಷೇತ್ರದ ಸೇವೆಯನ್ನು ಗುರುತಿಸಿ ಅಭಿನಂದಿಸಿದ್ದಾರೆ.

ಸಿದ್ಧಗಂಗಾ ಮಠದ ಶ್ರೀ ಸಿದ್ಧಲಿಂಗ ಸ್ವಾಮೀಜಿಯವರು, ಒಳ್ಳೆಯವರು ತಮ್ಮ ಬದುಕು ಮತ್ತು ಗಳಿಕೆಯನ್ನು ಸಮಾಜಕ್ಕಾಗಿ ಅರ್ಪಿಸುತ್ತಾರೆ ಎಂಬ ಮಾತು ಪ್ರೊ. ಕೊಣ್ಣೂರು ಅವರಿಗೆ ಸೂಕ್ತವಾಗಿ ಅನ್ವಯಿಸುತ್ತದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ಸರ್ಕಾರದ ಸಚಿವ ಎಂ.ಬಿ. ಪಾಟೀಲರು ರೈತ ಕುಟುಂಬದಿಂದ ಬಂದ ಪ್ರೊ. ಕೊಣ್ಣೂರು ಅವರು ಶೈಕ್ಷಣಿಕ ಕ್ಷೇತ್ರದಲ್ಲಿ ಉನ್ನತ ಸಾಧನೆ ಮಾಡಿರುವುದನ್ನು ಗುರುತಿಸಿ, ಅವರ ಜೀವನ ಗ್ರಾಮೀಣ ಯುವಜನರಿಗೆ ಪ್ರೇರಣಾದಾಯಕವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಶಾಸಕ ಹಾಗೂ ಮಾಜಿ ಸಚಿವ ಎಚ್.ಕೆ. ಪಾಟೀಲರು ಕೂಡ ಅವರ ಗ್ರಂಥಾಲಯ ಕ್ಷೇತ್ರದ ಸೇವೆ ಮತ್ತು ಸಾಧನೆಯನ್ನು ಶ್ಲಾಘಿಸಿದ್ದಾರೆ.

ದಕ್ಷಿಣ ಏಷ್ಯಾ ವಿಶ್ವವಿದ್ಯಾಲಯದ ಅಧ್ಯಕ್ಷ ಪ್ರೊ. ಕೆ.ಕೆ. ಅಗರ್ವಾಲ್ ಅವರು ಪ್ರೊ. ಕೊಣ್ಣೂರು ಅವರನ್ನು ಒಬ್ಬ ಸಮರ್ಥ ಸಂಸ್ಥೆ ನಿರ್ಮಾತೃ ಎಂದು ಬಣ್ಣಿಸಿದ್ದಾರೆ. ಅವರು ಸ್ಥಾಪಿಸಿ ಬೆಳೆಸಿದ ಎಲ್ ಐ ಎಸ್ ಅಕೆಡೆಮಿ ಇಂದು ವೃತ್ತಿಪರರ ಪ್ರಮುಖ ವೇದಿಕೆಯಾಗಿ ಬೆಳೆದಿರುವುದನ್ನು ಪ್ರಶಂಸಿಸಿದ್ದಾರೆ.

ಈ ಮೆಚ್ಚುಗೆಯ ಸಂದೇಶಗಳು ಪ್ರೊ. ಕೊಣ್ಣೂರು ಅವರ ಸಾಧನೆಗೆ ದೊರೆತಿರುವ ಗೌರವದ ಪ್ರತೀಕಗಳಾಗಿವೆ.

'ಚೈತನ್ಯ ಪಥ'– ಇದು ಅಭಿನಂದನಾ ಗ್ರಂಥ. ಸಾಧನೆಯ ಬದುಕಿನ ಸಮಗ್ರ ದಾಖಲೆ

ಕನ್ನಡ ಮತ್ತು ಇಂಗ್ಲಿಷ್ ವಿಭಾಗಗಳಲ್ಲಿ ಹಿರಿಯ ವಿದ್ವಾಂಸರು, ಸಹೋದ್ಯೋಗಿಗಳು, ವಿದ್ಯಾರ್ಥಿಗಳು ಹಾಗೂ ಅಭಿಮಾನಿಗಳು ಬರೆದಿರುವ ಲೇಖನಗಳು ಸೇರಿವೆ.

ಕನ್ನಡ ವಿಭಾಗದಲ್ಲಿ ಅವರ ಜ್ಞಾನ, ನಾಯಕತ್ವ, ಗುರುತ್ವ, ಸ್ನೇಹ, ಸಂಸ್ಥೆ ನಿರ್ಮಾಣದ ಸಾಮರ್ಥ್ಯ ಮತ್ತು ವೃತ್ತಿಪರ ಸೇವೆಯನ್ನು ವಿವರಿಸುವ ಲೇಖನಗಳಿವೆ. ಇಂಗ್ಲಿಷ್ ವಿಭಾಗದಲ್ಲಿ ಅವರ ವೃತ್ತಿಜೀವನದ ಅಂತರರಾಷ್ಟ್ರೀಯ ಆಯಾಮಗಳು, ಗ್ರಂಥಾಲಯಗಳ ಆಧುನೀಕರಣ, ಡಿಜಿಟಲ್ ಸಂಪನ್ಮೂಲಗಳು ಮತ್ತು ಸಂಸ್ಥೆಗಳ ಅಭಿವೃದ್ಧಿಯ ಕುರಿತು ಲೇಖನಗಳನ್ನು ಕಾಣಬಹುದು.

ಗ್ರಂಥದ ವಿಶೇಷತೆಯೆಂದರೆ, ಇದರಲ್ಲಿ ಕೇವಲ ಪ್ರಶಂಸೆಯ ಮಾತುಗಳಿಲ್ಲ. ಅವರೊಂದಿಗೆ ಕೆಲಸ ಮಾಡಿದವರು ಮತ್ತು ಅವರಿಂದ ಮಾರ್ಗದರ್ಶನ ಪಡೆದವರು ತಮ್ಮ ಜೀವನದಲ್ಲಿ ನಡೆದ ನೈಜ ಘಟನೆಗಳನ್ನು ಹಂಚಿಕೊಂಡಿದ್ದಾರೆ. ಹೀಗಾಗಿ ಈ ಕೃತಿ ಮುಂದಿನ ಪೀಳಿಗೆಯ ಗ್ರಂಥಾಲಯ ವಿಜ್ಞಾನ ವಿದ್ಯಾರ್ಥಿಗಳಿಗೆ ಹಾಗೂ ಸಂಶೋಧಕರಿಗೆ ಉಪಯುಕ್ತವಾದ ಆಕರ ಗ್ರಂಥವಾಗಿಯೂ ಉಳಿಯಲಿದೆ.

ಯುವ ಪೀಳಿಗೆಗೆ ಮಾದರಿಯಾದ ಸಾಧನೆಯ ಪಯಣ:

ಪ್ರೊ. ಪಿ.ವಿ. ಕೊಣ್ಣೂರು ಅವರ ಬದುಕನ್ನು ಗಮನಿಸಿದಾಗ ಹಲವು ಮಹತ್ವದ ಸಂದೇಶಗಳು ನಮಗೆ ದೊರೆಯುತ್ತವೆ.

ಸಣ್ಣ ಹುದ್ದೆಯಿಂದ ವೃತ್ತಿಜೀವನ ಆರಂಭಿಸಿದರೂ ನಿರಂತರ ಶಿಕ್ಷಣ ಮತ್ತು ಪರಿಶ್ರಮದ ಮೂಲಕ ಉನ್ನತ ಸ್ಥಾನಕ್ಕೇರಬಹುದು ಎಂಬುದನ್ನು ಅವರು ತೋರಿಸಿದ್ದಾರೆ. ತಂತ್ರಜ್ಞಾನ ಬದಲಾಗುತ್ತಿದ್ದಂತೆ ಹೊಸ ಕೌಶಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂಬುದನ್ನು ತಮ್ಮ ಕಾರ್ಯಗಳ ಮೂಲಕ ಸಾಬೀತುಪಡಿಸಿದ್ದಾರೆ.

ಅಧಿಕಾರ ಮತ್ತು ಹುದ್ದೆಗಳನ್ನು ವೈಯಕ್ತಿಕ ಗೌರವಕ್ಕೆ ಮಾತ್ರ ಬಳಸದೆ, ಸಂಸ್ಥೆಗಳ ಅಭಿವೃದ್ಧಿ ಮತ್ತು ಸಮಾಜದ ಹಿತಕ್ಕಾಗಿ ಬಳಸಬೇಕು ಎಂಬುದಕ್ಕೆ ಅವರ ಜೀವನವೇ ಉದಾಹರಣೆ.

ನಿವೃತ್ತಿಯ ನಂತರವೂ ವೃತ್ತಿಯ ಬೆಳವಣಿಗೆಗಾಗಿ ಶ್ರಮಿಸುವುದು, ಯುವ ಪ್ರತಿಭೆಗಳನ್ನು ಗುರುತಿಸಿ ಬೆಳೆಸುವುದು ಹಾಗೂ ಜ್ಞಾನವನ್ನು ಮುಂದಿನ ಪೀಳಿಗೆಗೆ ಹಂಚುವುದು ಅವರ ಜೀವನದ ಪ್ರಮುಖ ಆಶಯವಾಗಿದೆ.

ಗ್ರಂಥಾಲಯ ಕ್ಷೇತ್ರದ ಪರಿವರ್ತನೆಯ ಪಯಣದಲ್ಲಿ ಪ್ರೊ. ಕೊಣ್ಣೂರು ಅವರ ಕೊಡುಗೆ ಸ್ಮರಣೀಯವಾಗಿದೆ. ಸಾಂಪ್ರದಾಯಿಕ ಗ್ರಂಥಾಲಯ ವ್ಯವಸ್ಥೆಯಿಂದ ಡಿಜಿಟಲ್ ಗ್ರಂಥಾಲಯಗಳವರೆಗೆ, ವೈಯಕ್ತಿಕ ಜ್ಞಾನದಿಂದ ಸಾಮೂಹಿಕ ಜ್ಞಾನ ಹಂಚಿಕೆಯವರೆಗೆ ಅವರು ನಡೆಸಿದ ಪ್ರಯತ್ನಗಳು ಈ ಕ್ಷೇತ್ರದ ಬೆಳವಣಿಗೆಗೆ ಬಲ ತುಂಬಿವೆ.

ಒಟ್ಟಿನಲ್ಲಿ, ಪ್ರೊ. ಪಿ.ವಿ. ಕೊಣ್ಣೂರು ಅವರು ಕೇವಲ ಒಬ್ಬ ಗ್ರಂಥಾಲಯ ವಿಜ್ಞಾನ ಪ್ರಾಧ್ಯಾಪಕರಲ್ಲ. ಜ್ಞಾನವನ್ನು ಹಂಚುವ ಶಿಕ್ಷಕ, ಪ್ರತಿಭೆಗಳನ್ನು ಬೆಳೆಸುವ ಗುರು, ಸಂಸ್ಥೆಗಳನ್ನು ಕಟ್ಟುವ ನಾಯಕ, ತಂತ್ರಜ್ಞಾನವನ್ನು ಅಳವಡಿಸುವ ದೂರದೃಷ್ಟಿಯ ಚಿಂತಕ ಹಾಗೂ ವೃತ್ತಿಪರ ಸಮುದಾಯವನ್ನು ಒಗ್ಗೂಡಿಸುವ ಸಂಘಟಕರಾಗಿದ್ದಾರೆ.

ಅವರ ಜೀವನ ಮತ್ತು ಸಾಧನೆಗಳನ್ನು ದಾಖಲಿಸಿರುವ 'ಚೈತನ್ಯ ಪಥ' ಅಭಿನಂದನಾ ಗ್ರಂಥವು ಜ್ಞಾನ, ಪರಿಶ್ರಮ, ವೃತ್ತಿಪರ ಬದ್ಧತೆ ಮತ್ತು ಸಮಾಜಸೇವೆಯ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಮಹತ್ವದ ಪ್ರಯತ್ನವಾಗಿದೆ.

ಜ್ಞಾನಕ್ಕಾಗಿ ಬದುಕಿದ, ವೃತ್ತಿಗಾಗಿ ದುಡಿದ, ಸಮಾಜಕ್ಕಾಗಿ ಸೇವೆ ಸಲ್ಲಿಸಿದ ಇಂತಹ ಸಾಧಕರ ಜೀವನ ನಿಜಕ್ಕೂ ಅನೇಕರಿಗೆ ಚೈತನ್ಯದ ಪಥವಾಗಲಿ. ●

ಹಾಕಿ ತಂಡದ ಮಾಜಿ ನಾಯಕ ಮನೆಯಲ್ಲಿ ಕಳ್ಳತನ: ಇಬ್ಬರ ಬಂಧನ– ಎಂಟು ಚಿನ್ನ–ಬೆಳ್ಳಿ ಪದಕಗಳ ವಶ

● ವಿಕ್ರಮ ವಾಹಿನಿ । ಬೆಂಗಳೂರು

ಭಾರತ ಹಾಕಿ ತಂಡದ ಮಾಜಿ ನಾಯಕ ಸೋಮಯ್ಯ ಅವರ ಮನೆಯಲ್ಲಿ ಕಳವು ಮಾಡಿಕೊಂಡು ಹೋಗಿದ್ದ ಇಬ್ಬರು ಆರೋಪಿಗಳನ್ನು ಇಂದಿರಾನಗರ ಠಾಣೆ ಪೊಲೀಸರು ಬಂಧಿಸಿ ಚಿನ್ನ, ಬೆಳ್ಳಿ ಪದಕಗಳು ಸೇರಿದಂತೆ 8 ಅಂತರಾಷ್ಟ್ರೀಯ ಪದಕಗಳನ್ನು ವಶಪಡಿಸಿಕೊಂಡಿದ್ದಾರೆ.

ಮಾಣಿಕ್ಯ ಅಲಿಯಾಸ್ ಮಣಿಕಾಂತ (31) ಮತ್ತು ಭರತ್ (25) ಬಂಧಿತ ಆರೋಪಿಗಳು.ಮಾಣಿಕ್ಯನ ವಿರುದ್ಧ ಕರ್ನಾಟಕದಲ್ಲಿ 25 ಪ್ರಕರಣಗಳು ಮತ್ತು ತಮಿಳುನಾಡಿನಲ್ಲಿ ಎಂಟು ಪ್ರಕರಣಗಳು ದಾಖಲಾಗಿವೆ. ಈತನ ವಿರುದ್ಧ 3 ಪ್ರೋಕ್ಲೋನೇಶನ್, ಆರು ಎನ್‌ಬಿಡಬ್ಲ್ಯೂ ಹೊರಡಿಸಲಾಗಿದೆ. ಆರೋಪಿ ಭರತ್ ವಿರುದ್ಧ 2 ಪ್ರಕರಣಗಳು ದಾಖಲಾಗಿವೆ. ಈ ಇಬ್ಬರು ಆರೋಪಿಗಳು ಬೆಂಗಳೂರು ನಗರದ ನಿವಾಸಿಗಳು.

ಬಿಎಲ್‌ಕಾವಲ್‌ನ 4ನೇ ಕ್ರಾಸ್‌ನಲ್ಲಿ ಸೋಮಯ್ಯ ಅವರು ವಾಸವಾಗಿದ್ದು, ಕುಟುಂಬ ಸಮೇತ ಕೊಡಗು ಜಿಲ್ಲೆಗೆ ಹೋಗಿದ್ದರು. ಆ ಸಂದರ್ಭದಲ್ಲಿ ಕಳ್ಳರು ಇವರ ಮನೆಯ ಮುಂಬಾಗಿಲಿನ ಬೀಗ ಹೊಡೆದು ಒಳನುಗ್ಗಿ ಅಂತರಾಷ್ಟ್ರೀಯ ಕ್ರೀಡೆಗಳಿಗೆ ಸಂಬಂಧಿಸಿದ ಚಿನ್ನ, ಬೆಳ್ಳಿ ಹಾಗೂ ಕಂಚಿನ ಪದಕಗಳ ಜೊತೆ ಚಿನ್ನಾಭರಣಗಳನ್ನು ಮತ್ತು ಹಣ ಕಳವು ಮಾಡಿಕೊಂಡು ಪರಾರಿಯಾಗಿದ್ದರು.

ಸೋಮಯ್ಯ ಅವರ ಕುಟುಂಬ ವಾಪಸ್ಸಾದಾಗ ಮನೆಯಲ್ಲಿ ಕಳ್ಳತನವಾಗಿರುವುದು ಕಂಡು ಬಂದಿದೆ. ಈ ಬಗ್ಗೆ ಅವರು ಪೊಲೀ ಸರಿಗೆ ದೂರು ನೀಡಿದ್ದಾರೆ.

ಆರೋಪಿಗಳ ಪತ್ತೆಗಾಗಿ 65 ಮಂದಿ ಸಿಬ್ಬಂದಿ ಮತ್ತು ಅಧಿಕಾರಿಗಳನ್ನೊಳಗೊಂಡ ಎಂಟು ವಿಶೇಷ ತಂಡಗಳನ್ನು ರಚಿಸಲಾಗಿತ್ತು. ಈ ತಂಡವು ವಿವಿಧ ಆಯಾಮಗಳಲ್ಲಿ ಕಾರ್ಯಾಚರಣೆ ಕೈಗೊಂಡು ಸಿಸಿ ಟಿವಿ ದೃಶ್ಯಾವಳಿಗಳನ್ನು ಆಧರಿಸಿ ಆರೋಪಿಗಳ ಬಗ್ಗೆ ಮಾಹಿತಿಗಳನ್ನು ಸಂಗ್ರಹಿಸಿವೆ. ಖಚಿತ ಮಾಹಿತಿ ಮೇರೆಗೆ ರಾಮನಗರದ ಹಾಗಲಹಳ್ಳಿ ಕ್ರಾಸ್ ಬಳಿ ಇಬ್ಬರು ಆರೋಪಿಗಳನ್ನು ಕೃತ್ಯಕ್ಕೆ ಬಳಸಿದ್ದ ದ್ವಿಚಕ್ರ ವಾಹನ ಸಮೇತ ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿದಾಗ ಮತ್ತೊಬ್ಬ ಸ್ನೇಹಿತನೊಂದಿಗೆ ಸೇರಿ ಕಳವು ಮಾಡಿರುವುದಾಗಿ ಬಾಯ್ಬಿಟ್ಟಿದ್ದಾರೆ.

ಆರೋಪಿಗಳನ್ನು ಠಾಣೆಗೆ ಕರೆದೊಯ್ದು ಸುದೀರ್ಘ ವಿಚಾರಣೆಗೆ ಒಳಪಡಿಸಲಾಗಿ, ಕಳವು ಮಾಡಿದ್ದ ಪದಕಗಳ ಪೈಕಿ ಒಂದು ಚಿನ್ನದ ಪದಕ ಮತ್ತು 1 ಬೆಳ್ಳಿ ಪದಕಗಳನ್ನು ರಾಜಾಜಿನಗರದ ಗೋಲ್ಡ್ ಕಂಪನಿಯೊಂದರಲ್ಲಿ ಮಾರಾಟ ಮಾಡಿರುವುದಾಗಿ ತಿಳಿಸಿದ್ದು, ಅದರಂತೆ ಪೊಲೀಸರು ಆ ಕಂಪನಿಯಿಂದ 2 ಪದಕಗಳನ್ನು ವಶಕ್ಕೆ ಪಡೆದಿದ್ದಾರೆ.

ಗ್ರಾಹಕರು ಅಡವಿಟ್ಟಿದ್ದ 1.2 ಕೆಜಿ ಚಿನ್ನ ಕಳ್ಳತನ; ಬ್ಯಾಂಕ್ ಮೌಲ್ಯಮಾಪಕನ ಬಂಧನ

● ವಿಕ್ರಮ ವಾಹಿನಿ । ಮುಖಪುಟದಿಂದ

ವಿವಿಧ ಗ್ರಾಹಕರು ತಮ್ಮ ಚಿನ್ನದ ಸಾಲಕ್ಕಾಗಿ ಅಡಮಾನವಿಟ್ಟಿದ್ದ ಒಟ್ಟು 1 ಕೆಜಿ 198 ಗ್ರಾಂ ಚಿನ್ನದ ಆಭರಣಗಳನ್ನು ಆರೋಪಿ ಕದ್ದಿದ್ದಾನೆ ಮತ್ತು ನಂತರ ಹಣ ಪಡೆಯಲು ಆ ಕದ್ದ ಆಭರಣಗಳನ್ನು ಬೇರೆ ಬೇರೆ ಕಡೆಗಳಲ್ಲಿ ಅಡಮಾನವಿಟ್ಟಿದ್ದಾನೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ ಎಂದು ಪೊಲೀಸರು ಹೇಳಿದ್ದಾರೆ. ಈ ಸಂಬಂಧ ರಾಜಾನುಕುಂಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ತನಿಖೆಯ ಸಂದರ್ಭದಲ್ಲಿ, ಪೊಲೀಸರು ವಿವಿಧ ಆಯಾಮಗಳಲ್ಲಿ ವಿಚಾರಣೆ ನಡೆಸಿ, ತಮ್ಮ ಮಾಹಿತಿ ಮೂಲಗಳ ಮೂಲಕ ಆರೋಪಿಯ ಬಗ್ಗೆ ಮಾಹಿತಿ ಸಂಗ್ರಹಿಸಿದ್ದಾರೆ.

"ಅಕ್ಟೋಬರ್ 13 ರಂದು ದೊಡ್ಡಬಳ್ಳಾಪುರದ ರೋಜಿಪುರ ಗೇಟ್ ಬಳಿಯ ಆತನ ಮನೆಯಿಂದ ಆರೋಪಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಯಿತು. ಈ ವೇಳೆ ಆತ ಪ್ರಕರಣದಲ್ಲಿ ತನ್ನ ಭಾಗಿಯಾಗಿರುವುದನ್ನು ಒಪ್ಪಿಕೊಂಡಿದ್ದಾನೆ" ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ನಂತರ ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ಹೆಚ್ಚಿನ ವಿಚಾರಣೆಗಾಗಿ 10 ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಲಾಗಿದೆ ಎಂದು ಅವರು ಹೇಳಿದರು.

ವಿಚಾರಣೆಯ ವೇಳೆ, ತಾನು ಕದ್ದ ಚಿನ್ನದ ಆಭರಣಗಳನ್ನು ರಾಜಾನುಕುಂಟೆಯ ನಾಲ್ಕು ಮತ್ತು ದೊಡ್ಡಬಳ್ಳಾಪುರದ ಎರಡು ಆಭರಣ ಅಂಗಡಿಗಳಲ್ಲಿ ಅಡಮಾನ ವಿಟ್ಟಿರುವುದಾಗಿ ಆತ ಬಹಿರಂಗಪಡಿಸಿದ್ದಾನೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಆರೋಪಿ ನೀಡಿದ ಮಾಹಿತಿಯ ಆಧಾರದ ಮೇಲೆ, ಅಕ್ಟೋಬರ್ 14 ರಿಂದ 22 ರ ನಡುವೆ ರಾಜಾನುಕುಂಟೆಯ ಎರಡು ಮತ್ತು ದೊಡ್ಡಬಳ್ಳಾಪುರದ ಎರಡು ಆಭರಣ ಅಂಗಡಿಗಳಿಂದ ಒಟ್ಟು 1 ಕೆಜಿ 198 ಗ್ರಾಂ ಚಿನ್ನದ ಆಭರಣಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ವಶಪಡಿಸಿಕೊಳ್ಳಲಾದ ಚಿನ್ನದ ಆಭರಣಗಳ ಮೌಲ್ಯ 1.80 ಕೋಟಿ ರೂಪಾಯಿ ಎಂದು ಪೊಲೀಸರು ತಿಳಿಸಿದ್ದಾರೆ. ಈ ಕಾರ್ಯಾಚರಣೆಯ ನಂತರ, ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

150 ಗಡಿ ದಾಟಿದ ಬೆಳಕಿನ ಹಬ್ಬದಂದು ಬದುಕು ಕತ್ತಲು ಮಾಡಿಕೊಂಡವರ ಸಂಖ್ಯೆ!

● ವಿಕ್ರಮ ವಾಹಿನಿ । ಮುಖಪುಟದಿಂದ

ಇನ್ನೂ ಪಟಾಕಿ ಅವಘಡದಲ್ಲಿ 21 ವರ್ಷದ ಗರ್ಭಿಣಿಯೊಬ್ಬರು ಗಂಭೀರವಾಗಿ ಗಾಯಗೊಂಡಿರುವುದು ಆತಂಕಕ್ಕೆ ಕಾರಣವಾಗಿದೆ. ಮಹಿಳೆ ತೊಡೆಯ ಮೇಲೆ ಪಟಾಕಿ ಬಾಕ್ಸ್ ಇಟ್ಟುಕೊಂಡಿದ್ದ ವೇಳೆ ಕಿಡಿ ತಗುಲಿ, ಬಾಕ್ಸ್‌ನಲ್ಲಿದ್ದ ಪಟಾಕಿಗಳೆಲ್ಲ ಒಮ್ಮೆಲೆ ಸಿಡಿದಿವೆ. ಪರಿಣಾಮ ಮಹಿಳೆಗೆ ಗಂಭೀರ ಗಾಯಗಳಾಗಿದ್ದು, ಐಸಿಯುನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಇದಲ್ಲದೆ, ಪಟಾಕಿ ಸಿಡಿತದಿಂದ ಮೂವರು ಮಕ್ಕಳ ಮುಖದ ಚರ್ಮ ಸುಟ್ಟುಹೋಗಿದೆ. ಗಾಯಾಳುಗಳಿಗೆ ಅಗತ್ಯ ಚಿಕಿತ್ಸೆ ಮುಂದುವರಿದಿದೆ ಎಂದು ವಿಕ್ಟೋರಿಯಾ ಆಸ್ಪತ್ರೆಯ ಸುಟ್ಟ ಗಾಯಗಳ ವಿಭಾಗದ ಮುಖ್ಯಸ್ಥ ಡಾ. ಎನ್.ಎ. ಯೋಗೇಶ್ವರಪ್ಪ ಮಾಹಿತಿ ನೀಡಿದ್ದಾರೆ.

ಒಟ್ಟಿನಲ್ಲಿ, ಪಟಾಕಿ ಸಂಭ್ರಮದ ನಡುವೆ ಸಂಭವಿಸುತ್ತಿರುವ ಅವಘಡಗಳು ಆತಂಕ ಮೂಡಿಸಿದ್ದು, ಪಟಾಕಿ ಸಿಡಿಸುವಾಗ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಅತ್ಯಗತ್ಯವಾಗಿದೆ. ಕ್ಷಣಿಕ ಸಂಭ್ರಮಕ್ಕಾಗಿ ನಿರ್ಲಕ್ಷ್ಯ ವಹಿಸಿದರೆ ಕಣ್ಣಿನ ದೃಷ್ಟಿಯನ್ನೇ ಕಳೆದುಕೊಳ್ಳುವ ಅಪಾಯವಿದೆ ಎಂಬುದನ್ನು ಈ ಘಟನೆಗಳು ಎಚ್ಚರಿಸಿವೆ.

ಬೆಂಗಳೂರು ಮೆಟ್ರೋ ಜಾಲ 100 ಕಿ.ಮೀ. ಮೈಲುಗಲ್ಲು

● ವಿಕ್ರಮ ವಾಹಿನಿ । ಒಂದನೇ ಪುಟದಿಂದ

ಪಿಂಕ್ ಲೈನ್ ಪೂರ್ಣ ಪ್ರಮಾಣ: ತಾವರೆಕೆರೆಯಿಂದ ನಾಗವಾರದವರೆಗಿನ 13.7 ಕಿ.ಮೀ. ಭೂಗತ ಮಾರ್ಗ ಪೂರ್ಣಗೊಂಡಾಗ ಪಿಂಕ್ ಲೈನ್ ಒಟ್ಟು 21.2 ಕಿ.ಮೀ. ತಲುಪಲಿದೆ.

ಬ್ಲೂ ಲೈನ್ ಸಂಪರ್ಕ: ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ ಕೆ.ಆರ್.ಪುರಂವರೆಗಿನ 19.75 ಕಿ.ಮೀ ಮತ್ತು ಹೆಬ್ಬಾಳದಿಂದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದವರೆಗಿನ ಮಾರ್ಗಗಳನ್ನು ಮುಂದಿನ ವರ್ಷವೇ ಮುಕ್ತಗೊಳಿಸುವ ಗುರಿ ಇದೆ. ಕೆ.ಆರ್.ಪುರಂ ನಿಂದ ಹೆಬ್ಬಾಳ ನಡುವಿನ ಸವಾಲಿನ ಮಾರ್ಗವನ್ನೂ ಪೂರ್ಣಗೊಳಿಸಿ, ಸಿಲ್ಕ್ ಬೋರ್ಡ್ ನಿಂದ ಏರ್ಪೋರ್ಟ್ ವರೆಗಿನ ಒಟ್ಟು 59 ಕಿ.ಮೀ ಸಂಪರ್ಕವನ್ನು ಶೀಘ್ರವೇ ಕಲ್ಪಿಸಲಾಗುವುದು.

ಆರೆಂಜ್ ಲೈನ್: ಜೆ.ಪಿ. ನಗರ 4ನೇ ಹಂತದಿಂದ ಮೈಸೂರು ರಸ್ತೆ, ಮಾಗಡಿ ರಸ್ತೆ ದಾಟಿ ಹೆಬ್ಬಾಳಕ್ಕೆ ತಲುಪುವ 32 ಕಿ.ಮೀ ಮಾರ್ಗ ಹಾಗೂ ಹೊಸಹಳ್ಳಿಯಿಂದ ಕಡಬಗೆರೆವರೆಗಿನ 12.5 ಕಿ.ಮೀ (ಒಟ್ಟು 44.5 ಕಿ.ಮೀ) ಆರೆಂಜ್ ಲೈನ್ ಗೆ ಮುಂದಿನ 6 ತಿಂಗಳಲ್ಲಿ ಟೆಂಡರ್ ಪ್ರಕ್ರಿಯೆ ಮುಗಿಸಿ ಭೂಮಿಪೂಜೆ ನೆರವೇರಿಸಲಾಗುವುದು.

ರೆಡ್ ಲೈನ್: ಸರ್ಜಾಪುರದಿಂದ ಹೆಬ್ಬಾಳ ದವರೆಗೆ 37.8 ಕಿ.ಮೀ. ಉದ್ದದ ರೆಡ್ ಲೈನ್ ಯೋಜನೆಗೆ 2025ರ ಜನವರಿಯಲ್ಲಿಯೇ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಒಪ್ಪಿಗೆ ದೊರೆತ ತಕ್ಷಣ ಟೆಂಡರ್ ಕರೆಯಲಾಗುವುದು.

ಸರ್ಜಾಪುರ ಟ್ರಾಫಿಕ್ ಸಮಸ್ಯೆಗೆ ಮೆಟ್ರೋ ಒಂದೇ ಪರಿಹಾರ

ಸರ್ಜಾಪುರ ಟ್ರಾಫಿಕ್ ಸಮಸ್ಯೆಗೆ ಮತ್ತೊಂದು ಹೆಸರು. ಮೆಟ್ರೋ ಒಂದೇ ಇದಕ್ಕೆ ಪರಿಹಾರ. ಹೀಗಾಗಿ ಇಲ್ಲಿ ಡಬಲ್ ಡೆಕ್ಕರ್ ಮೆಟ್ರೋ ಮಾಡಿ ಎಂಬ ಬೇಡಿಕೆ ಇದೆ.. ಸರ್ಜಾಪುರದಿಂದ ಆರಂಭಿಸಿ ಇಬ್ಲೂರ್ ಜಂಕ್ಷನ್ ಔಟರ್ ರಿಂಗ್ ರೋಡ್ ಬಳಿ ಕ್ರಾಸ್ ಆಗಿ ಸೆಂಟ್ ಜಾನ್ಸ್ ವರೆಗೆ ಬಂದು ಸೆಂಟ್ ಜಾನ್ಸ್ ನಿಂದ ಹೆಬ್ಬಾಳದ ವರೆಗೆ ರೆಡ್ ಲೈನ್ 37.8 ಕಿಮೀ ಅನುಮತಿಗಾಗಿ 2025 ಜನವರಿಯಲ್ಲಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇವೆ. ಆದರೆ ಕೇಂದ್ರದಿಂದ ಒಪ್ಪಿಗೆ ಬಂದಿಲ್ಲ. ಬೆಂಗಳೂರು ಸಾರ್ವಜನಿಕ ಸಾರಿಗೆ ಅವಶ್ಯಕತೆ ದೃಷ್ಟಿಯಿಂದ ಸರ್ಜಾಪುರ ಮೆಟ್ರೋ ಬಹು ಮುಖ್ಯ ಯೋಜನೆ ಆಗಿರುವುದರಿಂದ ಈ ಯೋಜನೆಗಳನ್ನು ಗಂಭೀರವಾಗಿ ತೆಗೆದುಕೊಂಡು ಕಾರ್ಯಾರಂಭಕ್ಕೆ ತರುವ ಯೋಜನೆ ಹಾಕಿದ್ದೇವೆ. ಸಮಾರಂಭದ ವೇಳೆ ಈ ಬಗ್ಗೆ ಪ್ರಧಾನಿಗೆ ಮನವಿ ಸಲ್ಲಿಸಲಿದ್ದು, ಒಪ್ಪಿಗೆ ದೊರೆತರೆ ಮುಂದಿನ ವರ್ಷದ ಅಂತ್ಯದೊಳಗೆ ಅದನ್ನೂ ಟೆಂಡರ್ ಕರೆದು ಕಾರ್ಯಾರಂಭ ಮಾಡುವ ಗುರಿ ಇದೆ ಎಂದು ಮಾಹಿತಿ ನೀಡಿದರು.

ಕೇಂದ್ರದ ಪಾಲು ಹೆಚ್ಚಳಕ್ಕೆ ಪ್ರಧಾನಿಗೆ ಮನವಿ

ಬೆಂಗಳೂರು ಮೆಟ್ರೋ ಯೋಜನೆಯ ಒಟ್ಟು ವೆಚ್ಚ ಹಂಚಿಕೆಯಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ನಡುವೆ ಇರುವ ಭಾರಿ ವ್ಯತ್ಯಾಸವನ್ನು ಸಚಿವ ಕೃಷ್ಣ ಬೈರೇಗೌಡ ಅವರು ಅಂಕಿ-ಅಂಶಗಳ ಸಮೇತ ವಿವರಿಸಿದರು.

ಮೆಟ್ರೋ-1 ನೇ ಹಂತದಿಂದ 3ನೇ ಹಂತದವರೆಗಿನ ಒಟ್ಟು 77,891 ಕೋಟಿ ರೂ. ವೆಚ್ಚದಲ್ಲಿ ಕರ್ನಾಟಕ ಸರ್ಕಾರವೇ 65,291=ಕೋಟಿ ರೂ. (ಶೇ. 84) ಭರಿಸುತ್ತಿದ್ದು, ಕೇಂದ್ರ ಸರ್ಕಾರದ ಪಾಲು ಕೇವಲ 12,600 ಕೋಟಿ ರೂ. (ಶೇ. 16) ಆಗಿದೆ. ಮೆಟ್ರೋ ಮೊದಲ ಹಂತದಲ್ಲಿ ಶೇ. 80 ರಷ್ಟಿದ್ದ ಕೇಂದ್ರದ ಬಂಡವಾಳ ಹೂಡಿಕೆ, ಎರಡನೇ ಹಂತದಲ್ಲಿ ಕ್ರಮೇಣ ಶೇ. 16ಕ್ಕೆ ಮತ್ತು ಪ್ರಸ್ತುತ ಶೇ. 14ಕ್ಕೆ ಕುಸಿದಿದೆ ಎಂದು ತಿಳಿಸಿದರು.

ಅಂತರ ರಾಷ್ಟ್ರೀಯ ಸಂಸ್ಥೆಗಳಿಂದ ಪಡೆಯುವ ಸಾಲವನ್ನು ಕೇಂದ್ರದ ಮೂಲಕ ಪಡೆಯಲಾಗುತ್ತಿದ್ದರೂ, ರೂಪಾಯಿ ಮೌಲ್ಯ ಕುಸಿತದ ಹೆಚ್ಚುವರಿ ಹೊರೆ ಹಾಗೂ ಸಾಲದ ಪ್ರತಿಯೊಂದು ಪೈಸೆಯನ್ನು ರಾಜ್ಯ ಸರ್ಕಾರವೇ ಮರುಪಾವತಿಸುತ್ತಿದೆ. ಜೊತೆಗೆ ಭೂಸ್ವಾಧೀನದ ಶೇಕಡಾ 100 ರಷ್ಟು ವೆಚ್ಚ ಹಾಗೂ ಯೋಜನೆಯ ಅನುಮೋದನೆ ವಿಳಂಬದಿಂದ ಹೆಚ್ಚಾಗುವ ನಿರ್ಮಾಣ ವೆಚ್ಚವನ್ನು ರಾಜ್ಯವೇ ಭರಿಸಬೇಕಾಗಿದೆ. ಮೆಟ್ರೋದ 1046 ಕೋಟಿ ರೂ. ನಷ್ಟವನ್ನು ಈಗಾಗಲೇ ರಾಜ್ಯವೇ ಸರಿದೂಗಿಸಿದೆ. ಇನ್ನೂ 52 ಕೋಟಿ ರೂ ನಷ್ಟ ಸಾಲ ಭರಿಸಿಕೊಡುವುದು ಬಾಕಿ ಇದ್ದು, ಮೆಟ್ರೋ ಆಡಳಿತ ಕೇಳಿದ ಕೂಡಲೇ ರಾಜ್ಯ ಸರ್ಕಾರ ಅದನ್ನೂ ಭರಿಸಲಿದೆ. ಈ ಎಲ್ಲಾ ಕಾರಣದಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರ ಮೆಟ್ರೋ ಹೂಡಿಕೆಯಲ್ಲಿ ಸಮಪಾಲು (ಫಿಫ್ಟಿ ಫಿಫ್ಟಿ) ಎಂದರೂ ಸಹ ವಾಸ್ತವವಾಗಿ ಶೇ.84 ರಷ್ಟು ರಾಜ್ಯ ಸರ್ಕಾರ ಭರಿಸುತ್ತಿದೆ, ಶೇ.16ರಷ್ಟು ಮಾತ್ರ ಕೇಂದ್ರ ಸರ್ಕಾರ ಭರಿಸುತ್ತಿದೆ ಎಂದು ಮಾಹಿತಿ ನೀಡಿದರು.

ಡಿಕೆ, ಬಿಕೆ, ಪಿಕೆಯವರ ಆಟ ಇನ್ನು ನಡೆಯುವುದಿಲ್ಲ..

ಬಿಜೆಪಿ ನೇತೃತ್ವದ ಎನ್‌ಡಿಎ ಸರಕಾರ ಅಧಿಕಾರಕ್ಕೆ: ಬಿ.ವೈ.ವಿಜಯೇಂದ್ರ

● ವಿಕ್ರಮ ವಾಹಿನಿ । ಬೆಂಗಳೂರು



ಕಾಂಗ್ರೆಸ್ ಸರಕಾರಕ್ಕೆ ಮಾನ ಮರ್ಯಾದೆ ಇದೆಯೇ ಎಂದು ರಾಜ್ಯದ ಬಡವರು, ರೈತರು ಕೇಳುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ. ಕೇವಲ ಬೆಲೆ ಏರಿಕೆಯೇ ಈ ಸರಕಾರದ ಮೂರೂವರೆ ವರ್ಷಗಳ ಸಾಧನೆ ಎಂದು ಟೀಕಿಸಿದರು.

ರಾಜ್ಯ ಸರಕಾರದ ಬೆಲೆ ಏರಿಕೆ ಖಂಡಿಸಿ ಬಿಜೆಪಿ ರಾಜ್ಯ ಘಟಕದ ವತಿಯಿಂದ ಇಂದು ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿರೋಧ ಪಕ್ಷದ ನಾಯಕರಾದ ಆರ್ ಅಶೋಕ್, ಛಲವಾದಿ ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ಈ ಪ್ರತಿಭಟನೆ ನಡೆಯಿತು.

ಜನರಿಂದ ಸರಕಾರಕ್ಕೆ ಹಿಡಿಶಾಪ..

ಈ ಬೆಲೆ ಏರಿಕೆ ನೀತಿಯಿಂದ ಜನಸಾಮಾನ್ಯರು, ಬಡವರು ಜೀವನ ಸಾಗಿಸಲು ಕಷ್ಟವಾಗಿದೆ. ಬಡಜನರು ಮನುಷ್ಯತ್ವ ಇಲ್ಲದ ಕಾಂಗ್ರೆಸ್ ಸರಕಾರಕ್ಕೆ ಹಿಡಿಶಾಪ ಹಾಕುತ್ತಿದ್ದಾರೆ ಎಂದು ತಿಳಿಸಿದರು.

ಬಡವರ ಮೇಲೆ ಬರೆ ಎಳೆದ ಸರಕಾರ..

ಮೂರೂವರೆ ವರ್ಷಗಳಲ್ಲಿ ಪೆಟ್ರೋಲ್, ಡೀಸೆಲ್ ತೆರಿಗೆಯನ್ನು 4 ಬಾರಿ ಹೆಚ್ಚಿಸಿದ್ದಾರೆ. ಸ್ಟ್ಯಾಂಪ್ ಡ್ಯೂಟಿ ಹೆಚ್ಚಿಸಿದರು. ಸರಕಾರಿ ಆಸ್ಪತ್ರೆಯಲ್ಲಿ ದರ ಏರಿಸಿ ಬಡವರಿಗೆ ಬರೆ ಎಳೆದರು ಎಂದು ಖಂಡಿಸಿದರು. ದೀಪಾವಳಿ ಸಂದರ್ಭದಲ್ಲಿ ಹಾಲಿನ ಮೇಲೆ 8 ರೂ. ದರ ಹೆಚ್ಚಿಸಿದರು. ಮೊಸರು, ತುಪ್ಪದ ದರವನ್ನು ತೀವ್ರವಾಗಿ ಹೆಚ್ಚಿಸಿದರು ಎಂದು ಟೀಕಿಸಿದರು. ರೈತರಿಗೆ ಅನುಕೂಲ ಮಾಡಿಕೊಡಲು ಆಗ್ರಹಿಸಿದೆವು. ಯಡಿಯೂರಪ್ಪ ಅವರಂತೆ ರಾಜ್ಯ ಸರಕಾರವು ಸಬ್ಸಿಡಿ ನೀಡಲಿಲ್ಲ ಎಂದು ದೂರಿದರು.

ಚಾಟಿ ಬೀಸಿದ ಹೈಕೋರ್ಟ್

ಬೆಲೆ ಏರಿಸುವ ಕೆಲಸ ಮಾಡುವ ಸರಕಾರದ ವಿರುದ್ಧ ಹೈಕೋರ್ಟ್ ಚಾಟಿ ಬೀಸಿದೆ ಎಂದು ಗಮನ ಸೆಳೆದರು. ಶಿವಕುಮಾರರ ಸರಕಾರದಲ್ಲಿ ರಾಜ್ಯದ ಬಡವರು ಕಣ್ಣೀರು ಸುರಿಸುವ ಪರಿಸ್ಥಿತಿ ಇದೆ ಎಂದು ವಿವರಿಸಿದರು.

ರೈತರನ್ನು ಭಿಕ್ಷುಕರೆಂದು ಪರಿಗಣಿಸಿದ ಸಿಎಂ..

ಭೀಕರ ಬರಗಾಲವಿದೆ. ರೈತರಿಗೆ ಪರಿಹಾರಕ್ಕೆ ಒತ್ತಾಯಿಸಿ ಬಳ್ಳಾರಿ ಚಲೋ ಪಾದಯಾತ್ರೆ ಮಾಡಿದೆವು. ಮುಖ್ಯಮಂತ್ರಿಗಳು ವಿಶೇಷ ಅಧಿವೇಶನದ ಕಪಟ ನಾಟಕ ಮಾಡಿ ಒಂದು ಕುಟುಂಬಕ್ಕೆ 2500 ರೂ. ಪರಿಹಾರ ಪ್ರಕಟಿಸಿದರು. ಮುಖ್ಯಮಂತ್ರಿಗಳು ತುತ್ತು ನೀಡುವ ರೈತರನ್ನು ಭಿಕ್ಷುಕರೆಂದು ಪರಿಗಣಿಸಿದ್ದಾರೆ ಎಂದು ಟೀಕಿಸಿದರು. ಕೆಲವರಿಗೆ 200, 300 ರೂ ಕೊಟ್ಟು ಕನ್ನ ಹಾಕುವ ಕೆಲಸ ನಡೆದಿದೆ ಎಂದರು.

ಮನೆಗೆ ಹೋಗುವ ದಿನ ಹತ್ತಿರವಿದೆ..

ವಿಧಾನಪರಿಷತ್ತಿನ 4 ಕ್ಷೇತ್ರಗಳ ಚುನಾವಣೆಯಲ್ಲಿ 4ಕ್ಕೆ 3 ಕ್ಷೇತ್ರಗಳನ್ನು ಬಿಜೆಪಿ- ಎನ್‌ಡಿಎಗೆ ಆಶೀರ್ವಾದ ಮಾಡಿದ್ದಾರೆ. ಡಿಕೆ, ಬಿಕೆ, ಪಿಕೆಯವರಿಗೆ ಒಂದು ಮಾತನ್ನು ಹೇಳಬಯಸುತ್ತೇನೆ. ನಿಮ್ಮ ಆಟ ಇನ್ನು ನಡೆಯುವುದಿಲ್ಲ.

ನೀವು ಗಂಟು ಮೂಟೆ ಕಟ್ಟಿಕೊಂಡು ಮನೆಗೆ ಹೋಗುವ ದಿನಗಳು ಹತ್ತಿರ ಬಂದಿವೆ ಎಂದು ಎಚ್ಚರಿಸಿದರು.

ಎನ್‌ಡಿಎ ಗೆಲುವು ಖಚಿತ..

ರಾಜ್ಯದಲ್ಲಿ ಯಾವತ್ತೇ ಚುನಾವಣೆ ನಡೆದರೂ ಈ ಕಾಂಗ್ರೆಸ್ ಸರಕಾರವನ್ನು ಜನತೆ ಮನೆಗೆ ಕಳಿಸುತ್ತಾರೆ. ರಾಜ್ಯ ಸರಕಾರವು 6ನೇ ಗ್ಯಾರಂಟಿಯಾಗಿ ಬೆಲೆ ಏರಿಕೆಯನ್ನು ನೀಡಿದೆ. ಬಿಜೆಪಿ ನೇತೃತ್ವದ ಎನ್‌ಡಿಎ ಸರಕಾರವನ್ನು ಜನತೆ ಚುನಾವಣೆಯಲ್ಲಿ ಗೆಲ್ಲಿಸಿ, ನಿಮ್ಮನ್ನು ದಿಕ್ಪಾಪಾಲಾಗಿ ಮಾಡುವುದು ಶತಸ್ಸಿದ್ಧ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಎಲ್ಲಾ ಕೋರ್ ಕಮಿಟಿ ಸದಸ್ಯರು, ಸಂಸದರು, ಶಾಸಕರು, ವಿಧಾನ ಪರಿಷತ್ತಿನ ಸದಸ್ಯರು, ರಾಜ್ಯ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು ಹಾಗೂ ಪ್ರಮುಖರು ಉಪಸ್ಥಿತ ರಿದ್ದರು.

ರಾಹುಲ್ ಮೆಚ್ಚಿಸಲು ಎಥೆನಾಲ್ ವಿಚಾರ ಪ್ರಸ್ತಾಪಿಸಿದ ರಿಜ್ವಾನ್: ಜೋಶಿ ಟೀಕೆ

● ವಿಕ್ರಮ ವಾಹಿನಿ । ಬೆಂಗಳೂರು

ಪೆಟ್ರೋಲ್‌ನಲ್ಲಿ ಎಥೆನಾಲ್ ಮಿಶ್ರಣವನ್ನು ಹೆಚ್ಚಿಸುವ ವಿಷಯವನ್ನು ಕಾಂಗ್ರೆಸ್ ಪಕ್ಷವು ಕೇವಲ ತಮ್ಮ ನಾಯಕ ರಾಹುಲ್ ಗಾಂಧಿ ಅವರನ್ನು ಸಂತೋಷಪಡಿಸಲು ಬಳಸಿ ಕೊಳ್ಳುತ್ತಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದ್ದಾರೆ.



ರಾಜ್ಯದಲ್ಲಿ ಇಂಧನ ಪರೀಕ್ಷಾ ಪ್ರಕ್ರಿಯೆಯಲ್ಲಿ ದೋಷಗಳಿವೆ ಎಂದು ಆರೋಪಿಸಿರುವ ಅವರು, ಈ ವಿಷಯದ ಬಗ್ಗೆ ಕೇಂದ್ರ ಸರ್ಕಾರ ಈಗಾಗಲೇ ಸ್ಪಷ್ಟನೆ ನೀಡಿದ್ದರೂ, ಕಾಂಗ್ರೆಸ್ ಸರ್ಕಾರವು ಆಧಾರರಹಿತ ಹೇಳಿಕೆಗಳನ್ನು ನೀಡುತ್ತಿದೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷವು ರಾಹುಲ್ ಗಾಂಧಿ ಅವರನ್ನು ಮೆಚ್ಚಿಸಲು ಈ ವಿಷಯವನ್ನು ಪ್ರಸ್ತಾಪಿಸುತ್ತಿದ್ದರೆ, ಅದು ಒಂದು ರೀತಿಯ ತುಷ್ಟೀಕರಣ ರಾಜಕೀಯವೇ ಆಗಿದೆ. ಒಂದು ಕಡೆ ಅವರು ಅಲ್ಪಸಂಖ್ಯಾತರನ್ನು, ವಿಶೇಷವಾಗಿ ಮುಸ್ಲಿಮರನ್ನು ಓಲೈಸುವ ರಾಜಕೀಯ ಮಾಡುತ್ತಾರೆ; ಇನ್ನೊಂದು ಕಡೆ ರಾಹುಲ್ ಗಾಂಧಿ ಅವರನ್ನು ಓಲೈಸುತ್ತಾರೆ. ಅವರು ಗಾಂಧಿಯವರ ಬೆಂಬಲಕ್ಕೆ ನಿಂತು ಏನೇನೋ ಮಾತನಾಡುತ್ತಾರೆ. ಜನರಿಗೆ ಇದೆಲ್ಲವೂ ಅರ್ಥವಾಗುತ್ತದೆ, ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು. ಎಥೆನಾಲ್ ಮಿಶ್ರಣದ ಹಿಂದಿರುವ ಆರ್ಥಿಕ ಅಂಶಗಳನ್ನು ವಿವರಿಸಿದ ಕೇಂದ್ರ ಸಚಿವರು, ರೈತರಿಗೆ ಅನುಕೂಲ ಮಾಡಿಕೊಡುವುದು ಮತ್ತು ಕಚ್ಚಾ ತೈಲ ಆಮದಿನ ಮೇಲಿನ ಭಾರತದ ಅವಲಂಬನೆಯನ್ನು ಕಡಿಮೆ ಮಾಡುವುದು ಈ ಕ್ರಮದ ಉದ್ದೇಶವಾಗಿದೆ ಎಂದು ಹೇಳಿದರು. ಇಂದು ಕಚ್ಚಾ ತೈಲದ ಬೆಲೆ ಬಹಳ ಹೆಚ್ಚಿದೆ. ನಮ್ಮ ಪೆಟ್ರೋಲ್‌ನ ಮೂಲ ಬೆಲೆ 53 ರೂಪಾಯಿಗಳಷ್ಟಿದ್ದರೆ, ಮೆಕ್ಕೆಜೋಳ ಆಧಾರಿತ ಎಥೆನಾಲ್‌ನ ಬೆಲೆ 57 ರಿಂದ 71 ರೂಪಾಯಿಗಳ ನಡುವೆ ಇದೆ. ಇದರಲ್ಲಿ ಯಾವುದೇ ವಾಣಿಜ್ಯಿಕ ತರ್ಕವೂ ಇಲ್ಲ, ಎಂದು ಹೇಳಿದ ಅವರು, ರೈತರ ಹಿತದೃಷ್ಟಿಯಿಂದ ಮತ್ತು ದೇಶವನ್ನು ಸ್ವಾವಲಂಬಿಯನ್ನಾಗಿ ಮಾಡುವ ನಿಟ್ಟಿನಲ್ಲಿ ಸರ್ಕಾರವು ಎಥೆನಾಲ್ ಮಿಶ್ರಣವನ್ನು ಉತ್ತೇಜಿಸಿದೆ ಎಂದು ತಿಳಿಸಿದರು.

ಚುನಾವಣಾ ಪಟ್ಟಿಗಳ ವಿಶೇಷ ಪರಿಷ್ಕರಣೆ (ಎಸ್‌ಐಆರ್), ಎಲೆಕ್ಟ್ರಾನಿಕ್ ಮತಯಂತ್ರಗಳು (ಇವಿಎಂ) ಮತ್ತು ಇತರ ವಿಷಯಗಳ ಕುರಿತು ಕಾಂಗ್ರೆಸ್ ನಡೆಸುತ್ತಿರುವ ಪ್ರತಿಭಟನೆಗಳನ್ನು ಪ್ರಸ್ತಾಪಿಸಿದ ಜೋಶಿ, ಆ ವಿಷಯಗಳಲ್ಲಿ ಸಾರ್ವಜನಿಕರ ಬೆಂಬಲ ಸಿಗದ ಕಾರಣ, ಈಗ ಎಥೆನಾಲ್ ವಿಷಯವನ್ನು ಕಾಂಗ್ರೆಸ್ ಮುನ್ನೆಲೆಗೆ ತರುತ್ತಿದೆ ಎಂದು ಆರೋಪಿಸಿದರು.

ಇಂಧನ ಪರೀಕ್ಷಾ ವಿಧಾನದ ಬಗ್ಗೆ ಮಾತನಾಡಿದ ಜೋಶಿ, ಕ್ಯಾನ್ಸರ್ ಗುರುತುಗಳನ್ನು ಪರೀಕ್ಷಿಸಲು ಅತ್ಯಾಧುನಿಕ ಉಪಕರಣಗಳು ಬೇಕಾಗುವಂತೆಯೇ, ಪೆಟ್ರೋಲ್ ಮತ್ತು ಡೀಸೆಲ್ ಅನ್ನು ಪರೀಕ್ಷಿಸಲು ಕೂಡ ವಿಶೇಷ ಉಪಕರಣಗಳು ಮತ್ತು ನಿರ್ದಿಷ್ಟ ಪ್ರಯೋಗಾಲಯಗಳ ಅಗತ್ಯವಿರುತ್ತದೆ ಎಂದು ಹೇಳಿದರು.

ಆಲ್ಟಿಗ್ರೀನ್‌ನಿಂದ 'ಮಿನ್ಸಾರಾ' ಬಹುಪಯೋಗಿ ಎಲೆಕ್ಟ್ರಿಕ್ ದ್ವಿಚಕ್ರ ವಾಹನ ಬಿಡುಗಡೆ

● ವಿಕ್ರಮ ವಾಹಿನಿ । ಬೆಂಗಳೂರು



ಭಾರತದ ಎಲೆಕ್ಟ್ರಿಕ್ ವಾಣಿಜ್ಯ ವಾಹನ ಉದ್ಯಮದ ಪ್ರಮುಖ ಸಂಸ್ಥೆಯಾಗಿರುವ ಜಾಕ್ಸನ್ ಗ್ರೂಪ್‌ನ ಅಂಗಸಂಸ್ಥೆ ಆಲ್ಟಿಗ್ರೀನ್, ನಗರ ಮತ್ತು ಗ್ರಾಮೀಣ ಪ್ರದೇಶಗಳ ವೈವಿಧ್ಯಮಯ ಸಾರಿಗೆ ಹಾಗೂ ವಾಣಿಜ್ಯ ಅಗತ್ಯಗಳನ್ನು ಪೂರೈಸುವ ಉದ್ದೇಶದಿಂದ 'ಮಿನ್ಸಾರಾ' ಎಂಬ ಬಹುಪಯೋಗಿ ಎಲೆಕ್ಟ್ರಿಕ್ ದ್ವಿಚಕ್ರ ವಾಹನವನ್ನು ಪರಿಚಯಿಸಿದೆ.

ರೈತರು, ಗ್ರಾಮೀಣ ಉದ್ಯಮಿಗಳು, ಸಣ್ಣ ವ್ಯಾಪಾರಿಗಳು, ವಿತರಣಾ ವೃತ್ತಿಪರರು, ಸೇವಾ ತಂತ್ರಜ್ಞರು ಹಾಗೂ ಫ್ಲೀಟ್ ನಿರ್ವಾಹಕರ ಬಳಕೆಗೆ ಅನುಕೂಲವಾಗುವಂತೆ ಈ ವಾಹನವನ್ನು ವಿನ್ಯಾಸಗೊಳಿಸಲಾಗಿದೆ. ದೃಢವಾದ ರಚನೆ, ಹೆಚ್ಚಿನ ಕಾರ್ಯಕ್ಷಮತೆ ಮತ್ತು ಬಹುಮುಖ ಬಳಕೆಯ ಸಾಮರ್ಥ್ಯ ಇದರ ಪ್ರಮುಖ ವೈಶಿಷ್ಟ್ಯಗಳಾಗಿವೆ.

ಮಿನ್ಸಾರಾ ಮೂರು ಮಾದರಿಗಳಲ್ಲಿ ಲಭ್ಯವಿದೆ. ಮಿನ್ಸಾರಾ-S ಮಾದರಿಯು 2.78 ಇಘು ಬ್ಯಾಟರಿಯೊಂದಿಗೆ 125 ಕಿ.ಮೀ. ಸಂಚಾರ ವ್ಯಾಪ್ತಿ ಹೊಂದಿದ್ದರೆ, ಮಿನ್ಸಾರಾ S+ ಮಾದರಿಯು 3.8 kWh ಬ್ಯಾಟರಿಯೊಂದಿಗೆ 165 ಕಿ.ಮೀ. ವ್ಯಾಪ್ತಿ ಒದಗಿಸುತ್ತದೆ. ಮಿನ್ಸಾರಾ ಖಇ ಮಾದರಿಯಲ್ಲಿ ಬ್ಯಾಟರಿ ಬದಲಾಯಿಸುವ ಸೌಲಭ್ಯ ಕಲ್ಪಿಸಲಾಗಿದೆ.

ಮಿನ್ಸಾರಾ ಎಲೆಕ್ಟ್ರಿಕ್ ಡ್ರೈವ್‌ಟ್ರೇನ್ 172 ಎನ್‌ಎಂ ಗರಿಷ್ಠ ಟಾರ್ಕ್ ಉತ್ಪಾದಿಸುವ ಸಾಮರ್ಥ್ಯ ಹೊಂದಿದ್ದು, ಶೇ.33ರಷ್ಟು ಇಳಿಜಾರು ಹತ್ತುವ ಸಾಮರ್ಥ್ಯವನ್ನು ಹೊಂದಿದೆ. 264 ಕೆ.ಜಿ. ಒಟ್ಟು ವಾಹನ ತೂಕದ ಸಾಮರ್ಥ್ಯ ಮತ್ತು ಗಂಟೆಗೆ 75 ಕಿ.ಮೀ. ಗರಿಷ್ಠ ವೇಗ ಇದರ ಮತ್ತೊಂದು ವಿಶೇಷತೆಯಾಗಿದೆ.

ವಾಹನದಲ್ಲಿ 17 ಇಂಚಿನ ಅಲಾಯ್ ವೀಲ್‌ಗಳು, ಟೆಲಿಸ್ಕೋಪಿಕ್ ಸಸ್ಪೆನ್ಷನ್ ಹಾಗೂ ಹೆಚ್ಚಿನ ಬಾಳಿಕೆ ಹೊಂದಿರುವ 'ರಿಬ್-ಕೇಜ್' ಚಾಸಿಸ್ ಅಳವಡಿಸಲಾಗಿದೆ. ಇದರೊಂದಿಗೆ ಕ್ರ್ಯಾಶ್ ಗಾರ್ಡ್, ಕಾಂಬಿ ಬ್ರೇಕಿಂಗ್ ಸಿಸ್ಟಮ್ ಸಹಿತ ಡ್ಯುಯಲ್ ಡಿಸ್ಕ್ ಬ್ರೇಕ್‌ಗಳು, ಮೇನ್ ಸ್ಟ್ಯಾಂಡ್ ಮತ್ತು ಸುರಕ್ಷತಾ ಎಚ್ಚರಿಕೆಯುಳ್ಳ ಸೈಡ್ ಸ್ಟ್ಯಾಂಡ್ ವ್ಯವಸ್ಥೆಯನ್ನೂ ಒದಗಿಸಲಾಗಿದೆ. ಇವು ವಿವಿಧ ರಸ್ತೆ ಪರಿಸ್ಥಿತಿಗಳಲ್ಲಿ ಸ್ಥಿರತೆ, ಸುರಕ್ಷತೆ ಮತ್ತು ಆರಾಮದಾಯಕ ಪ್ರಯಾಣಕ್ಕೆ ನೆರವಾಗಲಿವೆ.

ಮಿನ್ಸಾರಾ ಬಿಡುಗಡೆ ಕುರಿತು ಮಾತನಾಡಿದ ಜಾಕ್ಸನ್ ಗ್ರೀನ್ ವೆಹಿಕಲ್ಸ್‌ನ ಸಿಇಒ ದೀಪಕ್ ಠಾಕೂರ್, ಭಾರತದ ಸಾರಿಗೆ ಅಗತ್ಯಗಳು ವೈವಿಧ್ಯಮಯವಾಗಿವೆ. ನಗರ ಪ್ರದೇಶದ ವಿತರಣಾ ಉದ್ಯೋಗಿಗಳಿಂದ ಹಿಡಿದು ಗ್ರಾಮೀಣ ಭಾಗದ ರೈತರು ಮತ್ತು ಸಣ್ಣ ಉದ್ಯಮಿಗಳವರೆಗೆ ಲಕ್ಷಾಂತರ ಜನರು ತಮ್ಮ ಜೀವನೋಪಾಯಕ್ಕಾಗಿ ದ್ವಿಚಕ್ರ ವಾಹನಗಳನ್ನು ಅವಲಂಬಿಸಿದ್ದಾರೆ. ಈ ನೈಜ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಉಪಯುಕ್ತತೆ, ಕಾರ್ಯಕ್ಷಮತೆ ಮತ್ತು ಸುಸ್ಥಿರ ತಂತ್ರಜ್ಞಾನವನ್ನು ಸಂಯೋಜಿಸಿ ಮಿನ್ಸಾರಾವನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ತಿಳಿಸಿದರು. ಆಲ್ಟಿಗ್ರೀನ್‌ನ ಸಿಟಿಒ ಹಾಗೂ ಸಂಸ್ಥಾಪಕ ಅಮಿತಾಭ್ ಸರನ್ ಮಾತನಾಡಿ, ತಂತ್ರಜ್ಞಾನವು ಗ್ರಾಹಕರ ನೈಜ ಸಮಸ್ಯೆಗಳಿಗೆ ಪರಿಹಾರ ಒದಗಿಸಬೇಕು ಎಂಬ ಉದ್ದೇಶದೊಂದಿಗೆ ಮಿನ್ಸಾರಾವನ್ನು ರೂಪಿಸಲಾಗಿದೆ. ದೇಶದಾದ್ಯಂತ ವ್ಯಾಪಾರ, ಜೀವನೋಪಾಯ ಮತ್ತು ದೈನಂದಿನ ಚಟುವಟಿಕೆಗಳಿಗೆ ನೆರವಾಗುವ ನವೀನ, ಸ್ವದೇಶಿ ಎಲೆಕ್ಟ್ರಿಕ್ ವಾಹನಗಳನ್ನು ಅಭಿವೃದ್ಧಿಪಡಿಸುವ ಸಂಸ್ಥೆಯ ಬದ್ಧತೆಗೆ ಈ ಹೊಸ ಉತ್ಪನ್ನ ಸಾಕ್ಷಿಯಾಗಿದೆ ಎಂದರು.

ಮಿನ್ಸಾರಾ ಎಲೆಕ್ಟ್ರಿಕ್ ದ್ವಿಚಕ್ರ ವಾಹನದ ಆರಂಭಿಕ ಎಕ್ಸ್‌ಶೋರೂಂ ಬೆಲೆ ರೂ. 1.24 ಲಕ್ಷವಾಗಿದೆ. ವಾಹನಕ್ಕೆ ಮೂರು ವರ್ಷ ಅಥವಾ 30,000 ಕಿ.ಮೀ.ಗಳ ಪ್ರಮಾಣಿತ ಖಾತರಿ ನೀಡಲಾಗುತ್ತಿದ್ದು, ವಿಸ್ತೃತ ಖಾತರಿ ಸೌಲಭ್ಯವನ್ನೂ ಪರಿಚಯಿಸಲು ಸಂಸ್ಥೆ ಯೋಜಿಸಿದೆ.

ಬೆಂಗಳೂರು, ವಿಜಯವಾಡ ಮತ್ತು ನೋಯ್ಡಾದಲ್ಲಿರುವ ಆಲ್ಟಿಗ್ರೀನ್ ಡೀಲರ್‌ಶಿಪ್‌ಗಳ ಮೂಲಕ ವಾಹನದ ಬುಕ್ಕಿಂಗ್ ಆರಂಭವಾಗಿದೆ. 2026ರ ಡಿಸೆಂಬರ್ 1ರಿಂದ ಗ್ರಾಹಕರಿಗೆ ವಾಹನಗಳ ವಿತರಣೆ ಪ್ರಾರಂಭವಾಗಲಿದೆ. ಆಲ್ಟಿಗ್ರೀನ್ ತನ್ನ 3S ಡೀಲರ್‌ಶಿಪ್ ಜಾಲ, ಮಾರಾಟೋತ್ತರ ಸೇವೆ ಮತ್ತು ಗ್ರಾಹಕ ಸ್ನೇಹಿ ಸೌಲಭ್ಯಗಳ ಮೂಲಕ ಮಿನ್ಸಾರಾ ಗ್ರಾಹಕರನ್ನು ತಲುಪಿಸಲು ಉದ್ದೇಶಿಸಿದೆ. ಸರಕು ಸಾಗಣೆ ಎಲೆಕ್ಟ್ರಿಕ್ ತ್ರಿಚಕ್ರ ವಾಹನಗಳ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ, ಇದೀಗ ದ್ವಿಚಕ್ರ ವಾಹನ ವಿಭಾಗಕ್ಕೂ ವಿಸ್ತರಿಸುತ್ತಿದ್ದು, ಮುಂದಿನ ದಿನಗಳಲ್ಲಿ ಪ್ರಯಾಣಿಕರ ಎಲೆಕ್ಟ್ರಿಕ್ ತ್ರಿಚಕ್ರ ವಾಹನ ವಿಭಾಗಕ್ಕೂ ಪ್ರವೇಶಿಸಲು ಯೋಜಿಸಿದೆ.

ಕುಸಿದು ಬಿದ್ದ ದನಕರ್ ಆಸ್ಪತ್ರೆಗೆ

● ವಿಕ್ರಮ ವಾಹಿನಿ । ನವದೆಹಲಿ

ಮಾಜಿ ಉಪರಾಷ್ಟ್ರಪತಿ ಜಗದೀಪ್ ಧನಕರ್ ಬುಧವಾರ ಬೆಳಗಿನ ನಡಿಗೆಯ ವೇಳೆ ಕುಸಿದು ಬಿದ್ದಿದ್ದು, ಅವರನ್ನು ದೆಹಲಿಯ ಏಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಧನಕರ್ ಅವರು ಕೆಲಕಾಲ ಪ್ರಜ್ಞೆ ತಪ್ಪಿದ್ದರು ಎಂದು ವರದಿಯಾಗಿದೆ. ಅವರೊಂದಿಗೆ ಇದ್ದ ಭದ್ರತಾ ಸಿಬ್ಬಂದಿ ಅವರನ್ನು ಪೊಲೀಸ್ ಕಂಟ್ರೋಲ್ ರೂಮ್ ವಾಹನದಲ್ಲಿ ಮನೆಗೆ ಕರೆದೊಯ್ದರು. ಬಳಿಕ, ಏಮ್ಸ್‌ನ ವೈದ್ಯ ಸಂದೀಪ್ ಸೇಠ್ ಅವರು ಅವರಿಗೆ ಪ್ರಾಥಮಿಕ ಚಿಕಿತ್ಸೆ ನೀಡಿದರು.

ಜಾತಿ ಜನಗಣತಿಯಲ್ಲಿ ಒಬಿಸಿ ಪ್ರತ್ಯೇಕ ಕಾಲಂ ಸೇರಿಸಿ: ಒಬಿಸಿ ಫೆಡರೇಷನ್ ಆಫ್ ಇಂಡಿಯಾ ಒತ್ತಾಯ

ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯವಾಗಿ ಹಿಂದುಳಿದ ವರ್ಗಗಳಿಗೆ ನ್ಯಾಯ ಕಲ್ಪಿಸಲು ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು



2027ರಲ್ಲಿ ಕೇಂದ್ರ ಸರ್ಕಾರ ನಡೆಸಲಿರುವ ಜಾತಿ ಜನಗಣತಿಯಲ್ಲಿ ಇತರೆ ಹಿಂದುಳಿದ ವರ್ಗಗಳ (ಒಬಿಸಿ) ಜನಸಂಖ್ಯೆಯನ್ನು ಪ್ರತ್ಯೇಕವಾಗಿ ದಾಖಲಿಸಲು ಅನುಕೂಲವಾಗುವಂತೆ ಒಬಿಸಿ ಕಾಲಂ ಸೇರ್ಪಡೆ ಮಾಡಬೇಕು ಎಂದು ಒಬಿಸಿ ಫೆಡರೇಷನ್ ಆಫ್ ಇಂಡಿಯಾ ಒತ್ತಾಯಿಸಿದೆ.

ಈ ಸಂಬಂಧ ಬೆಂಗಳೂರಿನಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ವಿವಿಧ ಮಠಗಳ ಮಠಾಧೀಶರು, ರಾಜಕೀಯ ಮುಖಂಡರು ಹಾಗೂ ಒಬಿಸಿ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿ, ಹಿಂದುಳಿದ ವರ್ಗಗಳ ಸಾಮಾಜಿಕ ನ್ಯಾಯ ಮತ್ತು ಸಮಾನ ಅವಕಾಶಗಳಿಗಾಗಿ ಜಾತಿ ಜನಗಣತಿಯಲ್ಲಿ ಒಬಿಸಿಗೆ ಪ್ರತ್ಯೇಕ ಕಾಲಂ ಕಲ್ಪಿಸುವ ಅಗತ್ಯವನ್ನು ಪ್ರತಿಪಾದಿಸಿದರು.

ಬಂಜಾರ ಗುರುಪೀಠದ ಶ್ರೀ ಶ್ರೀ ಶ್ರೀ ಸರ್ದಾರ್ ಸೇವಾಲಾಲ್ ಸ್ವಾಮೀಜಿ ಮಾತನಾಡಿ, ಹಿಂದುಳಿದ ವರ್ಗಗಳ ಹೋರಾಟಕ್ಕೆ ಜಯ ದೊರೆತಿದ್ದು, ಸಮುದಾಯಗಳಿಗೆ ಅಗತ್ಯವಾದ ಸೌಲಭ್ಯಗಳನ್ನು ಸರ್ಕಾರ ಒದಗಿಸಬೇಕು. ತಾವು ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಮಾನ್ಯ ಮಾಡಿದೆ ಎಂದು ತಿಳಿಸಿದರು. ಕೇಂದ್ರ ಸರ್ಕಾರ ನಡೆಸುವ ಜಾತಿ ಜನಗಣತಿ ಸಮರ್ಪಕವಾಗಿ ನಡೆಯಬೇಕು. ಗುಡ್ಡಗಾಡು ಪ್ರದೇಶಗಳಲ್ಲಿ ವಾಸಿಸುವ ಹಿಂದುಳಿದ ವರ್ಗಗಳ ಜನರನ್ನೂ ಸಮರ್ಪಕವಾಗಿ ಗಣತಿಗೆ ಒಳಪಡಿಸಬೇಕು. ಸಾಮಾಜಿಕ ನ್ಯಾಯದ ಜಾಗೃತಿಗಾಗಿ ರಾಷ್ಟ್ರೀಯ ಮಟ್ಟದಲ್ಲಿ ಒಂದು ತಿಂಗಳ ಅಭಿಯಾನ ಹಮ್ಮಿಕೊಳ್ಳಲಾಗುವುದು ಎಂದರು.

ಮಹಾಲಕ್ಷ್ಮಿ ಮಹಾಸಂಸ್ಥಾನದ ಜಗದ್ಗುರು ಶ್ರೀ ಶ್ರೀ ಶ್ರೀ ಜ್ಞಾನಾನಂದಪುರಿ ಮಹಾಸ್ವಾಮಿಗಳು ಮಾತನಾಡಿ, ಕರ್ನಾಟಕದಲ್ಲಿ 198 ಹಿಂದುಳಿದ ವರ್ಗಗಳ ಸಮುದಾಯಗಳಿದ್ದು, ಅವುಗಳಲ್ಲಿ ಕೆಲವೇ ಸಮುದಾಯಗಳು ಪ್ರಬಲವಾಗಿ ಬೆಳೆದಿವೆ. ಉಳಿದ ಅನೇಕ ಸಮುದಾಯಗಳು ಇಂದಿಗೂ ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿವೆ. ಕೆಲವು ಸಮುದಾಯಗಳಲ್ಲಿ ಗ್ರಾಮ ಪಂಚಾಯಿತಿ ಅಥವಾ ಜಿಲ್ಲಾ ಪಂಚಾಯಿತಿ ಸದಸ್ಯರೂ ಇಲ್ಲದ ಪರಿಸ್ಥಿತಿಯಿದೆ. ಇಂತಹ ಸಮುದಾಯಗಳಿಗೆ ನ್ಯಾಯ ದೊರಕಿಸಲು ದೇಶಾದ್ಯಂತ ದೊಡ್ಡ ಮಟ್ಟದ ಚಳವಳಿ ಆರಂಭವಾಗಿದೆ ಎಂದು ಹೇಳಿದರು.

ಕುಂಬಾರ ಗುರುಪೀಠದ ಬಸವಕುಂಬಾರ ಮಹಾಸ್ವಾಮಿಗಳು ಮಾತನಾಡಿ, ದೇಶಾದ್ಯಂತ ಕಾಯಕ ಸಮಾಜಗಳೂ ಸೇರಿದಂತೆ ಹಿಂದುಳಿದ ವರ್ಗಗಳ ಜನಸಂಖ್ಯೆಯನ್ನು ಸಮರ್ಪಕವಾಗಿ ಗುರುತಿಸುವ ಅಗತ್ಯವಿದೆ. ಎಲ್ಲ ಹಿಂದುಳಿದ ವರ್ಗದ ಸಮುದಾಯಗಳು ಒಗ್ಗಟ್ಟಿನಿಂದ ಹೋರಾಟ ನಡೆಸಿ ತಮ್ಮ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮಾಜಿ ಶಾಸಕ ಮುಖ್ಯಮಂತ್ರಿ ಚಂದ್ರು ಮಾತನಾಡಿ, ಒಬಿಸಿ ಫೆಡರೇಷನ್ ಆಫ್ ಇಂಡಿಯಾ ಹಿಂದುಳಿದ ವರ್ಗಗಳ ಪರವಾಗಿ ಧ್ವನಿ ಎತ್ತುವ ಕೆಲಸ ಮಾಡುತ್ತಿದೆ. ಜಾತಿ ಜನಗಣತಿಗಾಗಿ ಸಾವಿರಾರು ಕೋಟಿ ರೂಪಾಯಿ ವೆಚ್ಚ ಮಾಡಲಾಗುತ್ತಿದೆ. ದೇಶದಲ್ಲಿ ಸುಮಾರು ಶೇ.56ರಷ್ಟು ಒಬಿಸಿ ಜನಸಂಖ್ಯೆ ಇದೆ ಎಂಬ ಅಂದಾಜಿದ್ದು, ರಾಜಕೀಯ, ಶೈಕ್ಷಣಿಕ ಹಾಗೂ ಉದ್ಯೋಗ ಕ್ಷೇತ್ರಗಳಲ್ಲಿ ಈ ವರ್ಗಗಳಿಗೆ ನ್ಯಾಯಯುತ ಅವಕಾಶಗಳು ದೊರೆಯಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಜನಗಣತಿಯಲ್ಲಿ ಪ್ರತ್ಯೇಕ ಕಾಲಂ ಇರುವಂತೆ ಹಿಂದುಳಿದ ವರ್ಗಗಳಿಗೂ ಪ್ರತ್ಯೇಕ ಕಾಲಂ ಇರಬೇಕು. ಇದರಿಂದ ಸಮುದಾಯಗಳ ನೈಜ ಜನಸಂಖ್ಯೆ ಗುರುತಿಸಿ, ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸಾಧ್ಯವಾಗುತ್ತದೆ ಎಂದರು.

ಒಬಿಸಿ ಫೆಡರೇಷನ್ ಆಫ್ ಇಂಡಿಯಾದ ಜೆ.ಎಂ. ಜೇರಪ್ಪ ಮಾತನಾಡಿ, ದೇಶದಲ್ಲಿ ಹಿಂದುಳಿದ ವರ್ಗಗಳ ಜನಸಂಖ್ಯೆ ಸುಮಾರು 80 ಕೋಟಿ ಇದೆ. ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಮತ್ತು ಆರ್ಥಿಕವಾಗಿ ಹಿಂದುಳಿದಿರುವ ಈ ಸಮುದಾಯಗಳು ಅಭಿವೃದ್ಧಿಯ ಮುಖ್ಯವಾಹಿನಿಗೆ ಬರಬೇಕಾದರೆ ಜಾತಿ ಜನಗಣತಿಯಲ್ಲಿ ಒಬಿಸಿಗೆ ಪ್ರತ್ಯೇಕ ಕಾಲಂ ಕಡ್ಡಾಯವಾಗಿ ಇರಬೇಕು. ಈ ಬೇಡಿಕೆಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನಲ್ಲಿ ಕಾನೂನು ಹೋರಾಟ ನಡೆಸಲಾಗಿದ್ದು, ನ್ಯಾಯಾಲಯದ ತೀರ್ಪಿನ ಹಿನ್ನೆಲೆಯಲ್ಲಿ ಜನಗಣತಿಯಲ್ಲಿ ಒಬಿಸಿ ಕಾಲಂ ಸೇರಿಸಬೇಕು ಎಂಬುದು ನಮ್ಮ ಪ್ರಮುಖ ಆಗ್ರಹವಾಗಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಒಬಿಸಿ ಮುಖಂಡ ನಾರಾಯಣ ತೋಸೂರು ಮಾತನಾಡಿ, ಜಾತಿ ಜನಗಣತಿಯಲ್ಲಿ ಒಬಿಸಿ ಕಾಲಂ ಸೇರ್ಪಡೆಯಾದರೆ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಶಿಕ್ಷಣ, ಉದ್ಯೋಗ, ರಾಜಕೀಯ ಪ್ರಾತಿನಿಧ್ಯ ಹಾಗೂ ಆರ್ಥಿಕ ಅಭಿವೃದ್ಧಿಗೆ ಅಗತ್ಯವಾದ ಯೋಜನೆಗಳನ್ನು ರೂಪಿಸಲು ಅನುಕೂಲವಾಗಲಿದೆ ಎಂದು ಹೇಳಿದರು.

ಹಿಂದುಳಿದ ಮತ್ತು ಶೋಷಿತ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸುಪ್ರೀಂ ಕೋರ್ಟ್ ಆದೇಶವನ್ನು ಪಾಲಿಸಿ, ಜಾತಿ ಜನಗಣತಿಯಲ್ಲಿ ಒಬಿಸಿಗೆ ಪ್ರತ್ಯೇಕ ಕಾಲಂ ನಮೂದಿಸಬೇಕು ಎಂದು ಪತ್ರಿಕಾಗೋಷ್ಠಿಯಲ್ಲಿ ಮುಖಂಡರು ಒತ್ತಾಯಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ಒಬಿಸಿ ಮುಖಂಡರಾದ ಬಿ.ಎಂ. ಪವನ್ ಸಿಂಗ್, ಶಿವಪ್ಪ ಲಮಾಣಿ, ಉಮೇಶ್ ಬಾಬು, ದೇವಿಪೂತೂರಿ, ವಿಜಿಆರ್ ನಾರಗೋನಿ, ರೂಪಕುಮಾರ್, ಡಾ. ಮಹಾಲಕ್ಷ್ಮಿ, ಡಾ. ಧನಯ್ ಕುಮಾರ್, ಪ್ರಫುಲ್ಲ ಶ್ರೀನಿವಾಸ್, ಡಾ. ರವೀಂದ್ರ ನವಿಲೆ, ರಾಜೇಶ್ ರಾಂಪುರೆ, ಡಿ.ವಿ. ಹಾಲಪ್ಪ, ವೆಂಕಟೇಶ್, ನಾಗೇಶ್ ಟಿ.ಬಿ., ಸೋಮಶೇಖರ್ ಹಾಗೂ ರಾವುತಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481


ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

ಶಕ್ತಿ ಯೋಜನೆಯಿಂದ ಹಾಸನಾಂಬೆ ದರ್ಶನಕ್ಕೆ ಭಕ್ತರ ಸಂಖ್ಯೆ ಐದು ಪಟ್ಟು ಹೆಚ್ಚಳ: ದಿನೇಶ್‌ಗೂಳಿಗೌಡ

2022ರಲ್ಲಿ 6 ಲಕ್ಷವಿದ್ದ ಭಕ್ತರ ಸಂಖ್ಯೆ 2026ರಲ್ಲಿ 30 ಲಕ್ಷ ದಾಟಿದೆ; ಮಹಿಳೆಯರ ಪರವಾಗಿ ಸರ್ಕಾರಕ್ಕೆ ಅಭಿನಂದನೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಶಕ್ತಿ ಯೋಜನೆಯಿಂದ ಮಹಿಳೆಯರ ಸಂಚಾರ ಸ್ವಾತಂತ್ರ್ಯ ಹೆಚ್ಚುವುದರ ಜತೆಗೆ ಧಾರ್ಮಿಕ ಮತ್ತು ಸಾಂಸ್ಕೃತಿಕ ಕ್ಷೇತ್ರಗಳ ಭೇಟಿಗೂ ಹೆಚ್ಚಿನ ಉತ್ತೇಜನ ದೊರೆತಿದೆ. ಇದಕ್ಕೆ ಹಾಸನಾಂಬೆ ಜಾತ್ರಾ ಮಹೋತ್ಸವದಲ್ಲಿ ಭಕ್ತರ ಸಂಖ್ಯೆಯಲ್ಲಿ ಕಂಡುಬಂದಿರುವ ಗಣನೀಯ ಏರಿಕೆಯೇ ಸಾಕ್ಷಿಯಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಹಾಗೂ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.



ಈ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದಿರುವ ಅವರು, ಚುನಾವಣಾ ಪೂರ್ವದಲ್ಲಿ ಕಾಂಗ್ರೆಸ್ ಪಕ್ಷ ನೀಡಿದ್ದ ಭರವಸೆಯಂತೆ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಸೌಲಭ್ಯ ಕಲ್ಪಿಸಿರುವ ಶಕ್ತಿ ಯೋಜನೆಯಿಂದ ರಾಜ್ಯದ ಮಹಿಳೆಯರ ಬದುಕಿನಲ್ಲಿ ಮಹತ್ವದ ಸಾಮಾಜಿಕ ಬದಲಾವಣೆಯಾಗಿದೆ. ಈ ಯೋಜನೆಯ ಯಶಸ್ಸಿಗಾಗಿ ರಾಜ್ಯದ ಮಹಿಳೆಯರ ಪರವಾಗಿ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸಿದ್ದಾರೆ.


ಹಾಸನದ ಅಧಿದೇವತೆ ಹಾಸನಾಂಬೆಯ ದರ್ಶನ ಪಡೆಯುವ ಭಕ್ತರ ಸಂಖ್ಯೆ ಕಳೆದ ನಾಲ್ಕು ವರ್ಷಗಳಲ್ಲಿ ಸುಮಾರು ಐದು ಪಟ್ಟು ಹೆಚ್ಚಾಗಿದೆ. 2022ರಲ್ಲಿ ಸುಮಾರು 6 ಲಕ್ಷ ಭಕ್ತರು ದೇವಿಯ ದರ್ಶನ ಪಡೆದಿದ್ದರೆ, 2023ರಲ್ಲಿ 14.40 ಲಕ್ಷ, 2024ರಲ್ಲಿ 17.47 ಲಕ್ಷ ಹಾಗೂ 2025ರಲ್ಲಿ 26.13 ಲಕ್ಷ ಭಕ್ತರು ಆಗಮಿಸಿದ್ದರು. 2026ರಲ್ಲಿ ಈ ಸಂಖ್ಯೆ 30 ಲಕ್ಷದ ಗಡಿ ದಾಟಿರುವುದು ವಿಶೇಷವಾಗಿದೆ. ಕೇವಲ 11 ದಿನಗಳ ಜಾತ್ರಾ ಮಹೋತ್ಸವದಲ್ಲಿ ಇಷ್ಟೊಂದು ದೊಡ್ಡ ಸಂಖ್ಯೆಯಲ್ಲಿ ಭಕ್ತರು ಆಗಮಿಸಿರುವುದು ಕ್ಷೇತ್ರದ ಜನಪ್ರಿಯತೆ ಹೆಚ್ಚುತ್ತಿರುವುದನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದ್ದಾರೆ.

ಮಹಿಳೆಯರ ಧಾರ್ಮಿಕ ಪ್ರವಾಸಕ್ಕೆ ಶಕ್ತಿ

ಶಕ್ತಿ ಯೋಜನೆಯಿಂದ ಗ್ರಾಮೀಣ ಪ್ರದೇಶದ ಮಹಿಳೆಯರು, ಹಿರಿಯ ನಾಗರಿಕರು ಹಾಗೂ ಕುಟುಂಬದ ಸದಸ್ಯರು ಯಾವುದೇ ಸಾರಿಗೆ ವೆಚ್ಚದ ಆತಂಕವಿಲ್ಲದೆ ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡಲು ಸಾಧ್ಯವಾಗಿದೆ. ಹಿಂದೆ ಪ್ರಯಾಣದ ವೆಚ್ಚದ ಕಾರಣದಿಂದ ಪುಣ್ಯಕ್ಷೇತ್ರಗಳ ಭೇಟಿಯನ್ನು ಮುಂದೂಡುತ್ತಿದ್ದ ಅನೇಕ ಮಹಿಳೆಯರು ಇಂದು ಸ್ವತಂತ್ರವಾಗಿ ಪ್ರಯಾಣಿಸುವ ಅವಕಾಶ ಪಡೆದಿದ್ದಾರೆ. ಹಾಸನಾಂಬೆ ದರ್ಶನಕ್ಕೆ ವಿವಿಧ ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಆಗಮಿಸಿರುವುದರ ಹಿಂದೆ ಶಕ್ತಿ ಯೋಜನೆಯ ಕೊಡುಗೆಯೂ ಇದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಕೇವಲ ಆರ್ಥಿಕ ನೆರವಿಗೆ ಸೀಮಿತವಾಗದೆ, ಜನಸಾಮಾನ್ಯರ ಬದುಕಿನಲ್ಲಿ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿವೆ. ವಿಶೇಷವಾಗಿ ಶಕ್ತಿ ಯೋಜನೆಯು ಮಹಿಳೆಯರ ಆರ್ಥಿಕ ಸಬಲೀಕರಣ, ಸಂಚಾರ ಸ್ವಾತಂತ್ರ್ಯ ಹಾಗೂ ಸಾಮಾಜಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವಿಕೆಗೆ ಪ್ರೇರಣೆ ನೀಡಿದೆ ಎಂದು ಪತ್ರದಲ್ಲಿ ವಿವರಿಸಿದ್ದಾರೆ.

875.89 ಕೋಟಿ ಉಚಿತ ಪ್ರಯಾಣ



ಶಕ್ತಿ ಯೋಜನೆ ಜಾರಿಯಾದಾಗಿನಿಂದ 2026ರ ನವೆಂಬರ್ 10ರವರೆಗೆ ಒಟ್ಟು 875.89 ಕೋಟಿ ಮಹಿಳಾ ಪ್ರಯಾಣಿಕರು ಉಚಿತ ಬಸ್ ಪ್ರಯಾಣದ ಸೌಲಭ್ಯ ಪಡೆದಿದ್ದಾರೆ. ಇದಕ್ಕಾಗಿ ರಾಜ್ಯ ಸರ್ಕಾರ 23,202.22 ಕೋಟಿ ರೂ. ವೆಚ್ಚ ಭರಿಸಿದೆ. ಕೋಟ್ಯಂತರ ಮಹಿಳೆಯರಿಗೆ ಪ್ರಯಾಣದ ವೆಚ್ಚದ ಹೊರೆಯಿಂದ ಮುಕ್ತಿ ನೀಡಿರುವ ಈ ಯೋಜನೆಯು ಮಹಿಳಾ ಸಬಲೀಕರಣಕ್ಕೆ ನೀಡಿರುವ ಕೊಡುಗೆಯನ್ನು ಈ ಅಂಕಿಅಂಶಗಳು ಸ್ಪಷ್ಟಪಡಿಸುತ್ತವೆ ಎಂದು ತಿಳಿಸಿದ್ದಾರೆ.

ಕೊಟ್ಟ ಮಾತಿನಂತೆ ನಡೆದು ಮಹಿಳೆಯರ ಆಶೋತ್ತರಗಳಿಗೆ ಸ್ಪಂದಿಸಿರುವ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಸರ್ಕಾರಕ್ಕೆ ರಾಜ್ಯದ ಮಹಿಳೆಯರ ಪರವಾಗಿ ಹೃತ್ಪೂರ್ವಕ ಅಭಿನಂದನೆ ಸಲ್ಲಿಸುವುದಾಗಿ ದಿನೇಶ್ ಗೂಳಿಗೌಡ ಪತ್ರದಲ್ಲಿ ತಿಳಿಸಿದ್ದಾರೆ.

ರೈತರು ಆತಂಕ ಪಡಬೇಕಿಲ್ಲ, ಬರಪರಿಹಾರ ತಲುಪಲಿದೆ: ಸಿಎಂ ಡಿಕೆಶಿ

● ವಿಕ್ರಮ ವಾಹಿನಿ । ಬೆಂಗಳೂರು/ ಮೈಸೂರು

'ರಾಜ್ಯದ ರೈತ ಬಾಂಧವರಿಗೆ ಬರ ಪರಿಹಾರದ ಕುರಿತು ಯಾವುದೇ ರೀತಿಯ ಗೊಂದಲ ಬೇಡ. ಪ್ರತಿಯೊಬ್ಬ ಅರ್ಹ ರೈತನಿಗೂ ನಮ್ಮ ಸರ್ಕಾರ ಎರಡು ಕಂತಿನಲ್ಲಿ 5,000 ರೂ. ಬಿಡುಗಡೆ ಮಾಡುತ್ತದೆ. ಮೊದಲನೆ ಕಂತಿನ ಹಣ ಈಗಾಗಲೇ ಅನೇಕ ರೈತರನ್ನು ತಲುಪಿದೆ. ಪ್ರತಿ ರೈತರಿಗೆ ಹಣ ತಲುಪಿಸಲು ಸೂತ್ರ ರಚಿಸಿದೆ' ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಸದಾಶಿವನಗರದ ನಿವಾಸದ ಬಳಿ ಹಾಗೂ ಮೈಸೂರು ವಿಮಾನ ನಿಲ್ದಾಣದ ಬಳಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಬುಧವಾರ ಪ್ರತಿಕ್ರಿಯೆ ನೀಡಿದರು.

'ಪ್ರತಿ ರೈತರಿಗೂ ಒಂದು ನಿರ್ದಿಷ್ಟ ಮೊತ್ತವನ್ನು ನಿಗದಿಪಡಿಸಲಾಗಿದೆ. ಸರಿಯಾದ ಖಾತೆಗಳಿಗೆ ಹಣ ತಲುಪಿದೆ. ಆದರೆ ಹಣ ತಲುಪದ ರೈತರ ಖಾತೆಯಲ್ಲಿ ಇರುವ ಅಡತಡೆ ನಿವಾರಿಸಿ ಪಾವತಿಸಲಾಗುವುದು. ಹೀಗಾಗಿ ರೈತರು ಆತಂಕ ಪಡುವ ಅಗತ್ಯವಿಲ್ಲ' ಎಂದು ಸ್ಪಷ್ಟನೆ ನೀಡಿದರು.



ಸಿಎಂ ಡಿ ಕೆ ಶಿವಕುಮಾರ್ ಅವರು ಮಾಜಿ ಮುಖ್ಯಮಂತ್ರಿ ಡಾ. ಎಂ. ವೀರಪ್ಪ ಮೊಯಿಲಿಯವರ "ವಿಶ್ವಸಂಸ್ಕೃತಿಯ ಮಹಾಯಾನ (ಸಂಪುಟ 4)– ಗದ್ಯ ಮಹಾಕಾವ್ಯವನ್ನು ಮೈಸೂರಿನ ಊಟಿ ರಸ್ತೆಯ ಜೆಎಸ್ ಎಸ್ ವಿದ್ಯಾಸಂಸ್ಥೆಯಲ್ಲಿ ಬುಧವಾರ ಲೋಕಾರ್ಪಣೆ ಮಾಡಿ ಮಾತನಾಡಿದರು. ಸುತ್ತೂರು ಮಠದ ಜಗದ್ಗುರು ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಮಾಜಿ ಮುಖ್ಯಮಂತ್ರಿಗಳಾದ ಡಾ. ಎಂ. ವೀರಪ್ಪ ಮೊಯಿಲಿ, ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಯತೀಂದ್ರ ಸಿದ್ದರಾಮಯ್ಯ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ. ರೇವಣ್ಣ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಎ.ಎಸ್. ಪೊನ್ನಣ್ಣ, ಶಾಸಕರಾದ ತನ್ವೀರ್ ಸೇಠ್, ದರ್ಶನ್ ಧ್ರುವನಾರಾಯಣ್, ಗಣೇಶ್ ಪ್ರಸಾದ್, ರಾಜ್ಯ ಧಾರ್ಮಿಕ ಪರಿಷತ್ತಿನ ಕೆ ಎಂ ನಾಗರಾಜ್, ಸಪ್ನ ಬುಕ್ ಹೌಸ್ ವ್ಯವಸ್ಥಾಪಕ ನಿರ್ದೇಶಕ ನಿತಿನ್ ಶಾ, ಹಿರಿಯ ಸಾಹಿತಿ ಕೆ ಅನಂತರಾಮು ಹಾಗೂ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

ಕೇಂದ್ರ ಸರ್ಕಾರ ಕೊಡದೆ ಇದ್ದರೂ ನುಡಿದಂತೆ ನಾವು ಕೊಡುತ್ತೇವೆ

'ಒಂದು ಪಕ್ಷ ರೈತರಿಗೆ ತಲುಪಬೇಕಾದ ಮೊತ್ತದಲ್ಲಿ ಹೆಚ್ಚು-ಕಮ್ಮಿಯಾಗಿದ್ದರೆ ಅದನ್ನು ಸರಿಪಡಿಸಲಾಗುವುದು.

ಕೇಂದ್ರ ಸರ್ಕಾರ ಪರಿಹಾರ ಬಿಡುಗಡೆ ಮಾಡದೇ ಇದ್ದರೂ ನಮ್ಮ ಸರ್ಕಾರ ರೈತರಿಗೆ ನುಡಿದಂತೆ ಎರಡು ಕಂತುಗಳಲ್ಲಿ 5 ಸಾವಿರ ರೂ. ಪರಿಹಾರ ಪಾವತಿ ಮಾಡುತ್ತದೆ' ಎಂದು ಭರವಸೆ ನೀಡಿದರು.

ತಾಂತ್ರಿಕ ಸಮಸ್ಯೆ ಇದ್ದರೆ ಸರಿಪಡಿಸುತ್ತೇವೆ

'ಒಂದೇ ಬಟನ್ ಮೂಲಕ ಎಲ್ಲಾ ರೈತರ ಖಾತೆಗೂ ಹಣ ವರ್ಗಾವಣೆಯಾಗುತ್ತಿದೆ. ಆದರೆ ಕೆಲವು ಬ್ಯಾಂಕ್ ಖಾತೆಗಳು ಸರಿಯಯಾಗಿಲ್ಲ ಹಾಗೂ ಸಾಲದ ಬಾಬತ್ತಿಗೆ ಲಿಂಕ್ ಆಗಿದೆ. ಎಲ್ಲದರ ದಾಖಲೆಗಳನ್ನು ಪರಿಶೀಲಿಸಿ ಪರಿಹಾರ ಮೊತ್ತ ಶೀಘ್ರ ಪಾವತಿಸಲಾಗುವುದು' ಎಂದರು.

ನಿಗಮ ಮಂಡಳಿಗೆ ಶೀಘ್ರ ನೇಮಕ, ಇಂದು ನಿರ್ದೇಶಕ ಪಟ್ಟಿ ಬಿಡುಗಡೆ

'ನಿಗಮ ಮಂಡಳಿಯ ನೇಮಕ 3 ಹಂತದಲ್ಲಿ ನಡೆಯಲಿದ್ದು, ಮೊದಲನೇ ಹಂತದಲ್ಲಿ 500 ಮಂದಿಯ ನಿರ್ದೇಶಕರ ಪಟ್ಟಿ ಸಿದ್ಧವಿದ್ದು, ಅದಕ್ಕೆ ಸಹಿ ಹಾಕಿ ಬಂದಿದ್ದೇನೆ. ಆ ಪಟ್ಟಿ ಇಂದು ಬಿಡುಗಡೆ ಆಗಲಿದೆ. ಪಕ್ಷದ ಹಿರಿಯ ಶಾಸಕರಿಗೂ ನಿಗಮ ಮಂಡಳಿಯಲ್ಲಿ ಸೂಕ್ತ ಅವಕಾಶ ಕೊಡಬೇಕು. ಅದು ನಮ್ಮ ಕರ್ತವ್ಯ. ಆ ಕೆಲಸವನ್ನು ಮಾಡುತ್ತೇವೆ' ಎಂದು ಭರವಸೆ ನೀಡಿದರು.

ಎಥೆನಾಲ್ ಕಲಬೆರಕೆ ಬಗ್ಗೆ ಉತ್ತರಿಸಿ, ಬಿಜೆಪಿ ನಾಯಕರು ಪ್ರತಿಭಟನೆ ಮಾಡಲಿ

ಬೆಲೆ ಏರಿಕೆ ವಿರುದ್ಧ ಬಿಜೆಪಿ ನಾಯಕರು ಬೆಂಗಳೂರಲ್ಲಿ ಪ್ರತಿಭಟನೆ ಮಾಡುತ್ತಿರುವ ಬಗ್ಗೆ ಕೇಳಿದಾಗ, 'ಮಾಡಲಿ, ಅವರು ಮಾಡುತ್ತಿರುವುದು ಪ್ರತಿಭಟನೆಯಲ್ಲ ರಾಜಕಾರಣ. ಕೇಂದ್ರ ಸರ್ಕಾರ ತೈಲಬೆಲೆ ಏರಿಸಿದಾಗ ಏಕೆ ಪ್ರತಿಭಟನೆ ಮಾಡಲಿಲ್ಲ? ಎಥೆನಾಲ್ ಅನ್ನು ಶೇ.20ರಷ್ಟು ಬೆರೆಸುವ ಬದಲು ಶೇ.30ರಷ್ಟು ಬೆರೆಸಿದ್ದಾರೆ. ಇದರಿಂದ ರಾಜ್ಯದ ಕೋಟ್ಯಂತರ ವಾಹನಗಳಿಗೆ ತೊಂದರೆಯಾಗಿದೆ. ಎಂಜಿನ್ ಗಳು ಕೆಟ್ಟು ಹೋಗಿ ನಷ್ಟವಾಗಿದೆ. ಇವೆಲ್ಲಾ ಬಿಜೆಪಿ ಅವರಿಗೆ ಕಾಣುವುದಿಲ್ಲವೇ? ಈ ಅವಾಂತರ ಅವರಿಗೆ ತಿಳಿದಿಲ್ಲವೇ?' ಎಂದು ಪ್ರಶ್ನಿಸಿದರು.

'ಎಥೆನಾಲ್ ಅವೈಜ್ಞಾನಿಕ ಬೆರೆಕೆಗೆ ಸಂಬಂಧಿಸಿದಂತೆ ನಮ್ಮ ಆಹಾರ ಮಂತ್ರಿಗಳು ರಾಜ್ಯದ 67ಕಡೆ ಪರೀಕ್ಷೆ ನಡೆಸಿ ಸತ್ಯಾಸತ್ಯತೆ ಅರಿತಿದ್ದಾರೆ. ಈ ಕೃತ್ಯದ ಬಗ್ಗೆ ಸಾಕ್ಷೀ ಸಮೇತ ಕೇಂದ್ರ ಸರ್ಕಾರದ ಗಮನಕ್ಕೂ ತಂದಿದ್ದಾರೆ. ಕಲಬೆರೆಕೆ ತೈಲ ಸರಬರಾಜು ಮಾಡಿ ರಾಜ್ಯದ ಜನರಿಗೆ ಹೊಡೆತ ನೀಡಿರುವುದಕ್ಕೆ ಯಾರು ಜವಾಬ್ದಾರಿ? ಕೇಂದ್ರದ ಸಚಿವರು ಇಲ್ಲ, ಇಲ್ಲ ಎನ್ನುತ್ತಿದ್ದಾರೆ. ಆದರೆ, ನಮ್ಮ ಸ್ಯಾಂಪಲ್ ಗಳು ಸಾಕ್ಷಿಗೆ ಇವೆ. ಮೊದಲು ಇದಕ್ಕೆ ಬಿಜೆಪಿಯವರು ಉತ್ತರ ಕೊಡಲಿ' ಎಂದು ಸವಾಲು ಹಾಕಿದರು.

ಬಿಜೆಪಿ ನಾಯಕರು ಕಾಂಗ್ರೆಸ್ ವಿರುದ್ಧ ಅವಾಚ್ಯ ಶಬ್ದ ಬಳಕೆ ಮಾಡಿರುವ ಬಗ್ಗೆ ಕೇಳಿದಾಗ, 'ಅವರ ಖುಷಿಗೆ ಮಾತನಾಡುತ್ತಿದ್ದಾರೆ. ಛಲವಾದಿ ನಾರಾಯಣಸ್ವಾಮಿ ಅವರು ತುಂಡು ತುಂಡಾಗಿ ಕತ್ತರಿಸಿ ಸಮುದ್ರಕ್ಕೆ ಹಾಕುತ್ತೇನೆ ಅಂದರು, ಇನ್ನೊಬ್ಬರು ಪಕ್ಷ ಅಧ್ಯಕ್ಷರು 'ನನ್ಮಕ್ಕಳು' ಅಂತ ಜರಿದರು. ಹಾಗಾದರೆ, ನಾವೆಲ್ಲಾ ವಿಜಯೇಂದ್ರರ ಮಕ್ಕಳಾ? ಬಿಜೆಪಿ ಅವರು ಆತ್ಮಸಂತೋಷಕ್ಕೆ ಬೇರೆಯವರನ್ನು ಬೈಯುತ್ತಿದ್ದಾರೆ' ಎಂದರು.

ಗೌರಿ ಲಂಕೇಶ್, ಎಂ.ಎಂ. ಕಲಬುರಗಿ ಹತ್ಯೆಯಲ್ಲಿ ಸಂಘ ಪರಿವಾರದ ಪಾತ್ರವಿದ್ದರೆ ಮೂರು ದಿನದಲ್ಲಿ ದಾಖಲೆಕೊಡಿ: ತೇಜಸ್ವಿ ಸೂರ್ಯ ಸವಾಲು

● ವಿಕ್ರಮ ವಾಹಿನಿ । ಬೆಂಗಳೂರು

ಗೌರಿ ಲಂಕೇಶ್, ಪ್ರೊ. ಎಂ.ಎಂ. ಕಲ್ಬುರ್ಗಿ ಸೇರಿದಂತೆ ವಿಚಾರವಾದಿಗಳ ಹತ್ಯೆ ಪ್ರಕರಣಗಳಲ್ಲಿ ಆರ್‌ಎಸ್‌ಎಸ್ ಮತ್ತು ಸಂಘ ಪರಿವಾರಕ್ಕೆ ಸಂಬಂಧಿಸಿದವರ ಪಾತ್ರವಿದೆ ಎಂಬ ಗೃಹಸಚಿವ ಪ್ರಿಯಾಂಕ್ ಖರ್ಗೆ ಆರೋಪಕ್ಕೆ ಆಕ್ಷೇಪಿಸಿರುವ ಬಿಜೆಪಿ ಸಂಸದ ತೇಜಸ್ವಿ ಸೂರ್ಯ, ಆರೋಪಕ್ಕೆ ಸೂಕ್ತ ಸಾಕ್ಷ್ಯ ಒದಗಿಸಬೇಕು; ಸಾಧ್ಯವಾಗದಿದ್ದರೆ ಮೂರು ದಿನಗಳೊಳಗೆ ತಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಸವಾಲು ಹಾಕಿದ್ದಾರೆ.

ಈ ವಿಚಾರವಾಗಿ ಪ್ರಿಯಾಂಕ್ ಖರ್ಗೆ ಹಾಗೂ ತೇಜಸ್ವಿ ಸೂರ್ಯ ನಡುವೆ ಸಾಮಾಜಿಕ ಜಾಲತಾಣದ ಮೂಲಕ ವಾಗ್ವಾದ ನಡೆದಿದ್ದು, ಖರ್ಗೆ ಆರೋಪಗಳಿಗೆ ಪ್ರತಿಕ್ರಿಯಿಸಿರುವ ತೇಜಸ್ವಿ, ಗೌರಿ ಲಂಕೇಶ್ ಮತ್ತು ಪ್ರೊ. ಕಲ್ಬುರ್ಗಿ ಅವರಿಗೆ ನ್ಯಾಯ ದೊರಕಿಸುವುದು ಅತ್ಯಂತ ಗಂಭೀರ ವಿಚಾರವಾಗಿದ್ದು, ರಾಜಕೀಯ ವೇದಿಕೆಗಳಲ್ಲಿ ನೀಡುವ ಆರೋಪ-ಪ್ರತ್ಯಾರೋಪಗಳಿಗಿಂತ ಪ್ರಕರಣಗಳ ನಿಷ್ಪಕ್ಷಪಾತ ತನಿಖೆ ಮುಖ್ಯ ಎಂದು ಹೇಳಿದ್ದಾರೆ.

ಕರ್ನಾಟಕದ ಗೃಹಸಚಿವರಾಗಿ ಕಾನೂನಿನ ಆಳ್ವಿಕೆಯನ್ನು ಕಾಪಾಡುವುದು ಖರ್ಗೆ ಅವರ ಜವಾಬ್ದಾರಿ. ತನಿಖೆ ಪೂರ್ಣಗೊಳ್ಳುವ ಮುನ್ನವೇ ಪ್ರಕರಣದಲ್ಲಿ ಭಾಗಿಯಾದವರನ್ನು ಜೈಲಿಗೆ ಕಳುಹಿಸಲಾಗುವುದು ಎಂದು ಹೇಳುವುದು ನ್ಯಾಯಾಂಗದ ತೀರ್ಪಿನ ಮೇಲೆ ಪೂರ್ವಗ್ರಹದ ಪರಿಣಾಮ ಬೀರುವ ಸಾಧ್ಯತೆಯಿದೆ ಆಕ್ಷೇಪಿಸಿದ್ದಾರೆ.

ಇತ್ತೀಚೆಗೆ ಕೇರಳದ ಕೊಚ್ಚಿಯಲ್ಲಿ ನಡೆದ ಮುಸ್ಲಿಂ ಯೂತ್ ಲೀಗ್ ರಾಜ್ಯ ಸಮ್ಮೇಳನದ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ್ದ ಪ್ರಿಯಾಂಕ್ ಖರ್ಗೆ, ಗೌರಿ ಲಂಕೇಶ್, ಎಂ.ಎಂ. ಕಲ್ಬುರ್ಗಿ ಹಾಗೂ ನರೇಂದ್ರ ದಾಭೋಲ್ಕರ್ ಅವರ ಹತ್ಯೆ ಪ್ರಕರಣಗಳ ತನಿಖೆ ನಡೆಯುತ್ತಿದ್ದು, ಪ್ರಕರಣಗಳಲ್ಲಿ ಭಾಗಿಯಾದವರು ಆರು ತಿಂಗಳೊಳಗೆ ಜೈಲು ಸೇರುತ್ತಾರೆ ಎಂದು ಹೇಳಿದ್ದರು. ಈ ಹೇಳಿಕೆಯನ್ನು ಉಲ್ಲೇಖಿಸಿರುವ ಅವರು, ತನಿಖೆ ನಡೆಯುತ್ತಿರುವ ಪ್ರಕರಣದಲ್ಲಿ ಆರೋಪಿಗಳ ಕುರಿತು ಅಂತಿಮ ತೀರ್ಪಿನ ರೀತಿಯಲ್ಲಿ ಮಾತನಾಡುವುದು ಸರಿಯಲ್ಲ ಎಂದು ಹೇಳಿದ್ದಾರೆ.

ಅಲ್ಲದೆ, ಹತ್ಯೆ ಪ್ರಕರಣಗಳಲ್ಲಿ ಸಂಘದ ಪಾತ್ರವಿದೆ ಎಂಬ ಆರೋಪಕ್ಕೆ ಸಾಕ್ಷ್ಯ ನೀಡುವಂತೆ ತೇಜಸ್ವಿ ಸೂರ್ಯ ಒತ್ತಾಯಿಸಿದ್ದಾರೆ. ಸಾಕ್ಷ್ಯ ನೀಡಲು ಸಾಧ್ಯವಾಗದಿದ್ದರೆ ಮೂರು ದಿನಗಳೊಳಗೆ ರಾಜೀನಾಮೆ ನೀಡಬೇಕು ಎಂದು ಸವಾಲು ಹಾಕಿದ್ದಾರೆ. ಗೌರಿ ಲಂಕೇಶ್, ಕಲ್ಬುರ್ಗಿ, ದಾಭೋಲ್ಕರ್ ಹಾಗೂ ಗೋವಿಂದ ಪನ್ಸಾರೆ ಅವರ ಹತ್ಯೆ ಪ್ರಕರಣಗಳು ಹಲವು ವರ್ಷಗಳಿಂದ ರಾಜಕೀಯವಾಗಿ ಸೂಕ್ಷ್ಮ ವಿಷಯವಾಗಿವೆ. ಈ ಪ್ರಕರಣಗಳ ತನಿಖೆ ಮತ್ತು ಆರೋಪಿಗಳ ಹಿನ್ನೆಲೆ ಕುರಿತು ವಿವಿಧ ಹಂತಗಳಲ್ಲಿ ಹಲವು ಆರೋಪ-ಪ್ರತ್ಯಾರೋಪಗಳು ಕೇಳಿಬಂದಿವೆ.

ಇದೀಗ ಪ್ರಿಯಾಂಕ್ ಖರ್ಗೆ ಅವರ ಇತ್ತೀಚಿನ ಹೇಳಿಕೆ ಮತ್ತು ಅದಕ್ಕೆ ತೇಜಸ್ವಿ ಸೂರ್ಯ ನೀಡಿರುವ ಪ್ರತಿಕ್ರಿಯೆಯಿಂದ ಈ ವಿಚಾರ ಮತ್ತೆ ರಾಜಕೀಯ ವಾಗ್ವಾದದ ಕೇಂದ್ರಕ್ಕೆ ಬಂದಿದೆ. ಒಂದು ಕಡೆ ಹತ್ಯೆ ಪ್ರಕರಣಗಳ ತನಿಖೆಯನ್ನು ಆಧರಿಸಿ ಸಂಘ ಪರಿವಾರದ ಸಂಪರ್ಕದ ಬಗ್ಗೆ ಖರ್ಗೆ ಪ್ರಶ್ನೆ ಎತ್ತಿದ್ದರೆ, ಮತ್ತೊಂದೆಡೆ ತನಿಖೆ ಪೂರ್ಣಗೊಳ್ಳುವ ಮುನ್ನವೇ ರಾಜಕೀಯ ಆರೋಪಗಳನ್ನು ಮಾಡಲಾಗುತ್ತಿದೆ ಎಂದು ಬಿಜೆಪಿ ಆರೋಪಿಸುತ್ತಿದೆ.

ಹೀಗಾಗಿ ಪ್ರಕರಣಗಳ ತನಿಖೆ ಯಾವ ಹಂತದಲ್ಲಿದೆ, ತನಿಖೆಯಿಂದ ಇದುವರೆಗೆ ಯಾವ ಸಾಕ್ಷ್ಯಗಳು ಲಭ್ಯವಾಗಿವೆ? ಮತ್ತು ಆರೋಪಗಳಿಗೆ ಕಾನೂನುಬದ್ಧ ಆಧಾರವೇನು? ಎಂಬುದರ ಕುರಿತು ಮುಂದಿನ ದಿನಗಳಲ್ಲಿ ಸ್ಪಷ್ಟತೆ ದೊರೆಯುವ ನಿರೀಕ್ಷೆಯಿದೆ.

ಪತ್ರಿಕಾ ವಿತರಕರ ವಿಮಾ ಕಠಿಣ ಷರತ್ತು ಸರಳೀಕರಣಕ್ಕೆ ಪ್ರಯತ್ನ: ಕೆ.ವಿ.ಪ್ರಭಾಕರ್

ವಿತರಕರಿಗೆ ಸಾಮಾಜಿಕ, ಆರ್ಥಿಕ ಭದ್ರತೆ ಒದಗಿಸಲು ಶಿವಾನಂದ ತಗಡೂರು ಆಗ್ರಹ

● ವಿಕ್ರಮ ವಾಹಿನಿ । ಬೆಳಗಾವಿ

ಪತ್ರಿಕಾ ವಿತರಕರಿಗೆ ಜಾರಿಯಲ್ಲಿರುವ ವಿಮಾ ಯೋಜನೆಯ ಕಠಿಣ ಷರತ್ತುಗಳನ್ನು ಸರಳೀಕರಣಗೊಳಿಸಲು ಪ್ರಯತ್ನಿಸುವುದಾಗಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಭರವಸೆ ನೀಡಿದ್ದಾರೆ.

ಬುಧವಾರ ನಗರದ ಧರ್ಮನಾಥ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟ ಹಾಗೂ ನ್ಯೂಸ್ ಪೇಪರ್ ಡಿಸ್ಟ್ರಿಬ್ಯೂಟರ್ಸ್ ಚಾರಿಟಬಲ್ ಟ್ರಸ್ಟ್ ಆಶ್ರಯದಲ್ಲಿ ಆಯೋಜಿಸಿದ್ದ ಪತ್ರಿಕಾ ವಿತರಕರ 6ನೇ ರಾಜ್ಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಪತ್ರಿಕಾ ವಿತರಕರು ಶ್ರಮಜೀವಿಗಳು. ಪತ್ರಿಕೆ ಹಾಕುತ್ತಲೇ ಬೆಳೆದು ಬಂದವನು ನಾನು. ಹೀಗಾಗಿ, ಸಿದ್ದರಾಮಯ್ಯ ಅವರ ಸರ್ಕಾರದ ಅವಧಿಯಲ್ಲಿ ಪತ್ರಿಕಾ ವಿತರಕರಿಗೆ ಕೆಲವು ಸೌಲಭ್ಯಗಳನ್ನು ಕೊಡಿಸುವ ನಿಟ್ಟಿನಲ್ಲಿ ಶಿವಾನಂದ ತಗಡೂರು ಹಾಗೂ ನಾನು ಪ್ರಾಮಾಣಿಕ ಪ್ರಯತ್ನ ಮಾಡಿದ್ದೇವೆ ಎಂದು ಹೇಳಿದರು.

ಸುದ್ದಿಮನೆಯಲ್ಲಿ ಪತ್ರಿಕಾ ವಿತರಕರ ಪಾತ್ರ ಅತ್ಯಂತ ಮಹತ್ವದ್ದು. ಅವರ ಬದುಕಿಗೆ ಸಾಮಾಜಿಕ ಹಾಗೂ ಆರ್ಥಿಕ ಭದ್ರತೆ ಒದಗಿಸಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಆಗ್ರಹಿಸಿದರು.



ದೇಶದಲ್ಲಿಯೇ ಮೊದಲ ಬಾರಿಗೆ ಪತ್ರಿಕಾ ವಿತರಕರಿಗೆ ವಿವಿಧ ಸೌಲಭ್ಯಗಳನ್ನು ಒದಗಿಸುವ ಪ್ರಯತ್ನ ನಡೆದಿದ್ದು, ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾಗ ವಿತರಕರು ಮೃತಪಟ್ಟರೆ ಅವರ ಕುಟುಂಬಕ್ಕೆ ರೂ. 2 ಲಕ್ಷ ವಿಮಾ ಪರಿಹಾರ ನೀಡುವ ಯೋಜನೆ ಜಾರಿಗೊಳಿಸಲಾಗಿತ್ತು. ಈ ವಿಮಾ ಮೊತ್ತವನ್ನು ಹೆಚ್ಚಿಸುವುದರ ಜತೆಗೆ, ಯೋಜನೆಯಲ್ಲಿರುವ ಕಠಿಣ ಷರತ್ತುಗಳನ್ನು ಸರಳೀಕರಣಗೊಳಿಸಬೇಕು ಎಂದು ಒತ್ತಾಯಿಸಿದರು.

ಕೋವಿಡ್ ಸಂದರ್ಭದಲ್ಲಿ ಮೃತಪಟ್ಟ ಪತ್ರಕರ್ತರ ಕುಟುಂಬಗಳಿಗೆ ತಲಾ ರೂ. 5 ಲಕ್ಷ ನೆರವು ಕೊಡಿಸಲಾಗಿತ್ತು. ಇದೇ ಮಾದರಿಯಲ್ಲಿ ಪತ್ರಿಕಾ ವಿತರಕರಿಗೂ ಸರ್ಕಾರ ನೆರವು ನೀಡಬೇಕು. ಭವಿಷ್ಯದಲ್ಲಿ ವಿತರಕರಿಗೆ ಇನ್ನಷ್ಟು ಸೌಲಭ್ಯಗಳನ್ನು ಒದಗಿಸುವ ಅಗತ್ಯವಿದೆ. ಪತ್ರಿಕಾ ವಿತರಕರಿಗೆ ಮೊಟ್ಟಮೊದಲ ಬಾರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡಿರುವುದು ಅವರ ಸೇವೆಗೆ ಸಂದ ಗೌರವವಾಗಿದೆ ಎಂದು ಹೇಳಿದರು.

ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಶಂಭುಲಿಂಗ ಮಾತನಾಡಿ, ಮಳೆ, ಗಾಳಿ, ಚಳಿ ಎನ್ನದೆ ಪ್ರತಿನಿತ್ಯ ಮುಂಜಾನೆ ಮನೆಮನೆಗೆ ಪತ್ರಿಕೆ ತಲುಪಿಸುವ ವಿತರಕರ ಸಮಸ್ಯೆಗಳಿಗೆ ಸೂಕ್ತ ಸ್ಪಂದನೆ ದೊರೆಯುತ್ತಿಲ್ಲ. ಕೋವಿಡ್ ಸಂದರ್ಭದಲ್ಲಿ ಅನೇಕರು ಉದ್ಯೋಗ ಕಳೆದುಕೊಂಡರೆ, ಕೆಲವರು ಜೀವವನ್ನೂ ಕಳೆದುಕೊಂಡಿದ್ದಾರೆ. ಸರ್ಕಾರ ವಿತರಕರ ಸಂಘಟನೆಗೆ ನೆರವು ನೀಡಬೇಕು ಎಂದು ಒತ್ತಾಯಿಸಿದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಸಂಗಮ್ ಸುರೇಶ ಮಾತನಾಡಿ, ರಾಜ್ಯದಲ್ಲಿ ಸುಮಾರು 25 ಸಾವಿರ ಪತ್ರಿಕಾ ವಿತರಕರು ಕಾರ್ಯನಿರ್ವಹಿಸುತ್ತಿದ್ದಾರೆ. ಪತ್ರಿಕೆಗಳ ಓದುಗರ ಸಂಖ್ಯೆ ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ ವಿತರಕರ ಬದುಕು ಸಂಕಷ್ಟಕ್ಕೆ ಸಿಲುಕಿದೆ. ಸರ್ಕಾರ ವಿಶೇಷ ಸೌಲಭ್ಯಗಳ ಜತೆಗೆ ರೂ. 10 ಕೋಟಿ ಅನುದಾನ ನೀಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಆಗ್ರಹಿಸಿದರು.

ಸಮ್ಮೇಳನಾಧ್ಯಕ್ಷ ಪ್ರತಾಪ ಬೋಸ್ಲೆ, ರಾಜ್ಯ ವಿತರಕರ ಒಕ್ಕೂಟದ ಉಪಾಧ್ಯಕ್ಷ ಪ್ರಶಾಂತ ಕುಮಾರ್, ಸಂಗಮ್, ದೀಪಕ್, ಜವರಪ್ಪ ಮತ್ತಿತರರು ಉಪಸ್ಥಿತರಿದ್ದರು.

ಸಮ್ಮೇಳನದಲ್ಲಿ ಪತ್ರಕರ್ತರು ಹಾಗೂ ಪತ್ರಿಕಾ ವಿತರಕರನ್ನು ಸನ್ಮಾನಿಸಲಾಯಿತು. ವಿತರಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವೂ ನಡೆಯಿತು.

ಅಲ್ಪಸಂಖ್ಯಾತರ ಇಲಾಖೆಯಿಂದ ಹೊರಡಿಸಿರುವ ವಿವಾದಾತ್ಮಕ ಹಾಗೂ ದಾರಿ ತಪ್ಪಿಸುವ ಜಾಹೀರಾತಿನ ಬಗ್ಗೆ ಸ್ಪಷ್ಟನೆ ನೀಡಿ, ಕೂಡಲೇ ಹಿಂಪಡೆಯಿರಿ: ಎನ್. ರವಿಕುಮಾರ್ ಆಗ್ರಹ



● ವಿಕ್ರಮ ವಾಹಿನಿ । ಬೆಂಗಳೂರು

ಅಲ್ಪಸಂಖ್ಯಾತರ ಇಲಾಖೆಯು ಹೊರಡಿಸಿರುವ ಅತ್ಯಂತ ವಿವಾದಾತ್ಮಕ ಹಾಗೂ ದಾರಿ ತಪ್ಪಿಸುವ ಜಾಹೀರಾತಿನ ಕುರಿತು ಸ್ಪಷ್ಟನೆ ನೀಡುವುದರ ಜೊತೆಗೆ ಅದನ್ನು ಕೂಡಲೇ ಹಿಂಪಡೆಯುವಂತೆ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಆಗ್ರಹಿಸಿದ್ದಾರೆ.

ಈ ಸಂಬಂಧ ಬುಧವಾರ ಬೆಳಗ್ಗೆ ತುರ್ತು ಪತ್ರ ಬರೆದಿರುವ ರವಿಕುಮಾರ್ ಅವರು, ಅಲ್ಪಸಂಖ್ಯಾತರ ಇಲಾಖೆಯ ಜಾಹೀರಾತಿನಲ್ಲಿ ಕೇವಲ ಅಲ್ಪಸಂಖ್ಯಾತ ಯುವಕರಿಗೆ ಮಾತ್ರ 60 ದಿನಗಳ ಸೇನಾ ತರಬೇತಿ ನೀಡಲಾಗುವುದು ಎಂದು ಉಲ್ಲೇಖಿಸಿರುವುದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

"ಸೇನೆಯು ಧರ್ಮದ ಆಧಾರದ ಮೇಲೆ ತರಬೇತಿ ನೀಡುವುದಿಲ್ಲ. ಧರ್ಮದ ಆಧಾರದ ಮೇಲೆ ಸೇನಾ ತರಬೇತಿ ನೀಡಲು ಸಂವಿಧಾನದಲ್ಲಿಯೂ ಯಾವುದೇ ಅವಕಾಶವಿಲ್ಲ" ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಭಾರತೀಯ ಸೇನೆಯು ತನ್ನದೇ ಆದ ಕಠಿಣ ಆಯ್ಕೆ ಪ್ರಕ್ರಿಯೆಯ ಮೂಲಕ ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾತ್ರ ಸೇನಾ ತರಬೇತಿ ನೀಡುತ್ತದೆ. ಸೇನೆಯ ತರಬೇತಿ ಅಥವಾ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರಕ್ಕೆ ಯಾವುದೇ ಪಾತ್ರವಿಲ್ಲ ಎಂದು ರವಿಕುಮಾರ್ ಪ್ರತಿಪಾದಿಸಿದ್ದಾರೆ.

ಈ ಜಾಹೀರಾತು ಅತ್ಯಂತ ವಿವಾದಾತ್ಮಕವಾಗಿದ್ದು, ಸಂಪೂರ್ಣವಾಗಿ ದಾರಿ ತಪ್ಪಿಸುವಂತಿದೆ. ಮುಗ್ಧ ಅಲ್ಪಸಂಖ್ಯಾತ ಯುವಕರನ್ನು ತಪ್ಪು ದಾರಿಗೆಳೆಯುವ ಉದ್ದೇಶದಿಂದ ಇಂತಹ ಜಾಹೀರಾತು ನೀಡಲಾಗಿದೆ ಎಂದು ಅವರು ಆರೋಪಿಸಿದ್ದಾರೆ.

ರಾಜ್ಯ ಸರ್ಕಾರವು ಕೆಲವೊಮ್ಮೆ ರೈಲು ಅಪಘಾತ, ಪ್ರವಾಹ, ಭೂಕಂಪ ಸೇರಿದಂತೆ ತುರ್ತು ಪರಿಸ್ಥಿತಿಗಳನ್ನು ಸಮರ್ಥವಾಗಿ ಎದುರಿಸುವ ಉದ್ದೇಶದಿಂದ ಜಾತಿ, ಧರ್ಮ ಹಾಗೂ ಸಮುದಾಯಗಳ ಭೇದವಿಲ್ಲದೆ ಯುವಕರಿಗೆ ನಾಗರಿಕ ರಕ್ಷಣಾ ಕಾರ್ಯಕ್ರಮಗಳಡಿ ತರಬೇತಿ ನೀಡುತ್ತದೆ ಎಂದು ಅವರು ತಿಳಿಸಿದ್ದಾರೆ.

ಆದರೆ, ಅಲ್ಪಸಂಖ್ಯಾತರ ಇಲಾಖೆಯು ಕೇವಲ ಮುಸ್ಲಿಂ ಯುವಕರಿಗೆ ಮಾತ್ರ ಸೇನಾ ತರಬೇತಿ ನೀಡಲಿದೆ ಎಂದು ಹೇಳುವುದು ಸರಿಯಲ್ಲ. ಈ ಜಾಹೀರಾತು ವಿವಾದಾತ್ಮಕ ಹಾಗೂ ದಾರಿ ತಪ್ಪಿಸುವಂತಿದೆ ಎಂದು ಅವರು ಪುನರುಚ್ಚರಿಸಿದ್ದಾರೆ.

ಆದ್ದರಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈ ಕುರಿತು ಕೂಡಲೇ ಸ್ಪಷ್ಟನೆ ನೀಡಬೇಕು ಹಾಗೂ ಅಲ್ಪಸಂಖ್ಯಾತರ ಇಲಾಖೆಗೆ ವಿವಾದಾತ್ಮಕ ಜಾಹೀರಾತನ್ನು ಹಿಂಪಡೆಯುವಂತೆ ನಿರ್ದೇಶನ ನೀಡಬೇಕು ಎಂದು ಎನ್. ರವಿಕುಮಾರ್ ಆಗ್ರಹಿಸಿದ್ದಾರೆ.

ಕಾರ್ಯಕರ್ತರಿಗೆ ಪ್ರೇರೇಪಣೆ ಕೊಡಲು ಯಡಿಯೂರಪ್ಪ ಸಲಹೆ



● ವಿಕ್ರಮ ವಾಹಿನಿ । ಬೆಂಗಳೂರು

ಬಿಜೆಪಿ ಮುಖಂಡರು ಕಾರ್ಯಕರ್ತರಲ್ಲಿ ಉತ್ಸಾಹ ಮೂಡಿಸಿ ಈ ಭ್ರಷ್ಟ ಕಾಂಗ್ರೆಸ್ ಸರಕಾರವನ್ನು ಕಿತ್ತು ಹಾಕಲು ಪ್ರೇರೇಪಿಸಿ; ಆಗ ಎನ್‌ಡಿಎ ಸರಕಾರ ಕರ್ನಾಟಕದಲ್ಲಿ ಅಧಿಕಾರಕ್ಕೆ ಏರುವುದು ಖಚಿತ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ತಿಳಿಸಿದ್ದಾರೆ.

ರಾಜ್ಯ ಸರಕಾರದ ಬೆಲೆ ಏರಿಕೆ ಖಂಡಿಸಿ ಬಿಜೆಪಿ ರಾಜ್ಯ ಘಟಕದ ವತಿಯಿಂದ ಇಂದು ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿರೋಧ ಪಕ್ಷದ ನಾಯಕರಾದ ಆರ್ ಅಶೋಕ್, ಛಲವಾದಿ ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ಈ ಪ್ರತಿಭಟನೆ ನಡೆಯಿತು.

ಈ ಸರಕಾರ ದಿವಾಳಿಯಾಗಿದೆ. ಸರಕಾರಿ ಬಸ್ಸುಗಳಿಗೆ ಡೀಸೆಲ್ ಕೊಡಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಶಿವಕುಮಾರ್ ಅವರೇ ಹೇಳಿದ್ದಾರೆ. ಹಣ- ಹೆಂಡ- ತೋಳ್ಬಲ, ಅಧಿಕಾರ ಬಲದಿಂದ ಅಧಿಕಾರಕ್ಕೆ ಬರುವ ಭ್ರಮೆಯಲ್ಲಿರುವ ಕಾಂಗ್ರೆಸ್ ಪಕ್ಷವನ್ನು ಜನರು ತಿರಸ್ಕರಿಸಿದ್ದಾರೆ ಎಂದು ತಿಳಿಸಿದರು.

ನರೇಂದ್ರ ಮೋದಿಜೀ ಅವರ ಹೇಳಿಕೆಯನ್ನು ಪ್ರಪಂಚದ ಜನರೇ ಕಾಯುತ್ತಿರುತ್ತಾರೆ. ಅಂಥ ಮಹಾನ್ ನಾಯಕ ಮೋದಿಜೀ ಅವರು ನಾಡಿದ್ದು ಮೈಸೂರಿಗೆ ಬರಲಿದ್ದಾರೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಎಲ್ಲಾ ಕೋರ್ ಕಮಿಟಿ ಸದಸ್ಯರು, ಸಂಸದರು, ಶಾಸಕರು, ವಿಧಾನ ಪರಿಷತ್ತಿನ ಸದಸ್ಯರು, ರಾಜ್ಯ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು ಹಾಗೂ ಪ್ರಮುಖರು ಉಪಸ್ಥಿತರಿದ್ದರು.

ಬರ ಪರಿಹಾರ ಕೆಲ ರೈತರಿಗೆ ಒಂದೂವರೆ, ಎರಡು ಸಾವಿರ ಜಮೆಯಾಗಲು ಕಾರಣವೇನು: ಆರ್. ಅಶೋಕ

● ವಿಕ್ರಮ ವಾಹಿನಿ । ಬೆಂಗಳೂರು

ಬರದ ಸಂಕಷ್ಟದಲ್ಲಿರುವ ರೈತರಿಗೆ 5,000 ಪರಿಹಾರ ನೀಡುವುದಾಗಿ ಘೋಷಿಸಿ, ಮೊದಲ ಕಂತಿನಲ್ಲಿ 2,500 ಜಮೆ ಮಾಡುವುದಾಗಿ ಹೇಳಿದ್ದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ, ಕೆಲ ರೈತರ ಬ್ಯಾಂಕ್ ಖಾತೆಗಳಿಗೆ 1,500, 2,000 ಮಾತ್ರ ಜಮೆಯಾಗಿದೆ ಏಕೆ? ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ್ ಪ್ರಶ್ನಿಸಿದ್ದಾರೆ.

ಸಂಕಷ್ಟದ ಸಮಯದಲ್ಲೂ ಪರಿಹಾರದ ಹಣದಲ್ಲಿ ಇಂಥ ತಾರತಮ್ಯ ಏಕೆ ನಡೆಯುತ್ತಿದೆ? ಸರ್ಕಾರ ಘೋಷಿಸಿದ ಮೊತ್ತವನ್ನೇ ಅನ್ನದಾತರ ಬ್ಯಾಂಕ್ ಖಾತೆಗೆ ತಲುಪಿಸಲು ಸಾಧ್ಯವಾಗದಿರುವುದು ಆಡಳಿತ ವೈಫಲ್ಯವಲ್ಲವೇ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

ರೈತರಿಗೆ ಪರಿಹಾರ ಬೇಕೇ ಹೊರತು ಪ್ರಚಾರದ ಭಾಷಣಗಳಲ್ಲ. ಸರ್ಕಾರ ಘೋಷಿಸಿರುವ 5,000 ಪರಿಹಾರದಲ್ಲಿ ಕಡಿಮೆ ಮೊತ್ತ ಜಮೆಯಾಗಿರುವ ಬಗ್ಗೆ ಮುಖ್ಯಮಂತ್ರಿಗಳು ರಾಜ್ಯದ ರೈತರಿಗೆ ಸ್ಪಷ್ಟ ಉತ್ತರ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಅಲ್ಲದೆ ರೈತರಿಗೆ ಬಾಕಿ ಉಳಿದಿರುವ ಪರಿಹಾರದ ಮೊತ್ತವನ್ನು ಕೂಡಲೇ ಬಿಡುಗಡೆ ಮಾಡಬೇಕು. ಅನ್ನದಾತರನ್ನು ಕೇವಲ ಘೋಷಣೆಗಳ ಮೂಲಕ ವಂಚಿಸುವುದನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದ್ದಾರೆ. ರೈತರ ಖಾತೆಗೆ ಘೋಷಿಸಿದ ಸಂಪೂರ್ಣ ಪರಿಹಾರ ತಲುಪಿಸುವಲ್ಲಿ ಸರ್ಕಾರ ವಿಫಲವಾದರೆ, ಕಾಂಗ್ರೆಸ್ ಸರ್ಕಾರದ ಈ ಬೇಜವಾಬ್ದಾರಿತನಕ್ಕೆ ರಾಜ್ಯದ ಜನತೆ ತಕ್ಕ ಉತ್ತರ ನೀಡಲಿದ್ದಾರೆ ಎಂದು ಆರ್.ಅಶೋಕ್ ಎಚ್ಚರಿಕೆ ನೀಡಿದ್ದಾರೆ.

ಅಜ್ಜನ ಆಸ್ತಿಯಲ್ಲಿ ಮೊಮ್ಮಗನಿಗೆ ಹಕ್ಕಿಲ್ಲ: ಸುಪ್ರೀಂ

● ವಿಕ್ರಮ ವಾಹಿನಿ । ನವದೆಹಲಿ

ಅಜ್ಜನಿಗಿದ್ದ ಆಸ್ತಿಯ ವಿಭಜನೆಯ ನಂತರ ತಂದೆಗೆ ಉತ್ತರಾಧಿಕಾರವಾಗಿ ಬಂದ ಆ ಆಸ್ತಿಯ ಮೇಲೆ ಮೊಮ್ಮಗನಿಗೆ ಜನ್ಮತಃ ಹಕ್ಕಿರುವುದಿಲ್ಲ ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ. ಹಿಂದೂ ಉತ್ತರಾಧಿಕಾರ ಕಾಯಿದೆಯಡಿ ಇಂತಹ ಆಸ್ತಿ ಮಗನಿಗೆ ಅವನ ವೈಯಕ್ತಿಕ ಸಾಮರ್ಥ್ಯದಲ್ಲಿ ಸಿಗುವುದೇ ಹೊರತು, ಸ್ವಯಂಚಾಲಿತವಾಗಿ ಹಿಂದೂ ಅವಿಭಕ್ತ ಕುಟುಂಬದ ಆಸ್ತಿಯಾಗದು ಎಂದು ನ್ಯಾಯಾಲಯ ಐತಿಹಾಸಿಕ ತೀರ್ಪು ಕೊಟ್ಟಿದೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 211,